ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 81
12–9–2025 ಶುಕ್ರವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 81

## ಸಚಿವ ಎಸ್ಸೆಸ್ಸೆಂ, ಶಾಸಕ ಎಸ್ಸೆಸ್ ತೇಜೋವಧೆ, ಎಫ್ಐಆರ್ ದಾಖಲು

**ದಾವಣಗೆರೆ:** ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಆಡಿರುವ ಮಾತುಗಳ ತಿರುಚುವಿಕೆ ಹಾಗೂ ಶಾಸಕ ಶಾಮನೂರು ಶಿವಶಂಕರಪ್ಪರನ್ನು ಸಾಮಾಜಿಕ ಜಾಲತಾಣದಲ್ಲಿ ತೇಜೋವಧೆ ಮಾಡಿರುವ ಬೆನ್ನೇಲ್ಲೇ ಜಿಲ್ಲಾ ಪೊಲೀಸ್ ಸೈಬರ್ ಕ್ರೈಂ ಠಾಣೆ ಡಿವೈಎಸ್ಪಿ ಅವರಿಗೆ ದೂರು ನೀಡಲಾಗಿದ್ದು, ಎಫ್ಐಆರ್ ದಾಖಲಾಗಿದೆ.

ಕಾಂಗ್ರೆಸ್ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ, ಸಚಿವ ಎಸ್. ಎಸ್. ಮಲ್ಲಿಕಾರ್ಜುನ್, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಅವಹೇಳನಕಾರಿ ತೇಜೋವಧೆ ಮಾಡಲಾಗಿದೆ.

## ಇಂದು ಒಂದು ದಿನದ ವಿಶೇಷ ತರಬೇತಿ ಶಿಬಿರ

**ದಾವಣಗೆರೆ:** ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ ಬೆಂಗಳೂರು, ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ, ಸಹಕಾರ ಇಲಾಖೆ ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ದಾವಣಗೆರೆ ಜಿಲ್ಲೆಯ ಪತ್ತಿನ ಸಹಕಾರ ಸಂಘಗಳು ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕುಗಳು ಹಾಗೂ ತಾಲೂಕು ವ್ಯವಸಾಯ ಉತ್ಪನ್ನ ಮಾರಾಟ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ವ್ಯವಸ್ಥಾಪಕರುಗಳಿಗೆ ಒಂದು ದಿನದ ವಿಶೇಷ ತರಬೇತಿ ಶಿಬಿರವನ್ನು ಸೆ.12ರಂದು ಬೆಳಗ್ಗೆ 11 ಗಂಟೆಗೆ ನಗರದ ಜನತಾ ಬಜಾರ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಹಕಾರ ರತ್ನ ಪುರಸ್ಕೃತ ಡಾ ಜೆ ಆರ್ ಷಣ್ಮುಖಪ್ಪ ಕಾರ್ಯಕ್ರಮ ಉದ್ಘಾಟಿಸಲಿದ್ದು, ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತದ ಅಧ್ಯಕ್ಷ ಸಿರಿಗೆರೆ ರಾಜಣ್ಣ ಅಧ್ಯಕ್ಷತೆ ವಹಿಸಲಿದ್ದಾರೆ. ಕರ್ನಾಟಕ ರಾಜ್ಯ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ನಿಯಮಿತದ ನಿರ್ದೇಶಕರಾದ ಶೋಭಾ ಉಮೇಶ, ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತದ ಉಪಾಧ್ಯಕ್ಷರಾದ ಹೆಚ್. ಜಿ ಮಂಜುಳಾ ಗಣೇಶಪ್ಪ, ಸಹಕಾರ ರತ್ನ ಪುರಸ್ಕೃತ ಆರ್ ಜಿ ಶ್ರೀನಿವಾಸಮೂರ್ತಿ, ದಾವಣಗೆರೆ ಜಿಲ್ಲಾ ಸಹಕಾರಿ ಒಕ್ಕೂಟ ನಿಯಮಿತದ ನಿರ್ದೇಶಕ ಕೆ.ಜಿ ಸುರೇಶ, ಹೆಚ್ ಆರ್ ಸಿದ್ದೇಶ, ಈ. ಬಸವರಾಜ, ಟಿ. ಮಧು ಶ್ರೀನಿವಾಸ, ಡಾ. ಕೆ ಮಹೇಶ್ವರಪ್ಪ ಸೇರಿದಂತೆ ಮತ್ತು ಪಾಲ್ಗೊಳ್ಳಲಿದ್ದಾರೆ.

## ಜಾತಿ ಕಾಲಂನಲ್ಲಿ ಹೆಳವ ಎಂದು ಬರೆಸಲು ಮನವಿ

**ದಾವಣಗೆರೆ:** ಸರ್ಕಾರದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಇದೇ ಸೆ.22ರಂದು ನಡೆಸುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಜಾತಿ ಸಮೀಕ್ಷೆಯಲ್ಲಿ ಹೆಳವ ಸಮುದಾಯದವರು ಜಾತಿ ಕಾಲಂನಲ್ಲಿ ಹೆಳವ ಎಂದು ಮತ್ತು ಕೆಲವು ಜಿಲ್ಲೆಗಳಲ್ಲಿ ಪಿಚಗುಂಟಲ ಎಂದಿರುವುದರಿಂದ ಇದ್ದು, ಪಿಚಗುಂಟಲ ಎಂದು ಬರೆಯಿಸಿ ಎಂದು ಕರ್ನಾಟಕ ಹೆಳವ ಜನಾಂಗ ಸಂಘ ತಿಳಿಸಿದೆ.

ಕುಲಕಸುಬು ಕೇಳಿದಲ್ಲಿ ವಂಶಾವಳಿ ಹೇಳುವವರು ಎಂದು ಮತ್ತು ಧರ್ಮದ ಕಾಲಂನಲ್ಲಿ ಹಿಂದೂ ಎಂದು ಬರೆಯಿಸಿ. ಒಂದು ವೇಳೆ ಹೆಳವ ಲಿಂಗಾಯಿತ ಅಥವಾ ಬೇರೆ ಹೆಸರಲ್ಲಿ ಜಾತಿಯ ಹೆಸರನ್ನು ಬರೆಯಿಸಿದರೆ, ರೈತರಿಗೆ ಗಂಗಾ ಕಲ್ಯಾಣ ಯೋಜನೆ, ಶಾಲಾ ಮಕ್ಕಳಿಗೆ ವಿದ್ಯಾರ್ಥಿ ವೇತನ, ವಿದ್ಯಾರ್ಥಿ ನಿಲಯದ ವ್ಯವಸ್ಥೆ, ಸ್ವ–ಉದ್ಯೋಗಕ್ಕೆ ಸರ್ಕಾರದ ಸಹಾಯಧನ, ಸರ್ಕಾರಿ ಉದ್ಯೋಗ ಹೀಗೆ ಸರ್ಕಾರದ ಯಾವ ಸವಲತ್ತುಗಳು ಸಿಗುವುದಿಲ್ಲ ಎಂದು ಸಂಘದ ಜಿಲ್ಲಾ ಕಾರ್ಯದರ್ಶಿ ಸಿ. ವಾಸುದೇವ ಪತ್ರಿಕಾಹೇಳಿಕೆಯಲ್ಲಿ ತಿಳಿಸಿದ್ದಾರೆ.

## ಸೆ.13 ರಂದು ರೈತ ಹುತಾತ್ಮರ ದಿನಾಚರಣೆ


**ದಾವಣಗೆರೆ.ಸೆ.11:** ರೈತ ಹುತಾತ್ಮರ ಸ್ಮರಣಾರ್ಥ ಸಮಿತಿ ವತಿಯಿಂದ ಸೆ.13 ರಂದು ಆನಗೋಡು ಹತ್ತಿರದ ಉಳಪನಕಟ್ಟೆ ಕ್ರಾಸ್‌ನಲ್ಲಿನ ಹುತಾತ್ಮರಾದ ರೈತ ಓಬೇನಹಳ್ಳಿ ಕಲ್ಲಿಂಗಪ್ಪ ಮತ್ತು ಸಿದ್ದನೂರು ನಾಗರಾಜಚಾರ್ ಅವರ ಸಮಾಧಿ ಬಳಿ 33ನೇ ವರ್ಷದ ರೈತ ಹುತಾತ್ಮರ ದಿನಾಚರಣೆ ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿ ಅಧ್ಯಕ್ಷ ಎನ್.ಜಿ.ಪುಟ್ಟಸ್ವಾಮಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಮಧ್ಯಾಹ್ನ 12 ಗಂಟೆಗೆ ತಮ್ಮ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ನಡೆಯಲಿದ್ದು, ಮುಖ್ಯ ಅತಿಥಿಗಳಾಗಿ ಜಿಲ್ಲಾಮಂತ್ರಿ ಎಸ್. ಎಸ್.ಮಲ್ಲಿಕಾರ್ಜುನ್, ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್, ತಾಂಡ ಅಭಿವೃದ್ಧಿ ನಿಗಮದ ಅಧ್ಯಕ್ಷ ಎನ್.ಜಯದೇವನಾಯ್ಕ, ಶಾಸಕ ಬಸವಂತಪ್ಪ, ಗಣ್ಯರಾದ ಶಾಮನೂರು ಟಿ.ಬಸವರಾಜ್, ಜಿ.ಆರ್.ನಿರ್ಮಲ, ಡಿ.ಕಲ್ಲೇಶ್, ಹೆಚ್.ನಂಜುಂಡಪ್ಪ ಆಗಮಿಸಲಿದ್ದಾರೆ ಎಂದರು.

ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಎಸ್ಪಿ ಉಮಾ ಪ್ರಶಾಂತ್, ಜಿ.ಪಂ. ಸಿಇಒ ಗಿತ್ತೆ ಮಾಧವ ವಿಠ್ಠಲರಾವ್, ಜಿ.ಪಂ. ಉಪ ಕಾರ್ಯದರ್ಶಿ ಮಮತ ಹೊಸಗೌಡರ್, ಎಸಿ ಸಂತೋಷ್ ಕುಮಾರ್, ತಹಶೀಲ್ದಾರ್ ಡಾ.ಅಶ್ವಥ್, ಇಒ ರಾಮಭೋವಿ ಆಗಮಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

## ವರದಕ್ಷಿಣೆ ಕಿರುಕುಳ ಆರೋಪ ಸತ್ಯಕ್ಕೆ ದೂರ : ಎಸ್.ನಾರಾಯಣ್ ಸ್ಪಷ್ಟನೆ

**ಬೆಂಗಳೂರು,ಸೆ.11**–ತಮ್ಮ ಮೇಲೆ ಬಂದಿರುವ ವರದಕ್ಷಿಣೆ



ಕಿರುಕುಳ ಆರೋಪವನ್ನು ನಟ, ನಿರ್ದೇಶಕ ಎಸ್. ನಾರಾಯಣ್ ತಳ್ಳಿ ಹಾಕಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನನ್ನ ಸೊಸೆ ಮನೆಬಿಟ್ಟು ಹೋಗಿ 14 ತಿಂಗಳಾಗಿವೆ. ಮನೆ ಬಿಟ್ಟು ಹೋದ ಕೂಡಲೇ ದೂರು ಕೊಡಬಹುದಿತ್ತಲ್ಲ. ಯಾಕೆ ಇಷ್ಟು ತಡ ಮಾಡಿದರು ಎಂದು ಪ್ರಶ್ನಿಸಿದರು.

## ಸಾಹಸಸಿಂಹ ವಿಷ್ಣುವರ್ಧನ್, ಸರೋಜಾದೇವಿಗೆ ಮರಣೋತ್ತರ 'ಕರ್ನಾಟಕ ರತ್ನ' ಪ್ರಶಸ್ತಿ ಘೋಷಣೆ

**ಬೆಂಗಳೂರು:** ವಿಷ್ಣು ಅಭಿಮಾನಿಗಳ ದಶಕಗಳ ಬೇಡಿಕೆ ಫಲಿಸಿದ್ದು ರಾಜ್ಯ ಸರ್ಕಾರ ಸಾಹಸಸಿಂಹ ವಿಷ್ಣುವರ್ಧನ್ ಹಾಗೂ ಹಿರಿಯ ನಟಿ ಸರೋಜಾದೇವಿಗೆ ಮರಣೋತ್ತರ ಕರ್ನಾಟಕ ರತ್ನ ಪ್ರಶಸ್ತಿ ಘೋಷಿಸಿದೆ.



ನಟರಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡುವ ಬಗ್ಗೆ ಇಂದಿನ ಸಂಪುಟ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಯಿತು. ಇನ್ನು ಪ್ರಶಸ್ತಿಯನ್ನು ಯಾವಾಗ, ಎಲ್ಲಿ ಪ್ರದಾನ ಮಾಡಬೇಕೆಂದು ಮುಂದೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ಧರಿಸಲಿದೆ. ಇಂದಿನ ಸಂಪುಟ ಸಭೆಯಲ್ಲಿ ರಾಷ್ಟ್ರಕವಿ ಕುವೆಂಪು ಅವರಿಗೆ ಭಾರತ ರತ್ನ ನೀಡಬೇಕೆಂದು ಕೇಂದ್ರಕ್ಕೆ ಪತ್ರ ಕಳುಹಿಸಲು ನಿರ್ಣಯ ಅಂಗೀಕರಿಸಲಾಯಿತು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವ ಎಚ್ ಕೆ ಪಾಟೀಲ್ ತಿಳಿಸಿದ್ದಾರೆ.

ಇತ್ತೀಚೆಗಷ್ಟೇ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿದ್ದ ಹಿರಿಯ ನಟಿ ಭಾರತಿ ವಿಷ್ಣುವರ್ಧನ್, ಅನಿರುದ್ಧ್ ಅವರು ಮನವಿ ಮಾಡಿಕೊಂಡಿದ್ದರು. ಅಲ್ಲದೇ, ಕನ್ನಡ ಚಿತ್ರರಂಗದ ಹಿರಿಯ ನಟಿಯರಾದ ಜಯಮಾಲಾ, ಶ್ರುತಿ, ಮಾಳವಿಕಾ ಅವಿನಾಶ್ ಅವರು ಕೂಡ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ವಿಷ್ಣುವರ್ಧನ್ ಮತ್ತು ಬಿ. ಸರೋಜಾದೇವಿಗೆ ಮರಣೋತ್ತರವಾಗಿ 'ಕರ್ನಾಟಕ ರತ್ನ' ಪ್ರಶಸ್ತಿ ನೀಡಬೇಕು ಎಂದು ಮನವಿ ಮಾಡಿದ್ದರು.

1972ರಲ್ಲಿ ವಂಶವೃಕ್ಷ ಚಿತ್ರದಲ್ಲಿ ನಟಿಸಿದ್ದ ವಿಷ್ಣುವರ್ಧನ್ ಅವರು ಅದೇ ವರ್ಷ ಬಿಡುಗಡೆಯಾಗಿದ್ದ ದಿಗ್ಗಜ ನಿರ್ದೇಶಕ ಪುಟ್ಟಣ್ಣ ಕಣಗಾಲ್ ನಿರ್ದೇಶನದ 'ನಾಗರಹಾವು' ಚಿತ್ರದ ಮೂಲಕ ಪೂರ್ಣ ಪ್ರಮಾಣದ ನಾಯಕ ನಟನಾಗಿ ಕಾಣಿಸಿಕೊಂಡರು. ಈ ಚಿತ್ರ ಬ್ಲಾಕ್ ಬಸ್ಟರ್ ಚಿತ್ರವಾಗಿದ್ದು ಮೊದಲ ಪ್ರಯತ್ನದಲ್ಲೇ ವಿಷ್ಣುವರ್ಧನ್ ದೊಡ್ಡ ಅಭಿಮಾನಿ ಬಳಗವನ್ನು ಸೃಷ್ಟಿಸಿಕೊಂಡರು. ಕನ್ನಡ ಸೇರಿದಂತೆ ತಮಿಳು, ತೆಲುಗು, ಮಲಯಾಳ, ಹಿಂದಿ ಭಾಷೆಗಳಲ್ಲಿ ಸುಮಾರು 220 ಸಿನಿಮಾಗಳಲ್ಲಿ ವಿಷ್ಣುವರ್ಧನ್ ನಟಿಸಿದ್ದಾರೆ. ಬೆಂಗಳೂರು ವಿಶ್ವವಿದ್ಯಾಲಯವು 2005ರಲ್ಲಿ ವಿಷ್ಣುವರ್ಧನ್ ಅವರಿಗೆ ಗೌರವ ಡಾಕ್ಟರೇಟ್ ಕೊಟ್ಟು ಗೌರವಿಸಿತ್ತು.

**ದಿವಂಗತ ಸರೋಜಾದೇವಿ ಹಿನ್ನಲೆ :** ಕನ್ನಡದ ಹಿರಿಯ ಚಲನಚಿತ್ರ ನಟಿಯರಲ್ಲಿ ಬಿ. ಸರೋಜಾದೇವಿ ಸಹ ಒಬ್ಬರು. ಒಂದು ಕಾಲದಲ್ಲಿ ಕನ್ನಡ ಬೆಳ್ಳಿತೆರೆಯಲ್ಲಿ ಬೆಳಗಿದ ಅಭಿನೇತ್ರಿ. ಕನ್ನಡ, ತಮಿಳು, ತೆಲುಗು ಮತ್ತು ಹಿಂದಿ ಚಿತ್ರಗಳಲ್ಲಿ ನಟಿಸಿರುವ ಭಾರತೀಯ ನಟಿಯಾಗಿ ಗುರುತಿಸಿಕೊಂಡರು. ಅವರು ಸುಮಾರು 200 ಚಿತ್ರಗಳಲ್ಲಿ ನಟಿಸಿದ್ದಾರೆ. ಕನ್ನಡದಲ್ಲಿ 'ಅಭಿನಯ ಸರಸ್ವತಿ' ಮತ್ತು ತಮಿಳಿನಲ್ಲಿ 'ಕನ್ನಡತು ಪೈಂಗಿಲಿ' (ಕನ್ನಡದ ಗಿಳಿ) ಎಂಬ ಉಪನಾಮಗಳಿಂದ ಕರೆಯಲಾಗುತ್ತದೆ.

ಸರೋಜಾದೇವಿ ಅವರು ಹಲವು ಪ್ರಶಸ್ತಿಗಳನ್ನು ಮುಡಿಗೇರಿ ಸಿಕೊಂಡಿದ್ದಾರೆ. ಭಾರತದ 60ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಭಾರತ ಸರ್ಕಾರ 2008ರ ಜೀವಮಾನ ಸಾಧನೆ ಪ್ರಶಸ್ತಿ ನೀಡಿತ್ತು. ಇನ್ನು 1992ರಲ್ಲಿ 'ಪದ್ಮಭೂಷಣ ಪ್ರಶಸ್ತಿ' ಮತ್ತು 1969ರಲ್ಲಿ ಪದ್ಮಶ್ರೀ ಪಡೆದಿದ್ದರು.

### ಮಹಿಳೆ ಮೇಲೆ ಹಲ್ಲೆ; ಬಿಎಂಟಿಸಿ ಡ್ರೈವರ್ ತಾತ್ಕಾಲಿಕ ವಜಾ

## ಮುತ್ತಿಕ್ಕುವಂತೆ ಪೀಡಿಸಿದ ಚಾಲಕ ಆರೀಫ್‌ಗೆ ಧರ್ಮದೇಟು



**ಬೆಂಗಳೂರು:** ಬೆಂಗಳೂರಿನಲ್ಲಿ ಮಹಿಳೆ ಮೇಲೆ ಹಲ್ಲೆ ನಡೆಸಿದ್ದ ಆರೋಪದ ಹಿನ್ನೆಲೆಯಲ್ಲಿ ಬಿಎಂಟಿಸಿ ಬಸ್ ಚಾಲಕ ರವಿ ಎಂಬಾತನನ್ನು ತಾತ್ಕಾಲಿಕವಾಗಿ ವಜಾ ಮಾಡಲಾಗಿದೆ. ಚಾಲಕ ಮತ್ತು ಮಹಿಳಾ ಪ್ರಯಾಣಿಕರ ನಡುವೆ ತೀವ್ರ ಜಗಳವಾಗಿದ್ದು ನಂತರ ಚಾಲಕ ಮಹಿಳೆ ಕಪಾಳಕ್ಕೆ ಹೊಡೆದಿದ್ದಾನೆ. ಈ ವಿಡಿಯೋ ಇದೀಗ ಸಖತ್ ವೈರಲ್ ಆಗಿದೆ. ಮೊದಲಿಗೆ ಮಹಿಳೆ ಚಾಲಕನ ಮೇಲೆ ಕೈ ಎತ್ತಿದ್ದಾಳೆ ಕೂಡಲೇ ಚಾಲಕ ತಡಮಾಡದೆ ಮಹಿಳೆಗೆ ಹೊಡೆದಿದ್ದಾನೆ. ಇದರಿಂದಾಗಿ ವಾತಾವರಣ ಉದ್ವಿಗ್ನಗೊಳ್ಳುತ್ತದೆ.

ಈ ಸಂಪೂರ್ಣ ಘಟನೆಯನ್ನು ಬಸ್‌ನ ಹೊರಗೆ ಇದ್ದ ವ್ಯಕ್ತಿಯೊಬ್ಬರು ಕ್ಯಾಮೆರಾದಲ್ಲಿ ರೆಕಾರ್ಡ್ ಮಾಡಿದ್ದಾರೆ. ಬಸ್‌ನ ಹೊರಗಿನಿಂದ ರೆಕಾರ್ಡ್ ಮಾಡಲಾದ ಈ ವೀಡಿಯೊದಲ್ಲಿ, ವಾಹನ ಸಂಖ್ಯೆ ಏಂ51ಂಏ4276 ಎಂದು ಬರೆಯಲಾಗಿದೆ. ವಿಡಿಯೋ ವೈರಲ್ ಆಗುತ್ತಿದ್ದಂತೆ ಬಿಎಂಟಿಸಿ ಇದನ್ನು ಗಂಭೀರವಾಗಿ ಪರಿಗಣಿಸಿದ್ದು ಚಾಲಕ ರವಿಯನ್ನು ತಾತ್ಕಾಲಿಕವಾಗಿ ವಜಾ ಮಾಡಿದೆ.

ಮತ್ತೊಂದೆಡೆ, ಖಾಸಗಿ ಬಸ್‌ನಲ್ಲಿ ಅಪ್ರಾಪ್ತ ಬಾಲಕಿಗೆ ಲೈಂಗಿಕ ಕಿರುಕುಳ ನೀಡಲಾಗಿದೆ ಎಂದು ವರದಿಯಾಗಿದೆ. ಹೈದರಾಬಾದ್‌ನಿಂದ ಬೆಂಗಳೂರಿಗೆ ಸ್ಲೀಪರ್ ಕೋಚ್ ಬಸ್‌ನಲ್ಲಿ ಬರುತ್ತಿದ್ದ ಅಪ್ರಾಪ್ತೆಗೆ ಚಾಲಕ ಲೈಂಗಿಕ ಕಿರುಕುಳ ನೀಡಿದ್ದಾನೆ ಎಂದು ಆರೋಪಿಸಿ ಬಾಲಕಿಯ ಕುಟುಂಬಸ್ಥರು ಬೆಂಗಳೂರಿನ ಚಾಲುಕ್ಯ ಸರ್ಕಲ್ ಬಳಿ ಬಸ್ ನಿಲ್ಲಿಸಿ ಚಾಲಕನಿಗೆ ಹಿಗ್ಗಾಮುಗ್ಗಾ ಥಳಿಸಿದ್ದಾರೆ. ಬಾಲಕಿ ಡ್ರೈವರ್ ಸೀಟ್ ಬಳಿ ತನ್ನ ಮೊಬೈಲ್ ಚಾರ್ಜ್ ಹಾಕಿದ್ದಳು.

ಮೊಬೈಲ್ ಹಿಂಪಡೆಯಲು ಹೋಗಿದ್ದಾಗ ಹೆಚ್ಚುವರಿ ಚಾಲಕ ಆರೀಫ್ ಬಾಲಕಿಗೆ ಮುತ್ತು ಕೊಡುವಂತೆ ಒತ್ತಾಯಿಸಿದ್ದಾನೆ. ಮುತ್ತು ಕೊಟ್ಟರೆ ಮಾತ್ರ ಮೊಬೈಲ್ ಕೊಡುತ್ತೇನೆ ಎಂದು ಆತ ಪೀಡಿಸಿದ್ದಾನೆ. ಕೊನೆಗೆ ಬಾಲಕಿ ಮೊಬೈಲ್ ತೆಗೆದುಕೊಂಡು ತನ್ನ ಅಣ್ಣನಿಗೆ ಕರೆ ಮಾಡಿ ನಡೆದ ಘಟನೆ ತಿಳಿಸಿದ್ದಾಳೆ. ಇದರಿಂದ ಆಕ್ರೋಶಗೊಂಡ ಪೋಷಕರು ಬಸ್ ಚಾಲುಕ್ಯ ಸರ್ಕಲ್ ಬಳಿ ಬರುತ್ತಿದ್ದಂತೆಯೇ ನಿಲ್ಲಿಸಿ ಚಾಲಕ ಆರೀಫ್ ನ ಬಟ್ಟೆ ಬಿಚ್ಚಿ ಹಿಗ್ಗಾಮುಗ್ಗಾ ಥಳಿಸಿದ್ದಾರೆ.

### ಕೈದಿಗಳಿಗೆ ಮಾದಕ ವಸ್ತುಗಳ ಪೂರೈಕೆ: ಪರಪ್ಪನ ಅಗ್ರಹಾರ ಜೈಲಿನ ವಾರ್ಡನ್ ಬಂಧನ

**ಬೆಂಗಳೂರು:** ಕಾರಾಗೃಹದಲ್ಲಿರುವ ವಿಚಾರಣಾಧೀನ ಹಾಗೂ ಸಜಾ ಕೈದಿಗಳಿಗೆ ಕದ್ದುಮುಚ್ಚಿ ಮೊಬೈಲ್ ಪೂರೈಕೆ ಸೇರಿದಂತೆ ಇತ್ತೀಚಿಗಿನ ನಟ ದರ್ಶನ್‌ಗೆ ದೊರಕುತ್ತಿದ್ದ ರಾಜಾತಿಥ್ಯ ವಿಚಾರವಾಗಿ ಪರಪ್ಪನ ಅಗ್ರಹಾರ ಸಾಕಷ್ಟು ಸುದ್ದಿಗೆ ಗ್ರಾಸವಾಗಿತ್ತು. ಇದೀಗ ಪರಪ್ಪನ ಅಗ್ರಹಾರ ಮತ್ತೆ ಸುದ್ದಿಯಲ್ಲಿದ್ದು ಜೈಲು ವಾರ್ಡನ್‌ನಿಂದಲೇ ಕೈದಿಗಳಿಗೆ ಮಾದಕ ವಸ್ತುಗಳ ಪೂರೈಕೆ ಮಾಡಲಾಗಿದೆ ಎಂಬುದು ಬಹಿರಂಗಗೊಂಡಿದೆ.

## ಮಾದಿಗ ಮಹಾಸಭಾದಿಂದ ಸೆ.13 ರಂದು ಒಳ ಮೀಸಲಾತಿ ವಿಜಯೋತ್ಸವ ಸಮಾರಂಭ

**ದಾವಣಗೆರೆ.ಸೆ.11:** ಪರಿಶಿಷ್ಟ ಜಾತಿಯಲ್ಲಿ ಎಡಗೈ ಮಾದಿಗ ಸಂಬಂಧಿತ ಜಾತಿಗಳಿಗೆ ಶೇ.6 ಒಳ ಮೀಸಲಾತಿ ಜಾರಿಗೊಳ್ಳುವ ಮೂಲಕ ನಾಲ್ಕು ದಶಕದ ಹೋರಾಟ ಯಶಸ್ವಿಯಾದ ಹಿನ್ನೆಲೆಯಲ್ಲಿ ಒಳ ಮೀಸಲಾತಿ ವಿಜಯೋತ್ಸವ ಸಮಾರಂಭವನ್ನು ಸೆ.13ರಂದು ಮಹಾನಗರ ಪಾಲಿಕೆ ಆವರಣದ ಶ್ರೀಮತಿ ರಾಧಮ್ಮ ಚನ್ನಗಿರಿ ರಂಗಪ್ಪ ಬಯಲು ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಮಾದಿಗ ಸಮಾಜದ ಮುಖಂಡ ಡಾ.ಹೆಚ್.ವಿಶ್ವನಾಥ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಸಮಾಜದ ಮುಖಂಡ, ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕುಲಸಚಿವ ಡಾ.ಹೆಚ್.ವಿಶ್ವನಾಥ ಮಾತನಾಡಿ, ಬೆಳಿಗ್ಗೆ 11 ಗಂಟೆಗೆ ನಡೆಯುವ ಕಾರ್ಯಕ್ರಮದಲ್ಲಿ ಶಾಸಕ ಡಾ.ಶಾಮನೂರು ಶಿವಶಂಕರಪ್ಪ, ಸಚಿವರಾದ ಕೆ.ಹೆಚ್.ಮುನಿಯಪ್ಪ, ಎಸ್.ಎಸ್.ಮಲ್ಲಿಕಾರ್ಜುನ, ಆರ್.ಬಿ.ತಿಮ್ಮಾಪುರ, ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಗೋವಿಂದ ಕಾರಜೋಳ, ಮಾಜಿ ಸಚಿವರಾದ ಹೆಚ್.ಆಂಜನೇಯ, ಎ.ನಾರಾಯಣಸ್ವಾಮಿ, ಅಲ್ಕೋಡ ಹನುಮಂತಪ್ಪ, ಶಾಸಕರಾದ ಕೆ.ಎಸ್.ಬಸವಂತಪ್ಪ, ಡಿ.ಜಿ.ಶಾಂತನಗೌಡ, ಬಿ.ದೇವೇಂದ್ರಪ್ಪ, ಬಸವರಾಜ ವಿ.ಶಿವಗಂಗಾ, ಬಿ.ಪಿ.ಹರೀಶ ಮತ್ತಿತರರು ಭಾಗವಹಿಸುವರು ಎಂದರು.

ವಿಜಯೋತ್ಸವದಲ್ಲಿ 4 ದಶಕದ ಹೋರಾಟದಲ್ಲಿ ಮಡಿದವರ ಸ್ಮರಣೆ, ಮಾದಿಗ ಸಮುದಾಯದ ಹೋರಾಟಗಾರರಿಗೆ ಗೌರವ ಸಮರ್ಪಿಸಲಾಗುವುದು. ದಲಿತ ಸಂಘಟನೆಗಳ ಮಹಾ ಒಕ್ಕೂಟ, ದಲಿತ ಸಂಘರ್ಷ ಸಮಿತಿಗಳು, ಮಾದಿಗ ಸಂಘಟನೆಗಳು ಹಾಗೂ ಪ್ರಗತಿಪರ ಚಿಂತಕರು, ಸಾಹಿತಿಗಳು ಹೆಚ್ಚಿನ ಸಂಖ್ಯೆಯಲ್ಲಿ ವಿಜಯೋತ್ಸವದಲ್ಲಿ ಭಾಗಿಯಾಗಬೇಕು. ಸುಮಾರು 10 ಸಾವಿರಕ್ಕೂ ಅಧಿಕ ಸಮಾಜ ಬಾಂಧವರು ವಿಜಯೋತ್ಸವಕ್ಕೆ ಸಾಕ್ಷಿಯಾಗಬೇಕು ಎಂದು ಅವರು ಮನವಿ ಮಾಡಿದರು.

## ಪುರುಷರಂತೆ ಮಹಿಳೆಯರು ಸರಿಸಮ ಕೆಲಸ ಮಾಡಿದರೆ ಮಾತ್ರ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಾಧ್ಯ




**ಹೊನ್ನಾಳಿ:** ಸಮಾಜ ಸಮತೋಲನವಾಗಿ ಇರಬೇಕಾದರೆ ಸ್ತ್ರೀಯರು ಪುರುಷರಂತೆ ಸರಿಸಮನಾಗಿ ಸೇವೆಯನ್ನು ಮಾಡಿದರೆ ಮಾತ್ರ ಸಾವಲಂಬಿ ಬದುಕು ಕಟ್ಟಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಶಿವಮೊಗ್ಗ ಜಿಲ್ಲಾ ಗಾಯಿತ್ರಿ ವಿಶ್ವಕರ್ಮ ಸಮಾಜದ ಮಹಿಳಾ ಅಧ್ಯಕ್ಷೆ ಭಾಗ್ಯಲಕ್ಷ್ಮಿ ಕೃಷ್ಣಮೂರ್ತಿ ಆಚಾರ್ ಹೇಳಿದರು. ಗುರುವಾರ ಪಟ್ಟಣದ ದುರ್ಗಿಗುಡಿ ಏಳನೇ ವೃತ್ತದಲ್ಲಿ ನಡೆದ ಜನ ಶಿಕ್ಷಣ ಸಂಸ್ಥಾನ ದಾವಣಗೆರೆ ಇವರ ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಹಾಗೂ ಗಾಯಿತ್ರಿ ಮಹಿಳ ಹೋಲಿಗೆ ತರಬೇತಿ ಸಂಸ್ಥೆ ಸಂಯುಕ್ತ ಆಶ್ರಯದಲ್ಲಿ ಹೋಲಿಗೆ ಕಲಿತ ಮಹಿಳೆಯರಿಗೆ ಪ್ರಮಾಣ ಪತ್ರ ವಿತರಿಸಿ ಮಾತನಾಡಿದರು. ಮಹಿಳೆಯರಿಗೆ ಸ್ವಾವಲಂಬಿ ಬದುಕಿಗಾಗಿ ಟೈಲರಿಂಗ್ ತರಬೇತಿ ಕೇಂದ್ರವನ್ನು ಕಳೆದ 20 ವರ್ಷಗಳ ಹಿಂದ ಸುಜಾತ ಪ್ರಕಾಶ್ ನವರು ಸ್ಥಾಪನೆ ಮಾಡಿದರು ಅಂದು ಆರಂಭವಾದ ಗಾಯತ್ರಿ ಮಹಿಳಾ ಹೊಲಿಗೆ ತರಬೇತಿ ಕೇಂದ್ರ ಇಲ್ಲಿಗೆ ಸಾವಿರಾರು ಮಹಿಳೆಯರಿಗೆ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಹಕಾರಿಯಾಗಿದೆ ಎಂದರು.

ಕಾರ್ಯಕ್ರಮವನ್ನು ಮಾಜಿ ಸಚಿವ ಎಂಪಿ ರೇಣುಕಾಚಾರ್ಯ ಉದ್ಘಾಟನೆ ಮಾಡಿ ಅಂದಿನ ಕಾಲದಲ್ಲಿ ಮನೆಯಲ್ಲಿ ಒಬ್ಬರು ದುಡಿದರೆ ಹತ್ತು ಜನರು ಜೀವನ ಸಾಗಿಸಬಹುದಾಗಿತ್ತು ಈಗಿನ ಕಾಲದಲ್ಲಿ 10 ಜನ ದುಡಿದರು ಸಾಕಾಗುವುದಿಲ್ಲ ಹಾಗಾಗಿ ಮಹಿಳೆಯರು ದುಡಿಯುವಂತ ಹಲವಾರು ಮಹಿಳೆಯರಿಗಾಗಿ ಅನೇಕ ವೃತ್ತಿಗಳು ಬಂದಿವೆ ಅದನ್ನು ನೀವು ಸದ್ದು ಉಪಯೋಗ ಪಡೆದುಕೊಳ್ಳಬೇಕು ಉದಾರಣೆಗೆ ಬ್ಯೂಟಿಷನ್ ಮನೆಯಲ್ಲಿ ರೊಟ್ಟಿ, ಚಕ್ಕಿ, ಹಪ್ಪಳ, ಅಣಬೆ ಬೇಸಾಯ, ಹೊಲಿಗೆ ತರಬೇತಿ ಪಡೆದು ಬಟ್ಟೆ ಹೊಲಿಯುವುದು ಇನ್ನೂ ಅನೇಕ ಕೆಲಸಗಳನ್ನು ಮಾಡಬಹುದು ಹೆಣ್ಣು ಮಕ್ಕಳು ಗಂಡಸರಿಗಿಂತಲೂ ಹೆಚ್ಚು ಹಣವನ್ನು ಸಂಪಾದನೆ ಮಾಡುವ ಕಸುಬುಗಳು ಬೇಕಾದಷ್ಟು ಇವೆ ಎಂದರು.

ಜನ ಶಿಕ್ಷಣ ಸಂಸ್ಥಾನದ ನಿರ್ದೇಶಕರಾದ ಶೈಲಜಾ ಮಾತನಾಡಿ, ಕೌಶಲ್ಯದಿಂದ ಶಕ್ತಿ ಶಕ್ತಿಯಿಂದ ಜ್ಞಾನದಿಂದ ಅಭಿವೃದ್ಧಿ ಹಾಗೂ ಜೀವನ ಅಭಿವೃದ್ಧಿ ಸಾರ್ಥಕವಾಗುತ್ತದೆ ಆರ್ಥಿಕ ಸಾಮಾಜಿಕವಾಗಿ ವೈಯಕ್ತಿಕವಾಗಿ ಸಮಾಜ ಬೆಳೆಯಲು ಸಾಧ್ಯ ಪುರುಷರಿಗಿಂತ ಈಗ ಮಹಿಳೆಯರು ಎಲ್ಲಾ ರಂಗಗಳಲ್ಲಿ ಮೇಲುಗೈ ಸಾಧಿಸುತ್ತಿದ್ದಾರೆ, ಎಲ್ಲಾ ಹೆಣ್ಣು ಮಕ್ಕಳು ಸ್ವಾವಲಂಬಿಗಳಾಗಿ ಆರ್ಥಿಕ ಪ್ರಗತಿ ಸಾಧಿಸಬೇಕು ತರಬೇತಿ ಪಡೆದ ಎಲ್ಲಾ ಮಹಿಳೆಯರಿಗೂ ಸ್ಕಿಲ್ ಇಂಡಿಯಾ ದೆಹಲಿ ಸಂಸ್ಥೆಯಿಂದ ಇವರಿಂದ ಶಿಕ್ಷಣಾರ್ಥಿಗಳಿಗೆ ತರಬೇತಿಯನ್ನು ಪಡೆದಂತ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರವನ್ನು ವಿತರಿಸಲಾಯಿತು.

## ಜಿಲ್ಲಾ ಬಿಜೆಪಿ ಸೇವಾ ಪ್ರಾಕ್ಷಿಕ ಅಭಿಯಾನ ಯಶಸ್ವಿ



**ಚಿಕ್ಕಮಗಳೂರು :** ಜಿಲ್ಲಾ ಬಿಜೆಪಿಯ ಸೇವಾ ಪ್ರಾಕ್ಷಿಕ ಅಭಿಯಾನ ಮತ್ತು ಕಾರ್ಯಾಗಾರ ಚಿಕ್ಕಮಗಳೂರಿನ ಜಿಲ್ಲಾ ಬಿಜೆಪಿ ಕಚೇರಿ ಪಾಂಚಜನ್ಯ ಕಚೇರಿಯಲ್ಲಿ ಗುರುವಾರ ನಡೆಯಿತು.

ಭಾರತ ಮಾತೆ ಫೋಟೋಗೆ ಪುಷ್ಪಾರ್ಚನೆ ಮಾಡುವ ಮೂಲಕ ಚಾಲನೆ ನೀಡಿದ ಡಾ. ಸಿ.ಟಿ. ರವಿ ಮಾತನಾಡಿ, ಸೇವೆ ಮಾಡುವ ಉದ್ದೇಶವೇ ಸೇವಾ ಪ್ರಾಕ್ಷಿಕ ಅಭಿಯಾನ. ವಿಶ್ವದ ನಾಲ್ಕನೇ ಶಕ್ತಿಯಾಗಿದ್ದೇವೆ. ಪರವಾಲಂಬಿಯಾಗಿಸುವ ಮೂಲಕ ದೇಶಕ್ಕೆ ಪೆಟ್ಟು ಕೊಡುವ ಯತ್ನ ನಡೆಯುತ್ತಿದೆ. ಅದನ್ನು ಜಾಗೃಯಿಂದ ಎದುರಿಸಬೇಕು.

ಸ್ವದೇಶಿ ವಸ್ತುಗಳಿಗೆ ಒತ್ತು, ಸ್ವಚ್ಛತಾ ಆಂದೋಲನದಲ್ಲಿ ಸಮಾಜವನ್ನು ತೊಡಗಿಸಬೇಕು. ನರೇಂದ್ರ ಮೋದಿಯವರ ಸಾಧನೆಗಳನ್ನು ಜನರಿಗೆ ತಿಳಿಸಬೇಕು.

ಕಾಂಗ್ರೆಸ್ ಗ್ಯಾರಂಟಿಗಳು ಜೀವನ ಪಂಕ್ಚರ್ ಮಾಡಿವೇ. ಜೊತೆಗೆ ಬ್ರಹ್ಮಾಂಡ ಸಾಲವನ್ನು ರಾಜ್ಯ ಸರ್ಕಾರ ಮಾಡಿರುವುದನ್ನು ಜನರಿಗೆ ತಿಳಿಸಬೇಕು. ಕೇಂದ್ರ ಸರ್ಕಾರದ ತೆರಿಗೆ ಕಡಿತಾದಿಂದಾಗಿರುವ ಲಾಭಗಳನ್ನು ಜನರಿಗೆ ತಿಳಿಸಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಬಿಜೆಪಿ ಅಧ್ಯಕ್ಷ ಎಂ.ಆರ್. ದೇವರಾಜಶೆಟ್ಟಿ ಮಾತನಾಡಿ, ಕೇಂದ್ರ ಸರ್ಕಾರದ ಜನಪರ ಕಾರ್ಯಕ್ರಮಗಳು ಮತ್ತು ರಾಜ್ಯ ಸರ್ಕಾರದ ಜನ ವಿರೋಧಿ ಕಾರ್ಯಕ್ರಮಗಳು, ನೀತಿಗಳನ್ನು ಪ್ರತಿ ಮನೆಗೆ ಮುಟ್ಟಿಸುವ ಕೆಲಸಗಳನ್ನು ಪಕ್ಷದ ಪ್ರತಿಯೊಬ್ಬರೂ ಮಾಡಬೇಕು ಎಂದು ತಿಳಿಸಿದರು.

ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿಗಳಾದ ರವೀಂದ್ರ ಬೆಳವಾಡಿ, ಪುಣ್ಯಪಾಲ್, ಬಿಜೆಪಿ ರಾಜ್ಯ ಒಬಿಸಿ ಕಾರ್ಯದರ್ಶಿ ಬಿ. ರಾಜಪ್ಪ, ಜಿಲ್ಲಾ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಸಂತೋಷ್ ಕೋಟಿಯಾನ್, ಮುಖಂಡ ವೇನಿಲ್ಲಾ ಭಾಸ್ಕರ್, ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಮುಗುಳುವಳ್ಳಿ ದಿನೇಶ್, ರಾಜೇಶ್ವರಿ ಉಪಸ್ಥಿತರಿದ್ದರು.

## ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್‌ರನ್ನು ಕೈಬಿಡಲು ಮನವಿ



**ದಾವಣಗೆರೆ:** ದಸರಾ ಉದ್ಘಾಟನೆಗೆ ಬಾನು ಮುಸ್ತಾಕ್ ಅವರನ್ನು ಆಹ್ವಾನಿಸಿರುವ ಸರ್ಕಾರ ಕೂಡಲೇ ನಿರ್ಧಾರ ಕೈಬಿಟ್ಟು, ಬಹುಸಂಖ್ಯಾತರ ಭಾವನೆಗಳನ್ನು ಕೆರಳಿಸಿರುವ ಮುಖ್ಯಮಂತ್ರಿಗಳು ರಾಜ್ಯದ ಜನರ ಕ್ಷಮೆಯಾಚಿಸಬೇಕೆಂದು ಒತ್ತಾಯಿಸಿ ಯುವ ಬ್ರಿಗೇಡ್ ಕಾರ್ಯಕರ್ತರು ಅಪರ ಜಿಲ್ಲಾಧಿಕಾರಿ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ದಸರಾ ಹಬ್ಬ ನಮ್ಮ ಸಂಸ್ಕೃತಿ ಮತ್ತು ನಮ್ಮ ನಂಬಿಕೆಯ ಗುರುತು. ನಮ್ಮ ಪರಂಪರೆಯ ಪ್ರತೀಕವಾದ ದಸರಾ ಹಬ್ಬದಲ್ಲೂ ರಾಜಕೀಯ ತಂದು, ಹಿಂದೂಗಳ ಭಾವನೆಗೆ ಧಕ್ಕೆ ತರುವ ಹಕ್ಕು ಯಾರಿಗೂ ಇಲ್ಲ. ಆದರೆ ಮುಖ್ಯಮಂತ್ರಿಗಳ ನೇತೃತ್ವದ ರಾಜ್ಯ ಸರ್ಕಾರವು ಜನರ ಭಾವನೆ ಮತ್ತು ನಾಡಿನ ಪರಂಪರೆಯನ್ನು ಲೆಕ್ಕಿಸದೇ, ಹಿಂದೂಗಳ ಶ್ರದ್ಧಾ ಭಾವನೆಯನ್ನು ಒಪ್ಪದ ಗೌರವಿಸದ ಬಾನು ಮುಷ್ತಾಕ್ ಅವರನ್ನು ದಸರಾ ಉದ್ಘಾಟನೆಗೆ ಆಹ್ವಾನಿಸುವ ಮೂಲಕ ನೇರವಾಗಿ ಜನರ ಹೃದಯಕ್ಕೆ ಹೊಡೆತ ಕೊಟ್ಟಿದೆ. ಸರ್ಕಾರದ ಈ ನಿರ್ಧಾರವನ್ನು ನಾವು ಸಹಿಸುವುದಿಲ್ಲ ಎಂದು ಕಾರ್ಯಕರ್ತರು ಇದೇ ವೇಳೆ ಅಸಮಾಧಾನ ವ್ಯಕ್ತಪಡಿಸಿದರು.

ಸರ್ಕಾರದ ದುರಾಲೋಚನೆಯ ಈ ನಿರ್ಧಾರ ಜನರ ಕೋಪಕ್ಕೆ ಗುರಿಯಾಗಿದ್ದು, ಸಾರ್ವಜನಿಕರು ಬೀದಿಗಿಳಿದು ಪ್ರತಿಭಟಿಸಿ ಅನ್ಯಾಯದ ವಿರುದ್ಧ ಹೋರಾಡಲು ಸಜ್ಜಾಗಿದ್ದಾರೆ. ಆದ್ದರಿಂದ ರಾಜ್ಯ ಸರ್ಕಾರವು ತಕ್ಷಣ ತನ್ನ ನಿರ್ಧಾರವನ್ನು ಹಿಂಪಡೆಯಬೇಕು. ಇಲ್ಲದಿದ್ದರೆ ರಾಜ್ಯವ್ಯಾಪಿ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಆದ್ದರಿಂದ ರಾಜ್ಯಪಾಲರು ತಕ್ಷಣ ಮಧ್ಯಪ್ರವೇಶಿಸಿ ಕರ್ನಾಟಕದ ಸಂಸ್ಕೃತಿಯ ಹಬ್ಬವನ್ನು ರಾಜಕೀಯ ಹಸ್ತಕ್ಷೇಪದಿಂದ ಮುಕ್ತಗೊಳಿಸಬೇಕೆಂದು ಒತ್ತಾಯಿಸಿದರು.

ಯುವ ಬ್ರಿಗೇಡ್ ಜಿಲ್ಲಾ ಸಂಚಾಲಕ ಹೆಚ್.ಕೆ. ಗಣೇಶ ಕುಮಾರ್, ಕೆ.ಸಿ. ಹೇಮಾವತಿ, ಹೊಸಕೇರಿ ಶಿವಕುಮಾರ್, ಅರುಂಧತಿ, ಎಂ.ಆರ್. ರೂಪಶ್ರೀ, ವಿದ್ಯಾಲಕ್ಷ್ಮೀ, ಶ್ರೀನಿವಾಸ್ ಭಟ್, ಆನಂದತೀರ್ಥಾಚಾರ್ ಸೇರಿದಂತೆ ಮತ್ತಿತರರು ಇದ್ದರು.

## ಶಾಸಕ ಸಂಗಮೇಶ್ ತಡಮಾಡದೇ ಇಸ್ಲಾಂಗೆ ಮತಾಂತರವಾಗಲಿ: ಬಿವೈವಿ

**ಬೆಂಗಳೂರು,ಸೆ.10 :** ಮುಂದಿನ ಜನ್ಮದಲ್ಲಿ ಮುಸ್ಲಿಮನಾಗಿ ಹುಟ್ಟುತ್ತೇನೆಂದು ಹೇಳಿರುವ ಭದ್ರಾವತಿ ಶಾಸಕ ಬಿ.ಕೆ.ಸಂಗಮೇಶ್ ತಡಮಾಡದೇ ಮುಸ್ಲಿಂ ಧರ್ಮಕ್ಕೆ ಮತಾಂತರವಾಗಲಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸವಾಲು ಹಾಕಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿ.ಕೆ.ಸಂಗಮೇಶ್, ಈ ಜನದಲ್ಲಿ ಹಿಂದೂವಾಗಿ ಹುಟ್ಟಿದ್ದಾರೆ. ಮೊದಲು ಹುಟ್ಟಿರುವ ಧರ್ಮದ ಋಣ ತೀರಿಸುವ ಕೆಲಸ ಮಾಡಲಿ. ನಂತರ ಮುಸ್ಲಿಂ ಆಗಿ ಹುಟ್ಟುವ ಮಾತನಾಡಲಿ ಎಂದು ತಿರುಗೇಟು ನೀಡಿದರು.



**ವಿಜಯಕರ್ನಾಟಕ ಚನ್ನಗಿರಿ ವರದಿಗಾರ ಸತೀಶ್ ಪವಾರ್ ಅವರಿಗೆ, ಕನ್ನಡ ಭಾರತಿ ಪತ್ರಿಕೆ ಬಳಗದಿಂದ ಹುಟ್ಟು ಹಬ್ಬದ ಶುಭಾಶಯಗಳು.**

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಇಂದು ನಿಮ್ಮನ್ನು ಆವರಿಸುವ ಭಾವನಾತ್ಮಕ ಮನಸ್ಥಿತಿಯಿಂದ ನೀವು ಹೊರಬರಲು ಬಯಸಿದರೆ ಹಿಂದಿನದ್ದೆಲ್ಲವನ್ನೂ ಮರೆತುಬಿಡಬೇಕು. ಜೀವನ ಸಂಗಾತಿಯೊಂದಿಗೆ ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯದ ಬಗ್ಗೆ ಜಗಳವಾಗುವ ಸಾಧ್ಯತೆ ಇದೆ. ಇಂದು ನಿಮ್ಮ ದುಂದುಗಾರಿಕೆಯ ಮೇಲೆ ನಿಮ್ಮ ಸಂಗಾತಿ ನಿಮಗೆ ಮಾತುಗಳು ಹೇಳಬಹುದು. ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮ ಸುತ್ತಮುತ್ತಲಿನ ಪರಿಸರವನ್ನು ಬೆಳಗಿಸುತ್ತದೆ. ಇಂದು ಪ್ರಣಯದ ಯಾವುದೇ ಆಸೆಯಿಲ್ಲ ನಿಮ್ಮ ಬಾಸ್ ಇಂದು ನಿಮ್ಮ ಕೆಲಸವನ್ನು ಪ್ರಶಂಸಿಸಬಹುದು.

### ವೃಷಭ ರಾಶಿ

ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ರಿಯಲ್ ಎಸ್ಟೇಟ್ ನಲ್ಲಿ ಹೂಡಿಕೆ ಲಾಭದಾಯಕವಾಗಬಹುದು. ಪ್ರೀತಿ ಸಾಂಗತ್ಯ ಮತ್ತು ಬಂಧ ಏರಿಕೆಯಲ್ಲಿರುತ್ತವೆ. ನಿಮ್ಮ ಪ್ರೀತಿಪಾತ್ರರು ನಿಮ್ಮನ್ನು ಸಂತೋಷವಾಗಿರಿಸಲು ಕೆಲಸಗಳನ್ನು ಮಾಡುತ್ತಾರೆ. ಇಂದು, ನಿಮ್ಮ ಬಾಸ್ ಯಾವಾಗಲೂ ನಿಮ್ಮೊಂದಿಗೆ ಏಕೆ ಒರಟಾಗಿ ನಡೆದುಕೊಳ್ಳುತ್ತಾರೆನ್ನುವ ಸತ್ಯ ನಿಮಗೆ ತಿಳಿಯುತ್ತದೆ.

### ಮಿಥುನ ರಾಶಿ

ತೊಂದರೆಯಲ್ಲಿರುವ ಯಾರಿಗಾದರೂ ಸಹಾಯ ಮಾಡಲು ನಿಮ್ಮ ಚೈತನ್ಯವನ್ನು ಬಳಸಿ. ಲೋಕೋಪಕಾರಕ್ಕಾಗಲ್ಲದಿದ್ದಲ್ಲಿ ಈ ನಶ್ವರ ದೇಹದ ಉಪಯೋಗವಾದರೂ ಏನು. ನೀವು ಜನರು ನಿಮ್ಮಿಂದ ಏನು ಬಯಸುತ್ತಾರೆಂದು ನಿಖರವಾಗಿ ತಿಳಿದಿರುವಂತೆ ತೋರುತ್ತದೆ –ಆದರೆ ಇಂದು ನಿಮ್ಮ ಖರ್ಚುಗಳಲ್ಲಿ ತುಂಬಾ ಉದಾರಿಯಾಗದಿರಲು ಪ್ರಯತ್ನಿಸಿ. ಆರೋಗ್ಯ ಚೆನ್ನಾಗಿಲ್ಲದ ಒಬ್ಬ ಸಂಬಂಧಿಯನ್ನು ಭೇಟಿ ಮಾಡಿ.

### ಕರ್ಕ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ನಿಮ್ಮ ಹೆಚ್ಚುವರಿ ಹಣವನ್ನು ಒಂದು ಸುರಕ್ಷಿತ ಸ್ಥಳದಲ್ಲಿರಿಸಿ ಹಾಗೂ ಇದು ಮುಂದಿನ ಕಾಲದಲ್ಲಿ ನಿಮಗೆ ಒಳ್ಳೆಯ ಆದಾಯ ತರುತ್ತದೆ. ನೀವು ಕುಟುಂಬದ ಸದಸ್ಯರ ಜೊತೆ ಸ್ವಲ್ಪ ತೊಂದರೆ ಹೊಂದಿದ್ದರೂ ಇದು ನಿಮ್ಮ ಮನಶ್ಶಾಂತಿಯನ್ನು ಹಾಳು ಮಾಡಲು ಅವಕಾಶ ನೀಡಬೇಡಿ.

### ಸಿಂಹ ರಾಶಿ

ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು. ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಜಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ.

### ಕನ್ಯಾ ರಾಶಿ

ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು. ಮಕ್ಕಳಿಂದ ಅನಿರೀಕ್ಷಿತ ಸುದ್ದಿ ಸಂತೋಷದ ಕ್ಷಣಗಳನ್ನು ತರುತ್ತದೆ. ಇಂದು ನಿಮ್ಮ ಕೆಟ್ಟ ಅಭ್ಯಾಸಗಳು ನಿಮ್ಮ ಪ್ರೇಮಿಗೆ ಕೆಟ್ಟ ಭಾವನೆ ಉಂಟುಮಾಡಬಹುದು ಮತ್ತು ಅವರು ನಿಮ್ಮ ಮೇಲೆ ಕೋಪಗೊಳ್ಳಬಹುದು. ಕಚೇರಿಯಲ್ಲಿ ಇಂದು ನೀವು ಪರಿಸ್ಥಿತಿಯನ್ನು ಅರ್ಥಮಾಡಿಕೊಂಡು ವರ್ತಿಸಬೇಕು.

### ತುಲಾ ರಾಶಿ

ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ವಿವಾಹಿತ ಜನರು ಇಂದು ತಮ್ಮ ಮಕ್ಕಳ ಶಿಕ್ಷಣದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಮನೆಯಲ್ಲಿ ಯಾವುದೇ ಬದಲಾವಣೆ ಮಾಡುವ ಮುನ್ನ ನಿಮ್ಮ ಹಿರಿಯರ ಸಲಹೆ ತೆಗೆದುಕೊಳ್ಳಿ ಇಲ್ಲವಾದರೆ ಅದು ಅವರಿಗೆ ಕೋಪ ಮತ್ತು ಅಸಮಾಧಾನವನ್ನು ತರಬಹುದು. ಪ್ರೀತಿ ಕೇವಲ ವಸಂತ; ಹೂಗಳು, ಗಾಳಿ, ಬಿಸಿಲು, ಚಿಟ್ಟೆಗಳು.

### ವೃಶ್ಚಿಕ ರಾಶಿ

ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ಇಂದು ವಿಫಲವಾಗಬಹುದು, ಹೇಗಾದರೂ, ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ, ಪರಿಸ್ಥಿತಿ ಶೀಘ್ರದಲ್ಲೇ ಸುಧಾರಿಸುತ್ತದೆ. ನಿಮ್ಮ ಬಿಡುವಿನ ವೇಳೆಯನ್ನು ನಿಮ್ಮ ಮನೆಯ ಸೌಂದರ್ಯ ಹೆಚ್ಚಿಸಲು ಬಳಸಿ. ನೀವು ಕುಟುಂಬಕ್ಕೆ ಇದರಿಂದ ಸಂತೋಷವಾಗುತ್ತದೆ. ಪ್ರಣಯದ ಅವಕಾಶಗಳಿವೆ – ಆದರೆ ಅವು ಕ್ಷಣಿಕವಾಗಿರುತ್ತವೆ.

### ಧನು ರಾಶಿ

ಒಬ್ಬ ಸಂತನಿಂದ ಆಧ್ಯಾತ್ಮಿಕ ಜ್ಞಾನ ಸಾಂತ್ವನ ಮತ್ತು ಆರಾಮವನ್ನು ಒದಗಿಸುತ್ತದೆ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ನಿಮ್ಮ ಕುಟುಂಬ ಸದಸ್ಯರು ಹೇಳಿದ್ದೆಲ್ಲವಕ್ಕೂ ನೀವು ಒಪ್ಪದಿರಬಹುದು – ಆದರೆ ನೀವು ಅವರ ಅನುಭವದಿಂದ ಕಲಿಯಲು ಪ್ರಯತ್ನಿಸಬೇಕು. ನಿಮ್ಮ ಪ್ರೀತಿಪಾತ್ರರ ಭಾವನೆಗಳನ್ನು ಇಂದು ಅರ್ಥಮಾಡಿಕೊಳ್ಳಿ.

### ಮಕರ ರಾಶಿ

ಆರೋಗ್ಯ ಪರಿಪೂರ್ಣವಾಗಿರುತ್ತದೆ. ನಿಧಿಗಳ ಹಠಾತ್ ಒಳಹರಿವು ನಿಮ್ಮ ಪಾವತಿಗಳು ಮತ್ತು ತಕ್ಷಣದ ವೆಚ್ಚಗಳನ್ನು ನೋಡಿಕೊಳ್ಳುತ್ತದೆ. ನಿಮ್ಮಲ್ಲಿ ಕೆಲವು ಆಭರಣ ಅಥವಾ ಗೃಹಬಳಕೆಯ ಸಾಧನಗಳನ್ನು ಖರೀದಿಸುವ ಸಾಧ್ಯತೆಗಳಿವೆ. ಸ್ನೇಹ ಕಳೆದುಕೊಳ್ಳುವ ಸಾಧ್ಯತೆಗಳು ಇಂದು ಹೆಚ್ಚಾಗಿರುವುದರಿಂದ ಎಚ್ಚರಿಕೆಯಿಂದಿರಿ. ನೀವು ಕೆಲಸದಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ ಮತ್ತು ಪ್ರಭಾವವನ್ನು ಬಳಸಬೇಕಾಗುತ್ತದೆ.

### ಕುಂಭ ರಾಶಿ

ಪ್ರೀತಿ, ಭರವಸೆ, ನಂಬಿಕೆ, ಸಹಾನುಭೂತಿ, ಆಶಾವಾದ ಮತ್ತು ನಿಷ್ಠೆಗಳಂಥ ಧನಾತ್ಮಕ ಭಾವನೆಗಳನ್ನು ಗ್ರಹಿಸಲು ಮನಸ್ಸನ್ನು ಪ್ರೋತ್ಸಾಹಿಸಿ. ಒಮ್ಮೆ ಈ ಭಾವನೆಗಳು ಸಂಪೂರ್ಣವಾಗಿ ಹತೋಟಿಗೆ ತೆಗೆದುಕೊಂಡ ನಂತರ ಮನಸ್ಸು ತಾನಾಗಿಯೇ ಪ್ರತಿ ಪರಿಸ್ಥಿತಿಗೂ ಧನಾತ್ಮಕವಾಗಿ ಪ್ರತಿಕ್ರಿಯಿಸುತ್ತದೆ. ಮನೆಯಲ್ಲಿ ಯಾವುದೇ ಕಾರ್ಯಕ್ರಮ ನಡೆಯುವ ಕಾರಣದಿಂದಾಗಿ ಇಂದು ನೀವು ನಿಮ್ಮ ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗುತ್ತದೆ, ಕಾರಣದಿಂದಾಗಿ ನಿಮ್ಮ ಆರ್ಥಿಕ ಪರಿಸ್ಥಿತಿ ಹದಗೆಡಬಹುದು.

### ಮೀನ ರಾಶಿ

ನಿಮ್ಮ ಮಗುವಿನ ಸಾಧನೆ ನಿಮಗೆ ಅಪಾರ ಸಂತೋಷ ನೀಡಬಹುದು. ಇಂದು ಮಾಡಿದ ಹೂಡಿಕೆ ನಿಮ್ಮ ಅಭ್ಯುದಯ ಮತ್ತು ಆರ್ಥಿಕ ಭದ್ರತೆಯನ್ನು ಹೆಚ್ಚಿಸುತ್ತದೆ. ಮಕ್ಕಳು ನಿಮಗೆ ಮನೆಕೆಲಸಗಳನ್ನು ಮಾಡಲು ಸಹಾಯ ಮಾಡುತ್ತಾರೆ. ನೀವು ಪ್ರಣಯದ ಮನೋಭಾವ ಹೊಂದಿರುತ್ತೀರಿ– ನೀವು ಮತ್ತು ನಿಮ್ಮ ಪ್ರೀತಿಪಾತ್ರರಿಗಾಗಿ ವಿಶೇಷ ಯೋಜನೆಗಳನ್ನು ಮಾಡಲು ಮರೆಯಬೇಡಿ.

# ವ್ಯವಹಾರ ಸಾಮಾಜಿಕ ಕಾಳಜಿಯೊಂದಿಗೆ ಮುಂದುವರಿದರೆ ಸಮೃದ್ಧಿಯಾಗುತ್ತದೆ



**ದಾವಣಗೆರೆ:** ಮಾನವನ ಜೀವನಕ್ಕೆ ಮಾನವೀಯ ಮೌಲ್ಯದೊಂದಿಗೆ ತೊಡಗಿಸಿಕೊಂಡರೆ ಹೊಟ್ಟೆ ಪಾಡು ಸಾರ್ಥಕವಾಗುತ್ತದೆ. ವ್ಯವಹಾರಕ್ಕೆ ಸಾಮಾಜಿಕ ಕಾಳಜಿಯೊಂದಿಗೆ ಮುಂದುವರಿದರೆ ಸಮೃದ್ಧಿಯಾಗುತ್ತದೆ. ವಾಣಿಜ್ಯ ನಗರಿಗೆ ನಾಲ್ಕು ದಶಕಗಳಿಂದ ಕರಾವಳಿಯ ಅಪ್ಪಟ ಕನ್ನಡ ಆರಾಧನೆಯ ಕಲೆ ಯಕ್ಷಗಾನವನ್ನು ಪರಿಚಯಿಸಿದ್ದು ಶೆಣೈಯವರು ಎಂದು ಹರಿಹರ–ದಾವಣಗೆರೆ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ.ಶೆಟ್ಟಿಯವರು ತಮ್ಮ ಅಂತರಾಳದ ಅನಿಸಿಕೆ ಹಂಚಿಕೊಂಡರು.

ದಾವಣಗೆರೆಯ ಎ.ವಿ.ಕೆ. ಕಾಲೇಜ್ ರಸ್ತೆಯಲ್ಲಿರುವ ಚೇತನಾ ಹೋಟೆಲ್ ಸಭಾಂಗಣದಲ್ಲಿ ತಾರಿವಾಳ ಗ್ಲೋಬಲ್ ಗೋಲ್ಡ್ ಸಂಸ್ಥೆಯನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಸಂಸ್ಥೆಯ ಸಂಸ್ಥಾಪಕರಾದ ರಾಜೇಶ್ ಸುವರ್ಣ ಪ್ರಾಸ್ತಾವಿಕವಾಗಿ ಮಾತನಾಡಿ ಸಾರ್ವಜನಿಕವಾಗಿ ಎಲ್ಲರೂ ಸಹಕಾರ, ಸಹಯೋಗ ಇದ್ದರೆ ನಮ್ಮ ನಿಮ್ಮೆಲ್ಲರ ಈ ಸಂಸ್ಥೆ ಮುಂದುವರಿಯುತ್ತದೆ ಎಂದರು. ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ ಕೊಪ್ಪಳ ಜಿಲ್ಲೆಯ ಕುಷ್ಟಗಿಯ ತಾರಿವಾಳ ಗ್ಲೋಬಲ್ ಸಮೂಹದ ಸಂಸ್ಥಾಪಕರಾದ ಬಸವರಾಜ್ ಸಂಗಮೇಶ್, ಮುಖ್ಯ ಅತಿಥಿಗಳಾಗಿ ದಾವಣಗೆರೆ ಮಹಾನಗರ ಪಾಲಿಕೆಯ ಮಾಜಿ ವಿರೋಧ ಪಕ್ಷ ನಾಯಕರಾದ ಪ್ರಸನ್ನಕುಮಾರ್, ಉಡುಪಿ ಜಿಲ್ಲೆಯ ಮಣಿಪಾಲದ ವೈದ್ಯಕೀಯ ಸೇವೆ ಸಲ್ಲಿಸುತ್ತಿರುವ ಡಾ॥ ಎಸ್.ಯು. ಶರೀಫ್, ದಾವಣಗೆರೆ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈಯವರು ಮಾತನಾಡಿ ಈ ಚಿನ್ನದ ಸಂಸ್ಥೆ ದೇವನಗರಿಯಲ್ಲಿ ಪ್ರಾರಂಭವಾಗಿದ್ದು ಶ್ಲಾಘನೀಯ ಎಂದರು.ಸಮಾರಂಭದ ಮೊದಲು ಪ್ರೇಕ್ಷಕರ ಸಮಯ ವ್ಯರ್ಥವಾಗಬಾರದು ಎಂದು ಸದುದ್ದೇಶದಿಂದ ಸಾಲಿಗ್ರಾಮ ಗಣೇಶ್ ಶೆಣೈಯವರು ರಾಮಾಯಣ, ಮಹಾಭಾರತ ಕುರಿತು ರಸಪ್ರಶ್ನೆ, ಮನೋರಂಜನೆಯೊಂದಿಗೆ ಕಾರ್ಯನಿರ್ವಹಿಸಿದರು. ನೆರೆದ ಪ್ರೇಕ್ಷಕರು ತಮ್ಮ ತಮ್ಮ ಅನುಭವ, ಸಾಮಾನ್ಯಜ್ಞಾನದ ಅರಿವು ಮೂಡಿಸಿದ್ದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.ದಾವಣಗೆರೆಯ ತಾರಿವಾಳ ಗ್ಲೋಬಲ್ ಗೋಲ್ಡ್ ಸಂಸ್ಥೆಯ ಸಂಸ್ಥಾಪಕರದ ಶ್ರೀಮತಿ ಶೋಭಾ ರೂಪೇಶ್, ಸಮಿತಿ ಸದಸ್ಯರಾದ ರಾಜೇಶ್ ಸುವರ್ಣ, ಎಸ್.ರವೀಂದ್ರ ಆಚಾರ್ಯ, ಹರೀಶ್.ಕೆ. ವೇದಿಕೆಯಲ್ಲಿ ಉಪಸ್ಥಿತರಿದ್ದರು. ಸಮಾರಂಭದಲ್ಲಿ ಶಿವಮ್ಮ ಎಸ್. ಪ್ರಾರ್ಥನೆಯೊಂದಿಗೆ ಸ್ವಾಗತಿಸಿ, ನಿರೂಪಿಸಿ ಕೊನೆಯಲ್ಲಿ ವಂದಿಸಿದರು.

**ಭಾಷಾನಗರದ ಮೆಹಬೂಬ್ ಎ ಇಲಾಯಿ ಚಾರಿಟೇಬಲ್ ಟ್ರಸ್ಟ್ ಕಾರ್ಯಕ್ರಮ**

# ಪ್ರವಾದಿ ಮೊಹಮ್ಮದ್ ಪೈಗಂಬರ್ ಹುಟ್ಟುಹಬ್ಬದ ಪ್ರಯುಕ್ತ ಉಚಿತ ಹೆಲ್ತ್ ಕಾರ್ಡ್ ವಿತರಣೆ



**ದಾವಣಗೆರೆ:** ಪ್ರವಾದಿ ಮೊಹಮ್ಮದ್ ಪೈಗಂಬರ್ ರವರ 1,500 ನೇ ಹುಟ್ಟುಹಬ್ಬದ ಪ್ರಯುಕ್ತ ಉಚಿತ ಹೆಲ್ತ್ ಕಾರ್ಡ್ ಹಾಗೂ 500 ಸಸಿಗಳ ವಿತರಣಾ ಕಾರ್ಯಕ್ರಮವು ಭಾಷನಗರ

ಮೆಹಬೂಬ್ ಎ ಇಲಾಯಿ ಚಾರಿಟೇಬಲ್ ಟ್ರಸ್ಟ್ ನಿಂದ ಭಾನುವಾರ ನಡಿಯುತು.

ಭಾಷಾನಗರ 6ನೇ ಕ್ರಾಸ್ ನಲ್ಲಿರುವ ಮೆಹಬೂಬ್ ಎ ಇಲಾಹಿ ಆಸ್ಪತ್ರೆಯ ಮುಂಭಾಗದಲ್ಲಿ ನಡೆಯಿತು.

ಉಚಿತ ಕಾರ್ಡಿನಲ್ಲಿ ವೈದ್ಯಕೀಯ ಶುಲ್ಕ ಬಿಪಿ ಮತ್ತು ಶುಗರ್ ತಪಾಸಣೆ ಹಾಗೂ ಇಸಿಜಿ ಇವೆಲ್ಲವೂ ಒಂದು ವರ್ಷ ತನಕ ಉಚಿತವಾಗಿ ನೀಡಲಾಗುವುದು.ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯರಾದ ಅಬ್ದುಲ್ ಜಬ್ಬಾರ್ ಸಾಬ್, ವಖ್ಫ್ ಬೋರ್ಡ್ ನ ಮಾಜಿ ಅಧ್ಯಕ್ಷರಾದ ಮೊಹಮ್ಮದ್ ಸಿರಾಜ್, ಜೆ ಅಮಾನುಲ್ಲಾ ಖಾನ್, ಆಜಾದ್ ನಗರ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಅಶ್ವಿನ್ ಕುಮಾರ್, ನಾಸಿರ್ ಖುರೇಷಿ, ಟಿ ಅಜ್ಗರ್, ದಾವಣಗೆರೆ ಮಿಲಾದ್ ಕಮಿಟಿಯ ಎಲ್ಲಾ ಸದಸ್ಯರು ಹಾಗೂ ಈ ಭಾಗದ ಎಲ್ಲಾ ಯುವಕರು ಮುಖಂಡರು ಉಪಸ್ಥಿತರಿದ್ದರು.

ಕಾರ್ಯಕ್ರಮದ ನಂತರ ರಾತ್ರಿ ಉಲಮಾಗಳ ಉಪಸ್ಥಿತಯಲ್ಲಿ ತಕ್ರಿರ್ (ಪ್ರವಚನ) ಕಾರ್ಯಕ್ರಮವು ನಡೆಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಟ್ರಸ್ಟಿನ ಅಧ್ಯಕ್ಷರಾದ ಯು ಎಂ ಮನ್ಸೂರ್ ಅಲಿರವರು ವಹಿಸಿದ್ದರು. ಟ್ರಸ್ಟಿನ ಕಾರ್ಯದರ್ಶಿ ಮೊಹಮ್ಮದ್ ಶರೀಫ್, ಅಬ್ದುಲ್ ನಾಸೀರ್ ಯುಹೆಚ್ ಮತ್ತು ಟ್ರಸ್ಟಿನ ಎಲ್ಲಾ ಸದಸ್ಯರು ಉಪಸ್ಥಿತರಿದ್ದರು.

# ಹಾಸ್ಟೆಲ್ ವಿದ್ಯಾರ್ಥಿಗಳ ಆಹಾರ ಭತ್ಯೆ ಹೆಚ್ಚಳ

**ದಾವಣಗೆರೆ:** ಹಾಸ್ಟೆಲ್ ಹಾಗೂ ವಸತಿ ಶಾಲಾ–ಕಾಲೇಜು ವಿದ್ಯಾರ್ಥಿಗಳ ಆಹಾರ ಭತ್ಯೆ ಹೆಚ್ಚಳಕ್ಕಾಗಿ, ಖಾಲಿ ಇರುವ ವಾರ್ಡನ್, ಪ್ರಾಂಶುಪಾಲರು, ಸಿಬ್ಬಂದಿ ಸೇರಿದಂತೆ ವಿವಿಧ ಹುದ್ದೆಗಳ ನೇಮಕಾತಿಗಾಗಿ, ವಸತಿ ನಿಲಯಗಳಿಗೆ ಸ್ವಂತ ಕಟ್ಟಡ, ಕನಿಷ್ಠ ಮೂಲಭೂತ ಸೌಕರ್ಯಗಳಿಗಾಗಿ ಆಗ್ರಹಿಸಿ ಹಾವೇರಿಯಲ್ಲಿ ಹಾಸ್ಟೆಲ್ ವಿದ್ಯಾರ್ಥಿಗಳ ರಾಜ್ಯ ಮಟ್ಟದ ಸಮಾವೇಶ ನಡೆಯಲಿದೆ ಎಂದು ಎಸ್.ಎಫ್.ಐ ರಾಜ್ಯ ಉಪಾಧ್ಯಕ್ಷ ಬಸವರಾಜ ಎಸ್ ಹೇಳಿದರು.

ರಾಜ್ಯ ಮಟ್ಟದ ಹಾಸ್ಟೆಲ್ ವಿದ್ಯಾರ್ಥಿಗಳ ಸಮಾವೇಶದ ಲೋಗೋವನ್ನು ದಾವಣಗೆರೆ ಪರಿವೀಕ್ಷಣಾ ಮಂದಿರ(ಐಬಿ)ಯಲ್ಲಿ ಬಿಡುಗಡೆ ಮಾಡಿ ಮಾತನಾಡಿದ ಅವರು, 4–5 ಅಕ್ಟೋಬರ್ 2025 ಎರಡು ದಿನಗಳ ಕಾಲ ನಡೆಯುವ ಸಮಾವೇಶದಲ್ಲಿ ರಾಜ್ಯದಲ್ಲಿರುವ ಹಾಸ್ಟೆಲ್ ವಿದ್ಯಾರ್ಥಿಗಳ ಸಮಸ್ಯೆಗಳು, ಮೂಲಸೌಕರ್ಯಗಳ ಕುರಿತು ಚರ್ಚಿಸಲಾಗುವುದು. ಈಗಾಗಲೇ ರಾಜ್ಯದಲ್ಲಿರುವ ಎಸ್ಸಿ 3.5ಲಕ್ಷ ವಿದ್ಯಾರ್ಥಿಗಳು ಪೈಕಿ 2400 ವಸತಿ ನಿಲಯಗಳು, ಎಸ್.ಟಿ 1.5ಲಕ್ಷ ವಿದ್ಯಾರ್ಥಿಗಳು ಪೈಕಿ 1200 ವಸತಿ ನಿಲಯಗಳು, ಒಬಿಸಿ 2.5 ವಿದ್ಯಾರ್ಥಿಗಳು ಪೈಕಿ 2500 ನಿಲಯಗಳು ಒಟ್ಟು 7.5 ವಿದ್ಯಾರ್ಥಿಗಳು ಮತ್ತು 6000ಕ್ಕೂ ಅಧಿಕ ನಿಲಯಗಳಿವೆ.

ವಲಯಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಸಾಧ್ಯವಾಗುತ್ತಿಲ್ಲ. ನೇಮಕಾತಿಗಳು ವಿಳಂಬದ ಕಾರಣದಿಂದಾಗಿ ನಿಲಯ ಪಾಲಕರ, ಸ್ವಚ್ಚತಾ ಸಿಬ್ಬಂದಿ ಕೊರತೆ ಹೆಚ್ಚಿದೆ. ಟೆಂಡರ್‌ಗಳ ಮೂಲಕ ಆಹಾರ ಸರಬರಾಜು ಮಾಡಲಾಗುತ್ತಿದೆ. ವಿದ್ಯಾರ್ಥಿಗಳನ್ನು ಜೈಲಿನಲ್ಲಿರುವ ಕೈದಿಗಳಿಗಿಂತ ಕಡೆಯಾಗಿ ಕಾಣಲಾಗುತ್ತದೆ. ರಾಜ್ಯ ಸರ್ಕಾರಕ್ಕೆ ಸಮಾಜ ಕಲ್ಯಾಣ ಇಲಾಖೆ 14 ಕೋಟಿ ಹಣ ಕೇಳಿದೆ ಆದರೆ ಸರ್ಕಾರ ನೀಡುತ್ತಿಲ್ಲ ಎಂದರು.

ಮೆಟ್ರಿಕ್ ವಿದ್ಯಾರ್ಥಿಗಳಿಗೆ 1750 ರೂ ಮತ್ತು ಪೋಸ್ಟ್ ಮೆಟ್ರಿಕ್ ವಿದ್ಯಾರ್ಥಿಗಳಿಗೆ 1850 ರೂ ಆಹಾರ ಭತ್ಯೆಯನ್ನು ನೀಡಲಾಗುತ್ತಿದೆ. ಇದರಿಂದ ಉತ್ತಮ ಗುಣಮಟ್ಟದ ಪೌಷ್ಟಿಕ ಆಹಾರ ಕೊಡಲು ಸಾಧ್ಯವಾಗುತ್ತಿಲ್ಲ. ಹಾಗಾಗಿ ಸರ್ಕಾರ ಪ್ರತಿ ವಿದ್ಯಾರ್ಥಿಗೆ 4.500ರೂ ಆಹಾರ ಭತ್ಯಯನ್ನು ಹೆಚ್ಚಿಸಬೇಕು. ಇದರ ಭಾಗವಾಗಿ ಹಾವೇರಿಯಲ್ಲಿ ಎರಡು ದಿನಗಳ ಕಾಲ ರಾಜ್ಯಮಟ್ಟದ ಸಮಾವೇಶವನ್ನು ಮಾಡಿ ಸರ್ಕಾರಕ್ಕೆ ಮನವರಿಕೆ ಮಾಡಿಕೊಡಲು ಮುಂದಾಗಿದೆ ಎಂದು ಬಸವರಾಜ ಎಸ್ ಹೇಳಿದರು.

ಮುಖಂಡ ಸಂಜುನಾಯ್ಕ ಎಲ್ ಜಿ ಮಾತನಾಡಿ, ವಿದ್ಯಾರ್ಥಿಗಳಿಗೆ ಸರಿಯಾದ ಭದ್ರತೆ ಇಲ್ಲ, ಆರೋಗ್ಯ ಪರೀಕ್ಷೆ ನಡೆಯುತ್ತಿಲ್ಲ, ಅಷ್ಟಲ್ಲದೆ ವಿದ್ಯಾರ್ಥಿಗಳ ಮೇಲೆ ಅಧಿಕಾರಿಗಳು ದಬ್ಬಾಳಿಕೆ ಮಾಡುತ್ತಿದ್ದಾರೆ. ಸಮಸ್ಯೆಗಳನ್ನು ಪ್ರಶ್ನಿಸಿದರೆ ಟಾರ್ಗೆಟ್ ಮಾಡುತ್ತಿದ್ದಾರೆ. ಇದರಿಂದ ಎಷ್ಟೋ ವಿದ್ಯಾರ್ಥಿಗಳು ವಸತಿ ನಿಲಯವನ್ನು ಬಿಡುವಂತಾಗಿದೆ ಎಂದರು.

ಈ ಸಂದರ್ಭದಲ್ಲಿ ಎಸ್.ಎಫ್.ಐ ಮುಖಂಡರಾದ ವಿನೋದ್ ಬಿ, ನಿಖಿಲ್, ಕಾಲೇಜ್ ಘಟಕ ಅಧ್ಯಕ್ಷ ಪವನ್ ಎಮ್, ಕಾರ್ಯದರ್ಶಿ ದೀಪಾ ಕೆ, ಉಪಾಧ್ಯಕ್ಷ ಮಹಮ್ಮದ್ ವಾಸೀಮ್, ರಾಕೇಶ್ ಭಜಂತ್ರಿ, ದಿವ್ಯಾ ಆರ್, ಸಹ ಕಾರ್ಯದರ್ಶಿ ಮಹಮ್ಮದ್, ಪ್ರೀತಮ್, ಮುಖಂಡರಾದ ಮಧು ಪಿ ಎಮ್, ಆರಾಧನಾ ಕೆ, ಗಗನ ಆರ್ ಉಪಸ್ಥಿತರಿದ್ದರು.

# ಆನ್‌ಲೈನ್ ನೋಂದಣಿ

**ದಾವಣಗೆರೆ :** ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಸಮುದಾಯದ ಡಾ.ಬಿ.ಆರ್. ಅಂಬೇಡ್ಕರ್‌ರವರ ಅನುಯಾಯಿಗಳನ್ನು ಮಹಾರಾಷ್ಟ್ರದ ನಾಗಪುರದ ದೀಕ್ಷಾಭೂಮಿ ಯಾತ್ರೆಗೆ ನಿಯೋಜಿಸುವ ಬಗ್ಗೆ ಸರ್ಕಾರದಿಂದ ಮಾರ್ಗಸೂಚಿಗಳನ್ನು ನೀಡಲಾಗಿದ್ದು, ಈ ಬಗ್ಗೆ ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದೆ. ಸಮಾಜ ಕಲ್ಯಾಣ ಇಲಾಖೆಯ http://swd.karnataka.gov.in ವೆಬ್‌ಸೈಟ್‌ನಲ್ಲಿ ದೀಕ್ಷಾಭೂಮಿ ಯಾತ್ರೆ ಸೆ.30 ರಿಂದ ಅ.4 ರವರೆಗೆ ಮಹಾರಾಷ್ಟ್ರದ ನಾಗಪುರದ ದೀಕ್ಷಾಭೂಮಿ ಯಾತ್ರೆಗೆ ತೆರಳಲು ಆಸಕ್ತಿವುಳ್ಳವರು ಈ ವೆಬ್‌ಸೈಟ್‌ನಲ್ಲಿ ನೋಂದಾಯಿಸಿಕೊಳ್ಳಬಹುದು. ಸೆ.15 ನೋಂದಣಿ ಮಾಡಿಕೊಳ್ಳಲು ಕೊನೆಯ ದಿನ. ವಿವಿಧ ಜಿಲ್ಲೆಗಳಿಂದ ಪ್ರಯಾಣಿಸಲು ಹಾಗೂ ಹಿಂದಿರುಗಿ ಬರುವ ಸಂಬಂಧ ಬಸ್ಸು ಹಾಗೂ ರೈಲಿನ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ನಾಗರಾಜ ತಿಳಿಸಿದ್ದಾರೆ.

# ಉದ್ಯಮ ಸಪ್ತಾಹ ಕಾರ್ಯಕ್ರಮ

**ದಾವಣಗೆರೆ:** ಅಂಚೆ ಇಲಾಖೆಯು ದಿನಾಂಕ ಸೆ.8 ರಿಂದ 13 ರವರೆಗೆ ಅಂಚೆ ಉದ್ಯಮ ಸಪ್ತಾಹ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ದೇಶದ ಮೂಲೆ ಮೂಲೆಗಳನ್ನು ಸಂಪರ್ಕಿಸಿ ಸ್ಪೀಡ್ ಪೋಸ್ಟ್ ಡಾಕ್ಯುಮೆಂಟ್ ಸ್ಪೀಡ್ ಪೋಸ್ಟ್ ಪಾರ್ಸೆಲ್, ಇಂಟನ್ಯಾಷನಲ್ ಸ್ಪೀಡ್ ಪೋಸ್ಟ್‌ಗಳನ್ನು, ಬೃಹತ್ ಸಂಖ್ಯೆಯಲ್ಲಿ ಕಳಿಸುವ ಗ್ರಾಹಕರನ್ನು ಸಂಪರ್ಕಿಸಿ ನಮ್ಮ ಇಲಾಖೆಯಲ್ಲಿ ದೊರೆಯುವ ಸೌಲಭ್ಯಗಳನ್ನು ಪ್ರಚಾರಗೊಳಿಸುವ ಯೋಜನೆಯಾಗಿರುತ್ತದೆ. ಗ್ರಾಹಕರು ಕಡಿಮೆ ಬೆಲೆಯಲ್ಲಿ ದೇಶ ಹಾಗೂ ವಿದೇಶಗಳಿಗೆ ತಮ್ಮ ಪತ್ರಗಳನ್ನು ಮತ್ತು ಸರಕು ಸಾಮಗ್ರಿಗಳನ್ನು ಕಳುಹಿಸಬಹುದು. ಗ್ರಾಹಕರ ಆಫೀಸ್ ಅಥವಾ ಅವರ ವ್ಯವಹಾರಿಕ ಸ್ಥಳಗಳಿಗೆ ಬಂದು ಅಂಚೆಗಳನ್ನು ಸಂಗ್ರಹಿಸುವ ವ್ಯವಸ್ಥೆಯು ಸಹ ಇರುತ್ತದೆ. ಅಥವಾ ಗ್ರಾಹಕರೇ ಅದನ್ನು ಬುಕ್ ಮಾಡಿದರೆ, ಅದನ್ನು ಸಮೀಪದ ಅಂಚೆ ಕಚೇರಿಯವರು ಬಂದು ತೆಗೆದು ಕೊಂಡು ಹೋಗುವ ಸೌಲಭ್ಯವು ಇರುತ್ತದೆ. ಬೃಹತ್ ಸಂಖ್ಯೆಗಳಲ್ಲಿ ಅಂಚೆ ಪತ್ರಗಳನ್ನು ಅಥವಾ ಸರಕು ಸಾಮಗ್ರಿಗಳನ್ನು ಕಳುಹಿಸುವ ಗ್ರಾಹಕರು ಈ ಸೌಲಭ್ಯಗಳನ್ನು ಉಪಯೋಗಿಸಿ ಸುರಕ್ಷಿತವಾಗಿ ತಮ್ಮ ಅಂಚೆಗಳನ್ನು ಸಮಯಕ್ಕೆ ಸರಿಯಾಗಿ ಕಳಿಹಿಸುವ ಈ ಅಂಚೆ ಸೇವೆಯನ್ನು ಪಡೆದು ಕೊಳ್ಳಬಹುದು. ಹೆಚ್ಚಿನ ವಿವರಗಳಿಗಾಗಿ 8861126883 ಸಂತೋಷ್ ಬಿ (ಮಾರುಕಟ್ಟೆ ಅಧಿಕಾರಿ) ಸಂಪರ್ಕಿಸಲು ಅಂಚೆ ವಿಭಾಗದ ಅಧೀಕ್ಷಕರಾದ ಚಂದ್ರಶೇಖರ ತಿಳಿಸಿದ್ದಾರೆ.

# ಆಕ್ಷೇಪಣೆಗಳಿಗೆ ಆಹ್ವಾನ

**ದಾವಣಗೆರೆ :** ದಾವಣಗೆರೆ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಆಯ್ಕೆ ಸಮಿತಿ ಸಭೆಯಲ್ಲಿ ಅಭ್ಯರ್ಥಿಗಳನ್ನು ತಾತ್ಕಾಲಿಕವಾಗಿ ಆಯ್ಕೆ ಮಾಡಲಾಗಿರುತ್ತದೆ. ಆಯ್ಕೆಯಾದ ಅಭ್ಯರ್ಥಿಗಳ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ ಸೆ.17 ರೊಳಗಾಗಿ ಅಗತ್ಯ ದಾಖಲಾತಿಗಳೊಂದಿಗೆ ಆಯಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಾನಾಯ್ಕ್ ತಿಳಿಸಿದ್ದಾರೆ.

# ಮಾದಿಗ ಸಮಾಜದ ಬಹು ನಿರೀಕ್ಷಿತ ಒಳ ಮೀಸಲಾತಿ ಮಾದಾರ ಚನ್ನಯ್ಯ ಸ್ವಾಮಿಗಳ ಹೋರಾಟಕ್ಕೆ ಸಂದ ಗೌರವ



**ಚನ್ನಗಿರಿ** ಮಾದಿಗ ಸಮಾಜದ ಬಹು ನಿರೀಕ್ಷಿತ ಒಳ ಮೀಸಲಾತಿಯನ್ನು ನೀಡಿರುವುದು ಮಾದಿಗ ಸಮಾಜದ ಶ್ರೀಗಳಾದ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮಿಗಳ ಹೋರಾಟಕ್ಕೆ ಸಂದ ಗೌರವವಾಗಿದೆ ಎಂದು ಚನ್ನಗಿರಿ ತಾಲೂಕು ವಿಶ್ವ ಮಾನವಹಕ್ಕುಗಳ ಅಧ್ಯಕ್ಷ ನಾಗೇಂದ್ರಪ್ಪ ಚಿಕ್ಕೊಲಿಕೆರೆ ಹೇಳಿದರು.

ಭಾನುವಾರ ಮಾಧ್ಯಮದೊಂದಿಗೆ ಮಾತನಾಡಿ ಒಳ ಮೀಸಲಾತಿ ಎನ್ನುವುದು ಚನ್ನಗಿರಿ ತಾಲೂಕು ಮಾದಿಗ ಸಮಾಜದ ಬಹು ನಿರೀಕ್ಷಿತವಾಗಿದೆ. ಕಳೆದ 35 ವರ್ಷಗಳಿಂದ ದಲಿತ ಸಂಘರ್ಷ ಸಮಿತಿಗಳು ಸತತ ಹೋರಾಟವನ್ನು ನಡೆಸುತ್ತಾ ಬಂದಿದ್ದು ಇಂದು ಅಧರ ಪಲ ದೊರೆತಿದೆ. ಕೇಂದ್ರ ಮತ್ತು ರಾಜ್ಯ ಸರಕಾರವು ಜನಸಂಖ್ಯಾ ಅಧಾರವಾಗಿ ಮೊದಲು ಸದಾಶಿವ ಆಯೋಗದ ವರದಿ ಮತ್ತು ನಾಗಮೋಹನ್‌ದಾಸ್ ವರದಿ ಅದಾರದ ಮೇಲೆ ಸಮಾಜಕ್ಕೆ ಶೇ 6 ರ ಒಳ ಮೀಸಲಾತಿಯನ್ನು ನೀಡಿದ್ದು ಸ್ವಾಗತಾರ್ಹವಾಗಿದೆ. ರಾಜ್ಯದಾದ್ಯಂತ ಎಲ್ಲಾ ಮಾದಿಗ ಸಮಾಜದ ಗಣ್ಯರಾದ ಮಾಜಿ ಸಚಿವರಾದ ಎಚ್.ಅಂಜನೇಯ, ಎ.ನಾರಾಯಣಸ್ವಾಮಿ , ಸಚಿವರಾದ ಕೆ.ಎಚ್. ಮುನಿಯಪ್ಪ, ಆರ್‌ಬಿ.ತಿಮ್ಮಾಪುರ,ಸಂಸದರಾದ ಗೋವಿಂದ ಕಾರಜೋಳ, ರಮೇಶ್ ಜಿಗಜಣಗಿ ಸೇರಿದಂತೆ ಸಾಕಷ್ಟು ನಾಯಕರು ಈ ಹೋರಾಟಕ್ಕೆ ಕೈ ಜೋಡಿಸಿದ್ದಾರೆ. ಒಳ ಮೀಸಲಾತಿಯನ್ನು ಘೋಷಣೆ ಮಾಡಿದಂತಹ ಕೇಂದ್ರ ಮತ್ತು ರಾಜ್ಯ ಸರಕಾರಗಳಿಗೆ ಮಾದಿಗ ಸಮಾಜದ ವತಿಯಿಂದ ಅಭಿನಂದನೆಗಳನ್ನು ಸಲ್ಲಿಸಲಾಗುವುದು ಎಂದರು. ಈ ಸಂದರ್ಭದಲ್ಲಿ ನಿವೃತ್ತ ಪ್ರಾಚಾರ್ಯ ಬಿ.ಎಂ.ಶಿವಪ್ಪ, ಪುರಸಭೆ ಸದಸ್ಯ ಮತ್ತು ಎಸ್.ಸಿ. ಘಟಕದ ಚನ್ನಗಿರಿ ಬ್ಲಾಕ್ ಅಧ್ಯಕ್ಷ ನಿಂಗಪ್ಪ, ಬಿ. ನಾಗರಾಜ್ ಹಿರೇಮಳಲಿ, ದೇವೇಂದ್ರಪ್ಪ ಕರೇಕಟ್ಟೆ, ವೀರೇಶ್ ನೀತಿಗೆರೆ, ಶ್ರೀನಿವಾಸ್ ತಾವರೆಕೆರೆ, ಜಗದೀಶ್ ಚನ್ನಗಿರಿ, ಮೈಲಾರಪ್ಪ ಇತರರು ಹಾಜರಿದ್ದರು.



ಚನ್ನಗಿರಿ: ತಾಲೂಕಿನ ತಾವರೆಕೆರೆ ಗ್ರಾಮದ ಅರಿವಿನ ಮನೆ ಸೌಹಾರ್ದ ಸಹಕಾರಿ ಬ್ಯಾಂಕ್‌ನ 7 ನೇ ವರ್ಷದ ವಾರ್ಷಿಕ ಮಹಾಸಭೆಯನ್ನು ಸಂಘದ ಅಧ್ಯಕ್ಷ ಶ್ರೀಕಂತಪ್ಪ ಉದ್ಘಾಟಿಸಿದರು.

## ವಿಶ್ವಮಾನವ ಹಕ್ಕುಗಳ ಸೇವಾ ಪ್ರತಿಷ್ಟಾನ ಚನ್ನಗಿರಿ ತಾಲೂಕು ಮಹಿಳಾ ಸಮಿತಿಯ ನೂತನ ನಿರ್ದೇಶಕರಾಗಿ ಶಿಲ್ಪ ಮಂಜುನಾಥ್.



**ಚನ್ನಗಿರಿ :** ವಿಶ್ವಮಾನವ ಹಕ್ಕುಗಳ ಸೇವಾ ಪ್ರತಿಷ್ಠಾನ ಚನ್ನಗಿರಿ ತಾಲೂಕು ಮಹಿಳಾ ಸಮಿತಿಯ ನೂತನ ನಿರ್ದೇಶಕರಾಗಿ ಸಂಜನಾ ಹೋಟೆಲ್‌ನ ಮಾಲೀಕರಾದ ಶಿಲ್ಪ ಮಂಜುನಾಥ್ ಆಯ್ಕೆಯಾಗಿದ್ದಾರೆ ಎಂದು ವಿಶ್ವ ಮಾನವ ಹಕ್ಕುಗಳ ಸೇವಾ ಪ್ರತಿಷ್ಠಾನದ ತಾಲೂಕು ಅಧ್ಯಕ್ಷರಾದ ಚಿಕ್ಕೂಲಿಕೆರೆ ನಾಗೇಂದ್ರಪ್ಪ ತಿಳಿಸಿದ್ದಾರೆ.ಇಂದು ನಡೆದ ತಾಲೂಕು ವಿಶ್ವಮಾನವಹಕ್ಕುಗಳ ಸೇವಾ ಪ್ರತಿಷ್ಠಾನದ ಸಮಿತಿಯ ಸಭೆಯಲ್ಲಿ ಸೇವಾ ಮನೋಬಾವನೆಯುಳ್ಳ ಶಿಲ್ಪಮಂಜುನಾಥ್‌ರವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದ್ದು ಸಮಿತಿಯ ಕಾರ್ಯಕ್ರಮಗಳು ಮತ್ತು ಹೋರಾಟಗಳಲ್ಲಿ ಸಕ್ರಿಯವಾಗಿ ಬಾಗವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ

ಸುಧಾಕರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುರೇಶ್ ದೊಡ್ಡಬಾಯಿ, ತಾಲೂಕು ಮಹಿಳಾ ಘಟಕದ ಅಧ್ಯಕ್ಷೆ ಉಮಾ,ನಿರ್ದೇಶಕರಾದ ಗಿರೀಶ್, ಮಹಮದ್ ಅಶ್ರಫ್, ನಾಗರಾಜ್ ಹಿರೇಮಳಲಿ, ಕಾರ್ಯದರ್ಶಿ ಮಂಜುನಾಥ್ ಇತರರು ಹಾಜರಿದ್ದರು.

# ಕ್ರೀಡೆಗಳಿಂದ ಮಾನಸಿಕ ಹಾಗೂ ದೈಹಿಕ ಸದೃಢತೆ ಸಾಧ್ಯ



**ಗದಗ** : ಕ್ರೀಡೆಗಳಿಂದ ಮಾನಸಿಕ ಹಾಗೂ ದೈಹಿಕ ಸದೃಢತೆ ಸಾಧ್ಯ ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಗುರುವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಗದಗ ಇವರುಗಳ ಸಹಯೋಗದಲ್ಲಿ ಏರ್ಪಡಿಸಲಾಗಿದ್ದ ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾ ಕೂಟ( ಫುಟ್ಬಾಲ್ ಮತ್ತು ಹಾಕಿ ) ವನ್ನು ಉದ್ಘಾಟಿಸಿ ಮಾತನಾಡಿದರು.

ಕ್ರೀಡಾಪಟುಗಳು ಸೋಲು ಗೆಲುವನ್ನು ಸಮಾನವಾಗಿ ಸ್ವೀಕರಿಸಿ ಕ್ರೀಡಾ ಮನೋಭಾವವನ್ನು ಬೆಳೆಸಿಕೊಳ್ಳಬೇಕು. ಗದಗ ಜಿಲ್ಲೆಯ ಕ್ರೀಡಾಪಟುಗಳು ರಾಜ್ಯ ಮಟ್ಟದಲ್ಲಿಯೂ ಜಿಲ್ಲೆಗೆ ಕೀರ್ತಿ ತರಬೇಕೆಂದರು.

ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ ಮಾತನಾಡಿ ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟಕ್ಕೆ ವಿವಿಧ ಜಿಲ್ಲೆಗಳಿಂದ ಕ್ರೀಡಾಪಟುಗಳು ಇಲ್ಲಿ ಆಗಮಿಸಿದ್ದಾರೆ. ಕ್ರೀಡೆಗಳಲ್ಲಿ ಸೋಲು ಗೆಲುವು ಮುಖ್ಯವಲ್ಲ. ಪಾಲ್ಗೊಳ್ಳುವುದು ಮುಖ್ಯ. ಕ್ರೀಡಾಪಟುಗಳು ನಿರ್ಣಾಯಕರ ನಿರ್ಣಯವನ್ನು ಪಾಲಿಸಿ ಕ್ರೀಡಾಕೂಟವನ್ನು ಯಶಸ್ವಿಗೊಳಿಸಬೇಕೆಂದು ಕರೆ ನೀಡಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಅವರು ಮಾತನಾಡಿ ಗದಗ ಜಿಲ್ಲೆಯ ಹಾಕಿ ಕ್ರೀಡಾಪಟುಗಳು ಅಂತರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡಿರುವುದು ನಮಗೆಲ್ಲ ಹೆಮ್ಮೆಯ ವಿಷಯವಾಗಿದೆ. ಜಿಲ್ಲಾ ಮಟ್ಟದಿಂದ ಈಗ ವಿಭಾಗ ಮಟ್ಟದ ಕ್ರೀಡಾಕೂಟಕ್ಕೆ ವಿವಿಧ ಜಿಲ್ಲೆಗಳಿಂದ ಕ್ರೀಡಾಪಟುಗಳು ಗದಗ ಜಿಲ್ಲೆಗೆ ಆಗಮಿಸಿದ್ದಾರೆ. ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಕೂಟದಲ್ಲಿ ಕ್ರೀಡಾಪಟುಗಳು ಪಾಲ್ಗೊಳ್ಳಬೇಕೆಂದು ಕರೆ ನೀಡಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟಗಳು ( ಫುಟ್ಬಾಲ್ ಮತ್ತು ಹಾಕಿ ) ಸೆಪ್ಟೆಂಬರ್ 11 ಮತ್ತು 12 ರಂದು ಜರುಗುತ್ತಿವೆ. ಫುಟ್ಬಾಲ್ ಕ್ರೀಡಾಕೂಟ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಹಾಗೂ ಹಾಕಿ ಕ್ರೀಡಾಕೂಟ ಗದಗ ಬೆಟಗೇರಿಯ ಮಹಾತ್ಮಾಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ಜರುಗುತ್ತಿವೆ ಎಂದರು.

ಕಾರ್ಯಕ್ರಮದಲ್ಲಿ ಗದಗ ಬೆಟಗೇರಿ ನಗರಸಭೆ ಸದಸ್ಯ ಸುರೇಶ ಕಟ್ಟಿಮನಿ, ಮೋಹನ ಕಟ್ಟಿಮನಿ, ಹನುಮಂತಪ್ಪ ವೀರಾಪೂರ, ಎಚ್.ಬಿ.ಗಡಟಾದ, ಸರ್ಫರಾಜ್ ಶೇಖ್ , ದೈಹಿಕ ಶಿಕ್ಷಕರುಗಳು, ವಿವಿಧ ಜಿಲ್ಲೆಗಳಿಂದ ಆಗಮಿಸಿದ ಕ್ರೀಡಾಪಟುಗಳು ಹಾಜರಿದ್ದರು.

ಎಂ.ಎ.ಯರಗುಡಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯಲ್ಲಿ ಜಿಲ್ಲಾ ನ್ಯಾಯಾಧೀಶರಾದ ರೋಣ ವಾಸುದೇವ್

# ಹಸಿರು ಯೋಧರ ಸ್ಮರಣೆ ಮಾಡುವುದು ನಮ್ಮ ಕರ್ತವ್ಯ

**ಚಿತ್ರದುರ್ಗ:** ದೇಶದ ಗಡಿಯಲ್ಲಿ ನಮ್ಮನ್ನು ಕಾಯುವ ಸೈನಿಕರು ಎಷ್ಟು ಮುಖ್ಯವೋ, ರಾಷ್ಟ್ರೀಯ ಸಂಪತ್ತು ಎಂದು ಘೋಷಣೆಯಾಗಿರುವ ಕಾಡು, ವನ್ಯಜೀವಿ, ಜೀವ ಸಂಕುಲ ರಕ್ಷಿಸುವ ಹಸಿರು ಯೋಧರು ಕೂಡ ನಮ್ಮ ರಕ್ಷಕರು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರೋಣ ವಾಸುದೇವ್ ಹೇಳಿದರು.



ನಗರದ ಅರಣ್ಯ ಇಲಾಖೆಯ ವಿಭಾಗೀಯ ಕಚೇರಿ ಆವರಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯಲ್ಲಿ ಅರಣ್ಯ ಹುತಾತ್ಮರಿಗೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ಹೆಚ್ಚಿನ ಸೌಲಭ್ಯ ಹಾಗೂ ಮೂಲ ಸೌಕರ್ಯಗಳನ್ನು ಸರ್ಕಾರವು ಅರಣ್ಯ ಇಲಾಖೆಗೆ ಕಲ್ಪಿಸಿಕೊಡಬೇಕು ಎಂದು ತಿಳಿಸಿದ ಅವರು, ಅರಣ್ಯ ಸಂರಕ್ಷಣೆಯ ಹೋರಾಟದಲ್ಲಿ ಹುತಾತ್ಮರಾದವರ ಸ್ಮರಣಾರ್ಥವಾಗಿ ಮಾಡುವ ಇದು ಮಹತ್ವದ ಕಾರ್ಯ. ಪರಿಸರ, ವನ್ಯಜೀವಿ, ಜೀವವೈವಿಧ್ಯವನ್ನು ರಕ್ಷಣೆ ಮಾಡುವ ಅವಕಾಶ ಸಂವಿಧಾನದಲ್ಲಿದ್ದು, ನಾವು ಅದನ್ನು ರೂಢಿಸಿಕೊಳ್ಳಬೇಕು. ಪರಿಸರ ಹಾನಿಯಾಗದಂತೆ ಎಚ್ಚರ ವಹಿಸಬೇಕು ಎಂದರು.

ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಮಾಲತೇಶ್ ಅರಸ್ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿ, ವಿದ್ಯಾರ್ಥಿಗಳಲ್ಲಿ, ಜನಸಾಮಾನ್ಯರಲ್ಲಿ ಅರಣ್ಯ ಸಂರಕ್ಷಣೆಯ ಮಹತ್ವ ಸಾರಬೇಕು. ಪರಿಸರ, ವನ್ಯಜೀವಿ ಮತ್ತು ಪ್ರಕೃತಿಯ ಸಮತೋಲನಕ್ಕಾಗಿ ಅರಣ್ಯಗಳ ಅಗತ್ಯದ ಬಗ್ಗೆ ಅರಿವು ಮಾಡಿಸಬೇಕು, ಅರಣ್ಯ ಕಾಯ್ದೆಗಳ ಪಾಲನೆ ಮತ್ತು ಪರಿಸರ ಹಾನಿ ತಡೆಯುವ ಬಗ್ಗೆ ಜಾಗೃತಿ ಮೂಡಿಸುವುದು ನಮ್ಮ ಕರ್ತವ್ಯ ಎಂದರು.

ಚಿತ್ರದುರ್ಗ ಜಿಲ್ಲೆಯಲ್ಲಿ ವಿವಿಧ ಭಾಗಗಳಲ್ಲಿ ಮಾನವ ವನ್ಯಜೀವಿ ಸಂಘರ್ಷ ಹೆಚ್ಚಿದ್ದು, ಜಾಗೃತಿ ಜೊತೆಗೆ ಸಹಬಾಳ್ವೆ ಅಗತ್ಯವಾಗಿದೆ. ಕರಡಿ, ಚಿರತೆ ಸೇರಿದಂತೆ ವನ್ಯಜೀವಿಗಳು ಗ್ರಾಮದೊಳಗೆ ಬರಲು ನಾವೇ ಕಾರಣವಾಗಿದ್ದೇವೆ. ಇದರ ತಡೆಗೆ ಸರ್ಕಾರದ ಜೊತೆಗೆ ನಾಗರೀಕರ ಜವಾಬ್ದಾರಿ ಕೂಡ ಇದೆ. ಈ ನಿಟ್ಟಿನಲ್ಲಿ ವನ್ಯಜೀವಿ ಉಪಟಳದ ಗ್ರಾಮಗಳ ಜನರೊಂದಿಗೆ ಸಂವಾದ, ಚರ್ಚೆ ಮಾಡಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಉಪ ಅರಣ್ಯ ಸಂರಕ್ಷಣಾಧಿಕಾರಿ ಜಿ. ಗೋಪ್ಯಾನಾಯ್ಕ ಮಾತನಾಡಿ, ಅರಣ್ಯ ಇಲಾಖೆಯ ಸಿಬ್ಬಂದಿಗಳು ದೇಶದ ಅರಣ್ಯ ಮತ್ತು ವನ್ಯಜೀವಿಗಳ ಸಂರಕ್ಷಣೆಗಾಗಿ ಮಾಡಿದ ತ್ಯಾಗ ಮತ್ತು ಬಲಿದಾನಗಳ ಸ್ಮರಣೆಗಾಗಿ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯನ್ನು ದೇಶದಾದ್ಯಂತ ಆಚರಿಸಲಾಗುತ್ತಿದೆ. 1966 ರಿಂದ 2025 ರವರೆಗೆ ರಾಜ್ಯದಲ್ಲಿ ಒಟ್ಟು 62 ಮಂದಿ ಅರಣ್ಯ ಇಲಾಖೆಯಲ್ಲಿ ಕರ್ತವ್ಯ ನಿರತರಾಗಿದ್ದಾಗ ಹುತಾತ್ಮರಾಗಿದ್ದಾರೆ ಎಂದರು.

ಚಿತ್ರದುರ್ಗ ಜಿಲ್ಲೆಯ ಇಬ್ಬರು ಯೋಧರಿಗೆ ನಮನ ಸಲ್ಲಿಸಿದ ಅವರು, ದೇಶದ ಎಲ್ಲಾ ಹುತಾತ್ಮರ ಸ್ಮರಣೆ ನಮ್ಮದಾಗಿದೆ, ಜಿಲ್ಲೆಯ ಅರಣ್ಯ ಸಿಬ್ಬಂದಿಗಳಿಗೆ ಎಲ್ಲಾ ರೀತಿಯ ಸಹಕಾರ ನೀಡಲಾಗುತ್ತದೆ ಮತ್ತು ಅರಣ್ಯ ಅಭಿವೃದ್ಧಿಗೆ ಒತ್ತು ನೀಡಲಾಗುತ್ತದೆ ಎಂದರು.

ಅರಣ್ಯ ಇಲಾಖೆಯ ಹುತಾತ್ಮರ ಸ್ಮರಣಾರ್ಥ ಇದೇ ಸಂದರ್ಭದಲ್ಲಿ ಪರೇಡ್ ನಡೆಸಲಾಯಿತು.

ಮುಖ್ಯ ಅತಿಥಿಗಳಿಂದ ಅರಣ್ಯ ಹುತಾತ್ಮರಿಗೆ ಹೂಗುಚ್ಚ ಸಮರ್ಪಣೆ ಮಾಡಿ ಗೌರವ ಸಲ್ಲಿಸಲಾಯಿತು. ಅರಣ್ಯ ಹುತಾತ್ಮರ ದಿನಾಚರಣೆಯ ಪಕ್ಷಿನೋಟ ಮತ್ತು ಅರಣ್ಯ ಹುತಾತ್ಮರ ಹೆಸರುಗಳನ್ನು ಸ್ಮರಿಸುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು. ಎಲ್ಲಾ ತಾಲ್ಲೂಕಿನ ವಲಯ ಅರಣ್ಯ ಅಧಿಕಾರಿಗಳು ಮತ್ತು ಸಿಬ್ಬಂದಿ, ಜೋಗಿಮಟ್ಟಿ ಪಾಲಕರು ಗಸ್ತು ವಿಭಾಗದವರು ಹಾಗೂ ಸಿಬ್ಬಂದಿ ಹಾಜರಿದ್ದರು.

# ಹೊಸದಾಗಿ ಕಿರು ಉದ್ದಿಮೆ ಆರಂಭಿಸುವವರಿಗೆ ಸಹಕಾರ

**ಶಿವಮೊಗ್ಗ:** ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿ೦ುವ೦ುಬದ್ದ್ಗ್ೊಳಿಸ್೦ುವಿಕೆ ಯೋಜನೆಯು ಒದು ವಿಶೇಷ ಯೋಜನೆಯಾಗಿದ್ದು ಹೊಸದಾಗಿ ಕಿರು ಉದ್ದಿಮೆ ಆರಂಭಿಸುವವರಿಗೆ ಕೃಷಿ ವಿಶ್ವವಿದ್ಯಾಲಯದಿಂದ ಲಭ್ಯವಿರುವ ಎಲ್ಲ ಸಹಕಾರ ನೀಡಲಾಗುವುದು ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ.ಆರ್.ಸಿ ಜಗದೀಶ್ ತಿಳಿಸಿದರು.



ಆತ್ಮನಿರ್ಭರ ಭಾರತ ಅಭಿಯಾನ, ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತುನಿಗಮ ನಿಯಮಿತ(ಕೆಎಪಿಪಿಇಸಿ), ಜಿಲ್ಲಾಡಳಿತ, ಜಿ.ಪಂ, ಜಿಲ್ಲಾ ಕೃಷಿ ತರಬೇತಿ ಕೇಂದ್ರ ಹಳ್ಳಿಕೆರೆ ಹಾಗೂ ಕೃಷಿ ಇಲಾಖೆ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಗುರುವಾರ ಜಿ.ಪಂ. ಸಭಾಂಗಣದಲ್ಲಿ ಫಲಾನುಭವಿಗಳಿಗೆ ಏರ್ಪಡಿಸಲಾಗಿದ್ದ ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಹಾಗೂ ಆತ್ಮ ಯೋಜನೆ ಕುರಿತಾದ ಅರಿಚು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹೊಸದಾಗಿ ಕಿರು ಉದ್ದಿಮೆ ಆರಂಭಿಸುವವರಿಗೆ ವಿಶ್ವವಿದ್ಯಾಲಯದಿಂದ ಸಂಸ್ಕರಣೆಗೆ ಜಾಗ, ಪ್ರಯೋಗಾಲಯ ಹಾಗೂ ಬ್ಯಾಂಕ್ ಮೂಲಕ ಸಾಲ ಕೂಡ ಕೊಡಿಸಲಾಗುವುದು ಎಂದರು.

ಜಿಲ್ಲೆಯಿಂದ 100 ಟನ್‌ಗಳಷ್ಟು ಅಪ್ಪೆ ಮಿಡಿ ವಿದೇಶಕ್ಕೆ ರಫ್ತಾಗುತ್ತಿದೆ. ಮೆಕ್ಕೆಜೋಳದಿಂದ 50 ಕ್ಕೂ ಹೆಚ್ಚಿನ ಬಗೆಯ ಖಾದ್ಯವನ್ನು ಮಾಡಬಹುದು. ಹಾಗೂ ಹೊಸ ಹೊಸ ಖಾದ್ಯಗಳ ಸಂಶೋಧನೆಗೂ ಅವಕಾಶ ಇದೆ. ಮಸಾಲೆ ಪದಾರ್ಥಗಳ ಸಂಶೊಧನೆಗಳನ್ನು ಕೂಡ ಮಾಡಬಹುದು.

ಅಣಬೆ ಹಾಗೂ ಬೇಕರಿ ಉದ್ಯಮದಲ್ಲಿ ಆಸಕ್ತಿ ಇರುವರಿಗೆ ತರಬೇತಿ ನೀಡಲಾಗುತ್ತದೆ. ಚಾಕೊಲೇಟ್ ಉದ್ಯಮ ಮಾಡುವವರಿಗೂ ಪ್ರೋತ್ಸಾಹ ನೀಡಲಾಗುತ್ತದೆ. ಹಾಗೂ ವಿವಿಧ ಖಾದ್ಯಗಳಲ್ಲಿ ವಿಟಮಿನ್ ಮತ್ತು ಪ್ರೋಟಿನ್ ಮಟ್ಟವನ್ನು ಪರೀಕ್ಷೆ ಮಾಡಲಾಗುತ್ತದೆ ಎಂದ ಅವರು ತಾಂತ್ರಿಕತೆ ಬಗ್ಗೆ ತರಬೇತಿ ಹಾಗೂ ಖಾದ್ಯಗಳ ಪ್ಯಾಕಿಂಗ್‌ಗೂ ತರಬೇತಿ ನೀಡಲಾಗುವುದು. ನಮ್ಮಲ್ಲಿರುವ ವಿಜ್ಞಾನಿಗಳು ಮತ್ತು ಸೌಲಭ್ಯಗಳನ್ನು ರೈತರು, ಆಸಕ್ತರು ಸದುಪಯೋಗ ಪಡಿಸಿಕೊಳ್ಳಬೇಕೆಂದರು.

ಕೆಎಪಿಪಿಇಸಿ ಯ ವ್ಯವಸ್ಥಾಪಕ ನಿರ್ದೇಶಕ ಸಿ.ಎ.ಶಿವಪ್ರಕಾಶ್ ಮಾತನಾಡಿ, ರೈತರ ಆದಾಯ ಹೆಚ್ಚಿಸಿ ಅವರನ್ನೂ ಉದ್ದಿಮೆದಾರರನ್ನಾಗಿ ಮಾಡುವ ಉದ್ದೇಶದಿಂದ ಈ ಯೋಜನೆಯನ್ನು 2020-21 ರಲ್ಲಿ ಪ್ರಾರಂಭಿಸಲಾಗಿದೆ. ರೂ. 15 ಲಕ್ಷದವರೆಗೆ ಸಹಾಯಧನ ನೀಡಲಾಗುವುದು. ಈ ಯೋಜನೆಯಡಿ ಕೇಂದ್ರ ಮತ್ತು ರಾಜ್ಯ ಸೇರಿ ರೂ. 10 ಸಾವಿರ ಕೋಟಿ ಮಂಜೂರಾಗಿದ್ದು ರಾಜ್ಯದ ಪಾಲು ರೂ.493.65ಕೋಟಿ ಆಗಿದೆ

ಕೆಎಪಿಪಿಇಸಿ ಟೀಂ ಲೀಡರ್ ಅರವಿಂದ ಕರೆ ಮಾತನಾಡಿ, ಪಿಎಂಎಫ್‌ಎಂಇ ಯೋಜನೆಯಡಿ ಉದ್ದಿಮೆಗಳಿಗೆ ವೃತ್ತಿಪರ ಹಾಗೂ ತಾಂತ್ರಿಕ ಬೆಂಬಲ ದೊರೆಯುವಿಕೆಯನ್ನು ಹೆಚ್ಚಿಸುವುದು. ಬ್ರಾಂಡಿಂಗ್ ಹಾಗೂ ಮಾರ್ಕೆಟಿಂಗ್ ಬೆಂಬಲ, ಸಾಮಾನ್ಯ ಮೂಲಭೂತ ಸೌಕರ್ಯಕ್ಕೆ ಬೆಂಬಲ, ಸಾಮರ್ಥ್ಯ ನಿರ್ಮಾಣ ಹಾಗೂ ಸಂಶೋಧನೆ, ಕಿರು ಉದ್ದಿಮೆಗಳ ವೈಯಕ್ತಿಕ ಹಾಗೂ ಗುಪುಗಳಿಗೆ ಬೆಂಬಲ ನೀಡಲಾಗುವುದು.

ಬ್ರಾಂಡಿಂಗ್ ಹಾಗೂ ಮಾರ್ಕೆಟಿಂಗ್ ಅನ್ನು ಬಲಪಡಿಸುವುದು, ಸಾಮಾನ್ಯ ಸಂಸ್ಕರಣಾ ಸೌಲಭ್ಯ, ಪ್ರಯೋಗಾಲಯಗಳು, ದಾಸ್ತಾನನ್ನು ಶೇಖರಣೆ, ಪ್ಯಾಕೇಜಿಂಗ್, ಮಾರ್ಕೆಟಿಂಗ್ ಹಾಗೂ ಇನ್‌ಕ್ಯೂಬೇಷನ್ ಸೇವೆಗಳಂತಹ ಸಾಮಾನ್ಯ ಸೇವೆಗಳ ದೊರೆಯುವಿಕೆಯನ್ನು ಹೆಚ್ಚಿಸುವುದು. ತಾಂತ್ರಿಕ ಸಂಸ್ಥೆಗಳನ್ನು ಬಲಪಡಿಸುವುದು, ಆಹಾರ ಸಂಸ್ಕರಣಾ ವಲಯದಲ್ಲಿ ಸಂಶೋಧನೆ ಹಾಗೂ ತರಬೇತಿಗೆ ಪ್ರೋತ್ಸಾಹ ನೀಡಲಾಗುವುದು ಎಂದ ಅವರು, ಈ ಯೋಜನೆಯಡಿ ಅರ್ಜಿ ಸಲ್ಲಿಕೆ ವಿಧಾನ,

ಡಿಆರ್‌ಪಿ (ಜಿಲ್ಲಾ ಸಂಪನ್ಮೂಲ ವ್ಯಕ್ತಿ) ಆಯ್ಕೆ ಇತರೆ ಮಾಹಿತಿ ನೀಡಿದರು.

ಲೀಡ್ ಬ್ಯಾಂಕ್ ಮ್ಯಾನೇಜರ್ ಹನುಮಂತಪ್ಪ ಮಾತನಾಡಿ ಈ ಯೋಜನೆಗೆ ಸಂಬಂಧಿಸಿದಂತೆ ಲಭ್ಯವಿರುವ ಸಾಲ ಸೌಲಭ್ಯದ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಫಲಾನುಭವಿಗಳೊಂದಿಗೆ ಸಂವಾದ ನಡೆಸಲಾಯಿತು.

# ಎನ್‌ಡಿಎ ಸರ್ಕಾರದ ವಿರುದ್ಧ 'ಕಿಡಿ'ಕಾರಿದ ರಾಹುಲ್ ಗಾಂಧಿ



**ನವದೆಹಲಿ:** ಪಾಟ್ನಾದಲ್ಲಿ ಪ್ರತಿಭಟನಾಕಾರರ ಮೇಲೆ ಪೊಲೀಸರು ಲಾಠಿ ಚಾರ್ಜ್ ಮಾಡಿದ ನಂತರ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಬಿಹಾರದ ಎನ್‌ಡಿಎ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಆದರೆ, ಕಳೆದ ಎರಡು ವಾರಗಳಿಂದ ಮುಷ್ಕರ ನಡೆಸುತ್ತಿರುವ 16 ಭೂಮಾಪಕರನ್ನು ಅಮಾನತುಗೊಳಿಸಿದ ರಾಜ್ಯ ಸರ್ಕಾರದ ಕ್ರಮವನ್ನು ಪ್ರತಿಭಟಿಸಿದ ಕಾರ್ಮಿಕರ ಮೇಲೆ ವರದಿಯಾದ ಲಾಠಿ ಚಾರ್ಜ್ ಅನ್ನು ಅವರು ಉಲ್ಲೇಖಿಸುತ್ತಿದ್ದಾರೆಯೇ ಅಥವಾ ಶಿಕ್ಷಕರ ನೇಮಕಾತಿ ಪರೀಕ್ಷೆಯ ಪೂರಕ ಫಲಿತಾಂಶಗಳನ್ನು ಬಿಡುಗಡೆ ಮಾಡುವಂತೆ ಒತ್ತಾಯಿಸಿ ಧರಣಿ ನಡೆಸುತ್ತಿರುವ ಆಕಾಂಕ್ಷಿಗಳ ವಿರುದ್ಧದ ಲಾಠಿ ಚಾರ್ಜ್ ಅನ್ನು ಅವರು ಉಲ್ಲೇಖಿಸುತ್ತಿದ್ದಾರೆಯೇ ಎಂಬುದು ಸ್ಪಷ್ಟವಾಗಿಲ್ಲ.

https://twitter.com/RahulGandhi/statµ/1965813425596153905

ಈ ಬಾರಿ ರಾಜ್ಯದ ಯುವಕರು ಸರ್ಕಾರಕ್ಕೆ ಅದರ ನಿಜವಾದ ಸ್ಥಳವನ್ನು ತೋರಿಸುತ್ತಾರೆ ಮತ್ತು ಕ್ಷಣಗಣನೆ ಪ್ರಾರಂಭವಾಗಿದೆ ಎಂದು ಗಾಂಧಿ ಹೇಳಿದ್ದಾರೆ.ಪೊಲೀಸರ ಲಾಠಿ ಚಾರ್ಜ್ ಪ್ರತಿಭಟನಾಕಾರರ ವೀಡಿಯೊವನ್ನು ಹಂಚಿಕೊಂಡ ಗಾಂಧಿ, ಉದ್ಯೋಗ ಕೇಳಿದಾಗ, ಒಬ್ಬರಿಗೆ ಲಾಠಿ ಚಾರ್ಜ್ ಸಿಗುತ್ತದೆ. ಹಕ್ಕುಗಳ ಬದಲಿಗೆ, ಒಬ್ಬರಿಗೆ ದೌರ್ಜನ್ಯ ಸಿಗುತ್ತದೆ ಎಂದು ಹಿಂದಿಯಲ್ಲಿ ಪೋಸ್ಟ್ ಮಾಡಿದ್ದಾರೆ.

ಈ ಬಾರಿ, ಬಿಹಾರದ ಯುವಕರು ಈ ಗುಂಡಾ ಸರ್ಕಾರಕ್ಕೆ ಅದರ ನಿಜವಾದ ಸ್ಥಳವನ್ನು ತೋರಿಸುತ್ತಾರೆ ಕ್ಷಣಗಣನೆ ಆರಂಭವಾಗಿದೆ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ಹೇಳಿದರು.ಬಿಹಾರದಲ್ಲಿ ವಿಧಾನಸಭಾ ಚುನಾವಣೆಗಳು ಮುಂದಿನ ಎರಡು ತಿಂಗಳಲ್ಲಿ ನಡೆಯಲಿವೆ.

## ಸೆ.12 ರಂದು 'ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ' ಅಂಗವಾಗಿ ಜಾಗೃತಿ ಜಾಥ

**ಬಳ್ಳಾರಿ:** ಜಿಲ್ಲಾ ಕೇಂದ್ರದಲ್ಲಿ 'ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ' ಅಂಗವಾಗಿ "ಆತ್ಮಹತ್ಯೆ ನಿರೂಪಣೆಯನ್ನು ಬದಲಾಯಿಸುವುದು" ಎಂಬ ಘೋಷಣೆಯೊಂದಿಗೆ ಸೆ.12 ರಂದು ಬೆಳಿಗ್ಗೆ 09 ಗಂಟೆಗೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಲ್ಲಿ ಜಾಗೃತಿ ಜಾಥ ಏರ್ಪಡಿಸಲಾಗಿದೆ.ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದೆ.ಜಿಲ್ಲಾ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ಜಾಥಾ ಗೆ ಚಾಲನೆ ನೀಡುವರು.ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅಧ್ಯಕ್ಷತೆ ವಹಿಸುವರು.ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗು ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಲ್ಲಾ ರೋಹವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ.ಕೆ., ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಹಾಗೂ ಇತರರು ಭಾಗವಹಿಸುವರು. ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಹಾಗೂ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್.ಕೆ.ಜಿ ಅವರು ಪ್ರಾಸ್ತಾವಿಕವಾಗಿ ಮಾತನಾಡುವರು.ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಂ ಅವರು ಸ್ವಾಗತ ಹಾಗೂ ಕಾರ್ಯಕ್ರಮ ನಿರೂಪಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಮೀನುಮರಿ ವಿತರಣೆ; ಅರ್ಜಿ ಆಹ್ವಾನ


**ಬಳ್ಳಾರಿ:** ಮೀನುಗಾರಿಕೆ ಇಲಾಖೆ ವತಿಯಿಂದ 2025-26 ನೇ ಸಾಲಿನ ಕೃಷಿಹೊಂಡ ಮತ್ತು ಸ್ವಂತ ಕೊಳಗಳಿರುವ ರೈತರಿಗೆ ಮೀನು ಕೃಷಿ ಕೈಗೊಳ್ಳಲು ಉಚಿತವಾಗಿ ಮೀನುಮರಿಗಳನ್ನು ನೀಡಲು ಉದ್ದೇಶಿಸಲಾಗಿದ್ದು, ಅರ್ಹ ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ಗರಿಷ್ಠ 500 ಸಂಖ್ಯೆಯ ಭಾರತೀಯ ಗೆಂಡೆ ಮೀನು, ಸಾಮಾನ್ಯ ಗೆಂಡೆ ಮೀನು ಹಾಗೂ ಬಲಿತ ಮೀನುಮರಿ ತಳಿಯ ಮೀನುಗಳನ್ನು ಉಚಿತವಾಗಿ ನೀಡಲಾಗುವುದು.

# ಧರ್ಮಾಂಧರಿಂದ ಉದ್ವಿಗ್ನಗೊಂಡಿದ್ದ ಮದ್ದೂರು ಯಥಾಸ್ಥಿತಿ

**ಮದ್ದೂರು:** ಹೊತ್ತಿ ಉರಿದಿದ್ದ ಪಟ್ಟಣದಲ್ಲಿ ಇದೀಗ ಜನಜೀವನ ಯಥಾಸ್ಥಿತಿಗೆ ಮರಳಿದೆ. ಎಂದಿನಂತೆ ಜನರು ತಮ ತಮ್ಮ ಚಟುವಟಿಕೆಯಲ್ಲಿ ತೊಡಗಿರುವುದು ಕಂಡುಬಂತು. ಈ ನಡುವೆ ಘಟನೆ ಮರುಕಳಿಸದಂತೆ ಪೊಲೀಸರು ಕಟ್ಟೆಚ್ಚರ ವಹಿಸಿದ್ದಾರೆ.

ಮದ್ದೂರು ಪಟ್ಟಣದಲ್ಲಿ ಪರಿಸ್ಥಿತಿ ಶಾಂತಿಯುತವಾಗಿದೆ. ಪೊಲೀಸ್ ಬಂದೋಬಸ್ತನ್ನು ಮುಂದುವರೆಸಿದ್ದೇವೆ ಎಂದು ಮಂಡ್ಯ ಜಿಲ್ಲಾ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿಯವರು ತಿಳಿಸಿದ್ದಾರೆ.

ಈ ಸಂಜೆಯೊಂದಿಗೆ ಮಾತನಾಡಿದ ಅವರು, ಇದುವರೆಗೂ ಏಳು ಪ್ರಕರಣಗಳು



ದಾಖಲಾಗಿವೆ. ಘಟನೆ ಸಂಬಂಧ 22 ಮಂದಿಯನ್ನು ಬಂಧಿಸಿದ್ದೇವೆ. ಕಲ್ಲು ತೂರಾಟ ಪ್ರಕರಣದಲ್ಲಿ ತಲೆಮರೆಸಿಕೊಂಡಿರುವ ಆರೋಪಿಗಳ ಬಂಧನ ಕಾರ್ಯ ತೀವ್ರಗೊಂಡಿದೆ ಎಂದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿಯವರು ನಿನ್ನೆ ಮದ್ದೂರು ಪಟ್ಟಣದಲ್ಲಿ ಗಣೇಶಮೂರ್ತಿಗಳ ಸಾಮೂಹಿಕ ವಿಸರ್ಜನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪ್ರಚೋದನಕಾರಿ ಭಾಷಣ ಮಾಡಿದರೆಂಬ ಕಾರಣಕ್ಕೆ ಅವರ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಅವರು ಹೇಳಿದರು.

# ಹಾಂಗ್ ಕಾಂಗ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿ ಕ್ವಾರ್ಟರ್ ಫೈನಲ್‌ಗೆ ಭಾರತದ ಸಾತ್ವಿಕ್-ಚಿರಾಗ್

**ಹಾಂಗ್ ಕಾಂಗ್:** ಭಾರತದ ಅಗ್ರ ಪುರುಷರ ಡಬಲ್ಸ್ ಜೋಡಿ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಇಂದು ಇಲ್ಲಿ ನಡೆದ ಹಾಂಗ್ ಕಾಂಗ್ ಓಪನ್ ಸೂಪರ್ 500 ಬ್ಯಾಡಿಂಟನ್ ಪಂದ್ಯಾವಳಿಯ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ.

ಎಂಟನೇ ಶೇಯಾಂಕಿತ ಮಾಜಿ ವಿಶ್ವದ ನಂಬರ್ ಒನ್ ಜೋಡಿ, ಮೊದಲ ಪಂದ್ಯದಲ್ಲಿ ಸೋತ ನಂತರ 63 ನಿಮಿಷಗಳ ಹೋರಾಟದಲ್ಲಿ ಶೇಯಾಂಕವಿಲ್ಲದ ಥಾಯ್ ಜೋಡಿಯನ್ನು 18-21, 21-15 21-11 ಸೆಟ್‌ಗಳಿಂದ ಸೋಲಿಸಿತು.

ಪ್ಯಾರಿಸ್‌ನಲ್ಲಿ ಎರಡನೇ ವಿಶ್ವ ಚಾಂಪಿಯನ್‌ಶಿಪ್ ಕಂಚಿನ ಪದಕ ಗೆದ್ದ ವಿಶ್ವದ 9 ನೇ ಶೇಯಾಂಕಿತ ಸಾತ್ವಿಕ್ ಮತ್ತು ಚಿರಾಗ್ ಮುಂದಿನ ಪಂದ್ಯದಲ್ಲಿ ಮಲೇಷ್ಯಾದ ಜುನೈದಿ ಆರಿಫ್ ಮತ್ತು ರಾಯ್ ಕಿಂಗ್ ಯಾಪ್ ಅವರನ್ನು ಎದುರಿಸಲಿದ್ದಾರೆ.



ಸುಕ್ಫುನ್ ಮತ್ತು ತೀರರತ್ನಕುಲ್ ಪ್ರಾಬಲ್ಯ ಸಾಧಿಸಿದ್ದರಿಂದ ಭಾರತೀಯ ಜೋಡಿ ನಿಧಾನಗತಿಯ ಆರಂಭವನ್ನು ಹೊಂದಿದ್ದು, ಆರಂಭಿಕ ಪಂದ್ಯದಲ್ಲಿ 8-11 ಅಂತರದಿಂದ ಹಿನ್ನಡೆ ಅನುಭವಿಸಿತು. 18-18 ಅಂತರದಲ್ಲಿ ಹೋರಾಡಿದರೂ, ಥಾಯ್ ಜೋಡಿ ಅಂತಿಮ ಮೂರು ಅಂಕಗಳನ್ನು ಗಳಿಸಿ ಆರಂಭಿಕ ಪಂದ್ಯವನ್ನು ಗೆದ್ದುಕೊಂಡಿತು.

ಈ ಹಿನ್ನಡೆಯಿಂದ ಕಂಗೆಟ್ಟ ಭಾರತೀಯರು ಎರಡನೇ ಪಂದ್ಯದಲ್ಲಿ ಹೊಸ ಉತ್ಸಾಹದಿಂದ ಆಡಿದರು. 2-2 ರಿಂದ 7-7 ಅಂತರದಲ್ಲಿ ನಡೆದ ಬಿಗಿ ಹೋರಾಟದ ನಂತರ, ಅವರು ಆಟದ ಮಧ್ಯದ ವಿರಾಮದ ವೇಳೆಗೆ 11-10 ಮುನ್ನಡೆ ಸಾಧಿಸಿದರು ಮತ್ತು ಸ್ಥಿರವಾಗಿ ಮುನ್ನಡೆಯುತ್ತಾ ಪಂದ್ಯವನ್ನು ನಿರ್ಣಾಯಕ ಹಂತಕ್ಕೆ ಕೊಂಡೊಯ್ದರು.

ಮೂರನೇ ಗೇಮ್ ಏಕಪಕ್ಷೀಯವಾಗಿತ್ತು, ಸಾತ್ವಿಕ್ ಮತ್ತು ಚಿರಾಗ್ 7-2 ಮುನ್ನಡೆ ಸಾಧಿಸಿದರು ಮತ್ತು ನಂತರ ಥಾಯ್ ಜೋಡಿ ಎಡವಿದಂತೆ ಕಂಡರು.ಲಕ್ಷ್ಯ ಸೇನ್ ಮತ್ತು ಎಚ್‌ಎಸ್ ಪ್ರಣಯ್ ಅವರು ಮುಖಾಮುಖಿಯಾಗಲಿದ್ದಾರೆ. ಆದರೆ ಮಹಿಳಾ ಡಬಲ್ ಜೋಡಿ ರುತಪರ್ಣಾ ಮತ್ತು ಶ್ವೇತಪರ್ಣಾ ಪಾಂಡಾ ಅವರು ಐದನೇ ಶ್ರೇಯಾಂಕದ ಚೀನಾದ ಲಿ ಯಿ ಜಿಂಗ್ ಮತ್ತು ಲುವೊ ಕ್ಸು ಮಿನ್ ಅವರನ್ನು ಎದುರಿಸಲಿದ್ದಾರೆ.

## ಮಾಜಿ ಸೈನಿಕರಿಗೆ ಸಂಪರ್ಕ ಶಿಬಿರ

**ಬಳ್ಳಾರಿ:** ಬೆಳಗಾವಿಯ ರಕ್ಷಣಾ ಇಲಾಖೆಯ ಮರಾಠಾ ಲೈಟ ಇನ್‌ಫಂಟ್ರಿ ಸೆಂಟರ್ ವತಿಯಿಂದ ಅಕ್ಟೋಬರ್ 19 ರಂದು ಬೆಳಿಗ್ಗೆ 8.30 ರಿಂದ ಸಂಜೆ 04 ಗಂಟೆಯವರೆಗೆ ಬೆಳಗಾವಿ ನಗರದ ಶಿವಾಜಿ ಸ್ಟೇಡಿಯಂನಲ್ಲಿ ಮಾಜಿ ಸೈನಿಕರು ಮತ್ತು ಅವರ ಅವಲಂಬಿತರಿಗಾಗಿ ಸಂಪರ್ಕ ಶಿಬಿರ ಆಯೋಜಿಸಲಾಗಿದೆ. ಈ ಶಿಬಿರದಲ್ಲಿ ಮಾಜಿ ಸೈನಿಕರ ನಿವೃತ್ತಿ ಪಿಂಚಣಿ, ಕುಟುಂಬ ಪಿಂಚಣಿ, ಸ್ಪರ್ಶ್ (SPARSH) ಮತ್ತು ಇಸಿಹೆಚ್‌ಎಸ್ ಗೆ ಸಂಬಂಧಿಸಿದ ವಿಷಯಗಳ ಕುರಿತು ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಶಿಬಿರದಲ್ಲಿ ಪಾಲ್ಗೊಳ್ಳುವ ಫಲಾನುಭವಿಗಳು ತಮ್ಮ ಕುಂದು-ಕೊರತೆ ಕುರಿತು ವಿವರಗಳನ್ನು ನೋಂದಾಯಿಸಿಕೊಂಡು, ನೋಂದಣಿ ಸಂಖ್ಯೆ ಪಡೆಯಬೇಕು. ನೋಂದಣಿ ಮಾಡಿಸುವ ಫಲಾನುಭವಿಗಳು ತಮ್ಮ ಕುಂದು ಕೊರತೆಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಮೊಬೈಲ್ (ವಾಟ್ಸಾಪ್) ಸಂಖ್ಯೆ 8317350584, ದೂ.0831-2402821 ಮತ್ತು ಇಮೇಲ್ greatgorilla@nic.in ಗಳ ಮೂಲಕ ಅಪ್‌ಲೋಡ್ ಮಾಡಲು ಅವಕಾಶ ಇರುತ್ತದೆ. ಹಾಗಾಗಿ ಶಿಬಿರದಲ್ಲಿ ಬಳ್ಳಾರಿ ಜಿಲ್ಲೆಯ ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರು ಶಿಬಿರದಲ್ಲಿ ಪಾಲ್ಗೊಂಡು ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳಬಹುದು ಎಂದು ಎಂಎಲ್‌ಐಆರ್‌ಸಿ ಅಭಿಲೇಖಾಧಿಕಾರಿ ತಿಳಿಸಿದ್ದಾರೆ.

# ಬಸವ ತತ್ವ ಅಭಿಯಾನಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಗುರುಬಸವ ಸ್ವಾಮೀಜಿ ಕರೆ



ಚನ್ನಗಿರಿ ತಾಲೂಕು ಪಾಂಡೋಮಟ್ಟಿ ವಿರಕ್ತ ಮಠದಲ್ಲಿ ಬಸವ ಸಂಸ್ಕೃತಿ ಅಭಿಯಾನದ ಆಹ್ವಾನ ಪತ್ರಿಕೆ ಬಿಡುಗೊಡೆಗೊಳಿಸಲಾಯಿತು.

**ಚನ್ನಗಿರಿ** ಬಸವತತ್ವವನ್ನು ಪ್ರತಿಯೊಬ್ಬರ ಮನೆ ಬುದ್ದಿ ಭಾವದಲ್ಲಿ ಬಿತ್ತಬೇಕಾಗಿದೆ.ಈ ನೆಲೆಯಲ್ಲಿ ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಚಿಂತನೆಯ ಫಲಶೃತಿಯೇ ಬಸವ ಸಂಸ್ಕೃತಿಅಭಿಯಾನವಾಗಿದ್ದು ಸೆಪ್ಟೆಂಬರ್ 15 ರಂದು ದಾವಣಗೆರೆಯ ಬಾಪೂಜಿ ಸಮುದಾಯ ಭವನದಲ್ಲಿ ನಡೆಯಲಿದೆ. ಅಭಿಯಾನದಲ್ಲಿ ಚನ್ನಗಿರಿ ತಾಲೂಕಿನಿಂದ ಲಿಂಗಾಯತ ಸಮುದಾಯದ ಕಟ್ಟಕಡೆಯ ವ್ಯಕ್ತಿಯು ಭಾಗವಹಿಸಬೇಕು ಎಂದು ಪಾಂಡೋಮಟ್ಟಿ ವಿರಕ್ತಮಠದ ಡಾ.ಗುರುಬಸವ ಸ್ವಾಮೀಜಿ ಕರೆನೀಡಿದರು.

ಚನ್ನಗಿರಿ ತಾಲೂಕು ಪಾಂಡೋಮಟ್ಟಿ ವಿರಕ್ತಮಠದಲ್ಲಿ ಮಂಗಳವಾರ ನಡೆದ ಪೂರ್ವಬಾವಿ ಸಭೆಯ ನೇತೃತ್ವ ವಹಿಸಿ ಮಾತನಾಡಿದರು. ಅಭಿಯಾನದಲ್ಲಿ ಸಮಸಮಾಜದ ನಿರ್ಮಾಣ, ವ್ಯಸನಮುಕ್ತ ಸಮಾಜದ ನಿರ್ಮಾಣ, ಅಂಧಶ್ರದ್ದೆ ಅಳಿಸಿ ಸುಜ್ಞಾನ ಬೆಳೆಸುವುದು, ಸಧೃಡ ಸಮಾಜಕಟ್ಟುವುದು, ಮಕ್ಕಳಲ್ಲಿ ಆಧ್ಯಾತ್ಯದಅರಿವು ಮೂಡಿಸುವುದು, ಮಹಿಳೆಯರ ಘನತೆಯನ್ನುಕಾಪಾಡುವುದು ಹಾಗೂ ವ್ಯಕ್ತಿತ್ವ ವಿಕಸನ ಅಲ್ಲದೆಇತರೆ ಸಮಾಜದಅಭಿವೃದ್ಧಿಗೆ ಮುನ್ನಡಿ ಬರೆಯುವ ಸಂಕಲ್ಪ ಮಾಡಲಾಗುತ್ತದೆಎಂದು ತಿಳಿಸಿದರು. ಸೆಪ್ಟಂಬರ್ 15 ರ ಸೋಮವಾರ ಬೆಳಗ್ಗೆ ದಾವಣಗೆರೆಯ ಎ.ವಿ.ಕೆ ಕಾಲೇಜು ಮೈದಾನ ಡಾ.ಪಾರ್ವತಮ್ಮ ಸಭಾಂಗಣದಲ್ಲಿ 11 ಕ್ಕೆ ವಚನ ಸಂವಾದ ಕಾರ್ಯಕ್ರಮ, ಸಂಜೆ 4.30 ಕ್ಕೆ ಮೋತಿ ವೀರಪ್ಪ ಕಾಲೇಜು ಅವರಣದಿಂದ ಸಾಮರಸ್ಯ ನಡೆಗೆ, ಸಂಜೆ 6 ಗಂಟೆಗೆ ಸಾರ್ವಜನಿಕ ಸಮಾವೇಶ, 8 ಗಂಟೆಗೆ ಜಂಗಮದೆಡೆಗೆ ನಾಟಕ ಪ್ರದರ್ಶನ, ಎಲ್ಲರಿಗೂ ದಾಸೋಹದ ವ್ಯವಸ್ಥೆಯನ್ನು ಮಾಡಲಾಗುವುದು ಎಂದರು.

ಮಾಜಿ ಶಾಸಕ ಮಾಡಾಳ್ ವಿರೂಪಾಕ್ಷಪ್ಪ ಮಾತನಾಡಿ ಲಿಂಗಾಯತ ಸಮುದಾಯಕ್ಕೆ ಇಂದು ಹೊಸ ಚೈತನ್ಯ ನೀಡುವಂತ ಕಾರ್ಯಕ್ರಮ ಜರುಗುತ್ತಿರುವುದು ನಮ್ಮೆಲ್ಲರ ಭಾಗ್ಯವಾಗಿದೆ.ಬಸವಾದಿ ಶಿವಶರಣರ ತತ್ವಾದರ್ಶಗಳನ್ನು ಜನಮನದಲ್ಲಿ ಬಿತ್ತುವ ಸದಾಶಯಕ್ಕೆರಾಜ್ಯದಎಲ್ಲಾ ಲಿಂಗಾಯತ ಮಠಾಧೀಶರುಅಭಿಯಾನ ನಡೆಸುತ್ತಿರುವುದು ಭವಿಷ್ಯದ ಪ್ರಗತಿಗೆ ನಾಂದಿಯಾಗಿದೆ. ತಾಲೂಕಿನಿಂದಅಭಿಯಾನಕ್ಕೆ ಸುಮಾರು ಹತ್ತು ಸಾವಿರ ಜನರು ಭಾಗಿಯಾಗಬೇಕು ಎಂದು ತಿಳಿಸಿದರು. ಸಭೆಯಲ್ಲಿ ಬಿಲ್ಲಹಳ್ಳಿ, ಗೋಪೆನಹಳ್ಳಿ, ಮಲಹಾಳ್, ಕೊರಟಿಕೆರೆ, ಹಿರೇಕೋಗಲೂರು, ನೆಲ್ಲಿಹಂಕಲು, ಸೋಮಶೆಟ್ಟಿಹಳ್ಳಿ, ಆಲೂರು, ದೇವರಬೆಳಕೆರೆ, ಚಿಕ್ಕಕೋಗಲೂರು, ನಲ್ಕುದುರೆ ಹಾಗೂ ಸಂತೆಬೆನ್ನೂರು ಗ್ರಾಮಗಳಿಂದ ಜನರು ಆಗಮಿಸಿದ್ದರು.

ಸಭೆಯಲ್ಲಿ ಜಿಲ್ಲಾ ಸಮಿತಿಯ ಲಿಂಗಾನಂದ ಕಮ್ಮತ್ತಹಳ್ಳಿ, ಅವಿನಾಶ್ ಬಸವನಕೊಟೆ, ಮರುಳಸಿದ್ದಯ್ಯ, ಟಿ.ಎಸ್.ಸ್ವಾಮಿ, ವೀರಶೈವ ಲಿಂಗಾಯತರಾಜ್ಯ ನಿರ್ದೇಶಕಿ ಶಶಿಕಲಾ ಮೂರ್ತಿ, ಜಿಲ್ಲಾ ನಿರ್ದೇಶಕಉಮೇಶ್, ತಾ.ಅಧ್ಯಕ್ಷ ಹರೋಸಾಗರ ಪ್ರಕಾಶ್, ಜಾಗತಿಕ ಲಿಂಗಾಯಿತ ಪರಿಷತ್‌ನ ತಾಲೂಕು ಅಧ್ಯಕ್ಷರಾಜಪ್ಪ, ಮಹಿಳಾ ಘಟಕದಅಧ್ಯಕ್ಷೆ ಮಂಜುಳಾ ರಾಜು, ಕೆಪಿಸಿಸಿ ಸದಸ್ಯ ವಡ್ನಾಳ್ ಜಗದೀಶ್, ಎಂ.ಯು.ಚನ್ನಬಸಪ್ಪ, ಶಿವಮೂರ್ತಪ್ಪ ಹಾಗೂ ಇತರರು ಇದ್ದರು.

# ಸಮಸ್ಯೆಗಳಿಗೆ ಆತ್ಮಹತ್ಯೆ ಪರಿಹಾರವಲ್ಲ, ಮುಕ್ತ ಮನಸಿನಿಂದ ಚರ್ಚಿಸಿದಲ್ಲಿ ಜಟಿಲತೆ ನಿವಾರಣೆ




**ದಾವಣಗೆರೆ :** ಎಲ್ಲಾ ಸಮಸ್ಯೆಗಳಿಗೂ ಆತ್ಮಹತ್ಯೆ ಒಂದೇ ಪರಿಹಾರವಲ್ಲ. ಮುಕ್ತ ಮನಸಿನಿಂದ ಚರ್ಚೆ ಮಾಡುವ ಮೂಲಕ ಸಮಸ್ಯೆಗೆ ಪರಿಹಾರ ಕಂಡುಕೊಂಡು ಆತ್ಮಹತ್ಯೆ ಅಲೋಚನೆಯಿಂದ ಹೊರಬರಬಹುದೆಂದು 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ವಿಮರ್ಶಾ ಮಂಡಳಿಯ ಅಧ್ಯಕ್ಷರಾದ ಎಂ.ಹೆಚ್.ಅಣ್ಣಯ್ಯ ಹೇಳಿದರು.

ಬುಧವಾರ(ಸೆ.10) ರಂದು ನಗರದ ಬಿ.ಎಸ್.ಚನ್ನಬಸಪ್ಪ ಪ್ರಥಮ ದರ್ಜೆ ಕಾಲೇಜು ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ, ಚಿಗಟೇರಿ ಜಿಲ್ಲಾ ಆಸ್ಪತ್ರೆ ಮನೋವೈದ್ಯಕೀಯ ವಿಭಾಗ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಬಿ.ಎಸ್ ಚನ್ನಬಸಪ್ಪ ಪ್ರಥಮ ದರ್ಜೆ ಕಾಲೇಜು, ರಾಷ್ಟ್ರೀಯ ಸೇವಾ ಯೋಜನೆ ವಿಭಾಗ ವತಿಯಿಂದ "ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆಯನ್ನು ಆತ್ಮಹತ್ಯೆಯ ನಿರೂಪಣೆಯನ್ನು ಬದಲಾಯಿಸೋಣ ಎಂಬ ಘೋಷಣೆಯೊಂದಿಗೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತಾನಾಡಿದರು.

ಆತ್ಮಹತ್ಯೆ ಎಂಬುದು ಸ್ವಂತಕ್ಕೆ ಮಾಡಿಕೊಳ್ಳುವ ಮಹಾಮೋಸ. ಆತ್ಮಹತ್ಯೆಗಳನ್ನು ತಡೆಗಟ್ಟಲು ನಾವು ಆಧ್ಯಾತ್ಮ ಚಟುವಟಿಕೆಗಳ ಕಡೆಗೆ ಒಲವು ತೋರುವುದು ಅತ್ಯವಶ್ಯಕ. ಹಿರಿಯರ ನುಡಿಗಳು, ಪುರಾಣಗಳು, ಧ್ಯಾನ, ಯೋಗದಿಂದ ಮನುಷ್ಯರು ಸಿಟ್ಟು, ಚಂಚಲತೆ ಹಾಗೂ ಗೊಂದಲಗಳಿಂದ ಹೊರಬರಲು ಮತ್ತು ಮನಸ್ಸನ್ನು ಶಾಂತಯುತವಾಗಿ ಇಟ್ಟುಕೊಳ್ಳಲು ಸಾಧ್ಯವಾಗುತ್ತದೆ.

ಆತ್ಮಹತ್ಯೆಗೆ ಶರಣಾಗುವುದು ಮಹಾಪಾಪ, ಏನೇ ಇದ್ದರೂ ಕೂಡ ಎದುರಿಸಿ ಹೋರಾಡಿ ಗೆಲ್ಲಬೇಕು. ನಮ್ಮನ್ನು ನಂಬಿಕೊಂಡು ಕುಟುಂಬಸ್ಥರು ಇರುತ್ತಾರೆ. ಅವರ ಬಗ್ಗೆಯಾದರು ಒಮ್ಮೆ ಯೋಚನೆ ಮಾಡಬೇಕು, ಆಗಲಾದರೂ ಮನಸ್ಸು ಬದಲಾಗುತ್ತದೆ. ಒತ್ತಡದಿಂದ ಮುಕ್ತರಾಗಲು ಧ್ಯಾನ, ಯೋಗ ಪ್ರಾಣಯಾಮ ಮಾಡಿದರೆ ಸಹಾಯವಾಗುತ್ತದೆ ಎಂದರು.

ಜಿಲ್ಲಾ ಸರ್ಜನ್ ಡಾ; ಎಂ.ಬಿ.ನಾಗೇಂದ್ರಪ್ಪ ಮಾತನಾಡಿ ಸೃಷ್ಠಿಯಲ್ಲಿ ಕೋಟ್ಯಾಂತರ ಜೀವಿಗಳಿವೆ, ಪ್ರತಿಯೊಂದು ಜೀವಿಯು ಹುಟ್ಟಿದ ಮೇಲೆ ತನ್ನದೇ ಆದ ಕರ್ತವ್ಯವನ್ನು ನಿರ್ವಹಿಸುತ್ತವೆ. ಅದೇ ರೀತಿಯಾಗಿ ಮನುಷ್ಯ ಇತರೆ ಜೀವಿಗಳಿಗಿಂತ ಹೆಚ್ಚು ಆಲೋಚಿಸುವ, ಸರಿ, ತಪ್ಪು ಎಂದು ತಿಳಿದುಕೊಳ್ಳುವ ವಿಶಿಷ್ಟವಾದ ಶಕ್ತಿಯನ್ನು ಪಡೆದುಕೊಂಡಿರುತ್ತಾನೆ. ಆದ್ದರಿಂದ ಜೀವನದಲ್ಲಿ ತನ್ನ ಕರ್ತವ್ಯವೇನು ಎಂಬುದನ್ನು ಅರಿತು ಬದುಕಬೇಕು, ಸಮಾಜದಲ್ಲಿ ಸುಧಾರಣೆ ತರುವಂತಹ ಕೆಲಸವನ್ನು ಮಾಡಬೇಕು ಎಂದರು.

ಡಿಹೆಚ್‌ಓ ಡಾ;ಷಣ್ಮುಖಪ್ಪ ಮಾತನಾಡಿ ತಂದೆ, ತಾಯಿ ಅಥವಾ ಕುಟುಂಬದವರು ನಮ್ಮನ್ನು ಬೆಳೆಸಲು ಎಷ್ಟು ಕಷ್ಟ ಪಟ್ಟಿರುತ್ತಾರೆ. ಈ ನಿಟ್ಟಿನಲ್ಲಿ ಅವರ ನೋವುಗಳನ್ನು ಅರ್ಥ ಮಾಡಿಕೊಳ್ಳಬೇಕು, ಸಿಟ್ಟಿನ ಕೈಗೆ ಬುದ್ಧಿಯನ್ನು ಕೊಟ್ಟು ಆತ್ಮಹತ್ಯೆಗೆ ಪ್ರಯತ್ನಿಸಬಾರದು ಎಂದರು.

ಜಿಲ್ಲಾ ಕುಷ್ಠರೋಗ ನಿವಾರಣಾಧಿಕಾರಿ ಡಾ.ಮಂಜುನಾಥ ಎಲ್.ಪಾಟೀಲ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿ.ಎಸ್ ಚನ್ನಬಸಪ್ಪ ಪ್ರಥಮ ದರ್ಜೆ ಕಾಲೇಜಿನ ಬಿ.ಸಿ.ಶಿವಕುಮಾರ, ಪ್ರಾಂಶುಪಾಲರಾದ ಪ್ರೊ.ಎಂ.ಸಿ. ಗುರು, ರಾಷ್ಟ್ರೀಯ ಸೇವಾ ಯೋಜನಾಧಿಕಾರಿ ಅಣ್ಣೇಶ್.ಪಿ, ಅನುಷಾ. ಎನ್.ಹೆಚ್. ಉಪಸ್ಥಿತರಿದ್ದರು.

# ಸರಳ ವಿವಾಹಕ್ಕೆ ಪ್ರೋತ್ಸಾಹ ಧನ

**ಹಾಸನ :** 2025-26ನೇ ಸಾಲಿನ ಆಯವ್ಯಯ ಭಾಷಣದ "ಕಂಡಿಕೆ ಸಂಖ್ಯೆ: 222 ರಲ್ಲಿ ಘೋಷಿಸಿರುವಂತೆ" ಆರ್ಥಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತರ ಮುಸ್ಲಿಂ, ಕ್ರಿಶ್ಚಿಯನ್,ಜೈನ್ ಸಿಖ್, ಬೌದ್ಧ ಮತ್ತು ಪಾರ್ಸಿ ಸಮುದಾಯದವರ ಸರಳ ವಿವಾಹಕ್ಕೆ ಪ್ರೋತ್ಸಾಹ ನೀಡಲು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುವ ಸಮೂಹ ವಿವಾಹಗಳ ವೆಚ್ಚಗಳಿಗಾಗಿ ಪ್ರತಿಜೋಡಿಗೆರೂ 50 ಸಾವಿರ ನೀಡುವಕಾರ್ಯಕ್ರಮವನ್ನು ನಿರ್ದೇಶನಾಲಯದಿಂದ ಅನುಷ್ಠಾನಗೊಳಿಸಲಾಗಿದೆ.ಷರತ್ತುಗಳು:ಅರ್ಜಿ ಸಲ್ಲಿಸುವ ವಧು-ವರರುಕರ್ನಾಟಕರಾಜ್ಯಕ್ಕೆ ಸೇರಿದಅಲ್ಪಸಂಖ್ಯಾತರ ಸಮುದಾಯಗಳಿಗೆ (ಮುಸ್ಲಿಂ, ಕ್ರಿಶ್ಚಿಯನ್,ಜೈನ್ ಸಿಖ್, ಬೌದ್ಧ ಮತ್ತು ಪಾರ್ಸಿ) ಸೇರಿದವರಾಗಿರಬೇಕು.ಸಾಮೂಹಿಕ ವಿವಾಹಗಳಲ್ಲಿ ಕನಿಷ್ಠ 10 ಜೋಡಿಗಳು ಭಾಗವಹಿಸಿರತಕ್ಕದ್ದು, ಈ ಸೌಲಭ್ಯ ಪಡೆಯುವ ವಧುವಿಗೆ ಕನಿಷ್ಠ 18 ವರ್ಷದಿಂದಗರಿಷ್ಠ 42 ವರ್ಷಗಳು, ವರನಿಗೆ ಕನಿಷ್ಠ 21 ವರ್ಷದಿಂದಗರಿಷ್ಠ 45 ವರ್ಷ ವಯಸ್ಸುಆಗಿರತಕ್ಕದ್ದು.

ಈ ಯೋಜನಯಡಿ ಸಹಾಯಧನ ಪಡೆಯಲು ವಧು-ವರರ ವಾರ್ಷಿಕಆದಾಯವುರೂ 2.50 ಲಕ್ಷಗಳು ಮತ್ತುಒಟ್ಟಾರೆಯಾಗಿರೂ 5 ಲಕ್ಷಗಳನ್ನು ಮೀರತಕ್ಕದ್ದಲ್ಲ.

ಈ ಸೌಲಭ್ಯವುಜೀವನದಲ್ಲಿಒಮ್ಮೆ ಮಾತ್ರ ಪಡೆಯಬಹುದಾಗಿದೆ.ವರನಿಗೆ ಈಗಾಗಲೇ ಜೀವಂತ ಪತ್ನಿಯಿದ್ದಲ್ಲಿಅಥವಾ ವಧುವಿಗೆಜೀವಂತ ಪತಿಇದ್ದಲ್ಲಿ ಈ ಯೋಜನೆಯುಅನ್ವಯಿಸುವುದಿಲ್ಲ.ಒಂದುಕುಟುಂಬದಲ್ಲಿಒಬ್ಬರಿಗೆ ಮಾತ್ರ ಈ ಯೋಜನೆಯ ಸೌಲಭ್ಯ ನೀಡತಕ್ಕದ್ದು.ಜಿಲ್ಲಾ ನೋಂದಣಿ/ ವಕ್ಫ್ ಬೋರ್ಡ್ ಕಚೇರಿಗಳಲ್ಲಿ ಸಾಮೂಹಿಕ ವಿವಾಹಗಳ ಆಯೋಜಕರೆಂದು ನೋಂದಣಿಯಾಗಿರುವ ಖಾಸಗಿ ಟ್ರಸ್ಟ್‌ಗಳು ದೇವಸ್ಥಾನದ ಟ್ರಸ್ಟ್‌ಗಳು, ಸಂಘಗಳು, ಸೊಸೈಟಿಗಳು, ವಕ್ಫ್ ಸಂಸ್ಥೆಗಳು ಮತ್ತು ಖಾಸಗಿ ವ್ಯಕ್ತಿಗಳು ನಡೆಸುವ ಸಾಮೂಹಿಕ ವಿವಾಹ ಕಾರ್ಯಕ್ರಮಗಳಲ್ಲಿ ವಿವಾಹವಾದಲ್ಲಿ ಮಾತ್ರಅರ್ಜಿ ಸಲ್ಲಿಸಲುಅರ್ಹರಿರುತ್ತಾರೆ.ಹೆಚ್ಚಿನ ಮಾಹಿತಿಗಾಗಿಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರಕಲ್ಯಾಣ ಇಲಾಖೆ, ಆಕಾಶವಾಣಿ ಹಿಂಭಾಗ, ಹಾಸನ.ದೂರವಾಣಿ ಸಂಖ್ಯೆ: 08172-268373/08172-267373 ಗೆ ಸಂರ್ಪಕಿಸಬಹುದಾಗಿದೆ. ಅಥವಾಆಯಾತಾಲ್ಲೂಕು ಮಾಹಿತಿ ಕೇಂದ್ರಗಳನ್ನು ಸಂರ್ಪಕಿಸಬಹುದಾಗಿದೆಎಂದುಅಲ್ಪಸಂಖ್ಯಾತರಕಲ್ಯಾಣಇಲಾಖೆಯಜಿಲ್ಲಾಅಧಿಕಾರಿ ತಿಳಿಸಿದ್ದಾರೆ.

# ಅರ್ಜಿಆಹ್ವಾನ

**ಹಾಸನ :** ಹಾಸನ ಜಿಲ್ಲೆಯಲ್ಲಿಕಾರ್ಯನಿರ್ವಹಿಸುತ್ತಿರುವ ' ಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ ಮತ್ತು ಪ.ವರ್ಗದ ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ 2025-26ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿಆಹ್ವಾನಿಸಲಾಗಿರುತ್ತದೆ.ವಿದ್ಯಾರ್ಥಿಯ ಪೋಷಕರ ವಾರ್ಷಿಕಆದಾಯ ಮಿತಿ:ಪ್ರವರ್ಗ-1, ಎಸ್.ಸಿ &ಎಸ್.ಟಿ ರೂ.2.50 ಲಕ್ಷ, ಪ್ರವರ್ಗ-2ಎ, 2ಬಿ,3ಎ, 3ಬಿ ರೂ.1 ಲಕ್ಷ, ವಿದ್ಯಾರ್ಥಿಗಳು https://shp.karnataka.gov.in/bcwdಅ ನ್ನು ಸಂಪರ್ಕಿಸಿ ಆನ್‌ಲೈನ್ ನಲ್ಲಿಅರ್ಜಿಯನ್ನು ಸಲ್ಲಿಸಬೇಕು.ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲುಅಕ್ಟೋಬರ್.04ಕೊನೆಯ ದಿನಾಂಕ.ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆಇರಬೇಕಾದಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದಆದೇಶಕ್ಕಾಗಿಇಲಾಖೆಯ ವೆಬ್‌ಸೈಟ್https://bcwd.karnataka.gov.in/ ನ್ನು ನೋಡಬಹುದು.

# ಸಾರ್ವಜನಿಕರ ಗಮನಕ್ಕೆ

**ಗದಗ :** ಭಾಗ್ಯಲಕ್ಷ್ಮೀ ಯೋಜನೆಯಡಿ 1-4-2006 ಜಾರಿಗೆ ತರಲಾಗಿದ್ದು, 18 ವರ್ಷ ಪೂರ್ಣಗೊಂಡ ಅರ್ಹ ಫಲಾನುಭವಿಗಳಿಗೆ 2024-25 ರಿಂದ ಪರಿಪಕ್ವ ಮೊತ್ತವನ್ನು ಪಾವತಿಸಬೇಕಾಗಿರುತ್ತದೆ. ಅದರಂತೆ 2006-2007 ಮತ್ತು 2007-08 ರಲ್ಲಿ ಭಾಗ್ಯಲಕ್ಷ್ಮೀ ಯೋಜನೆಯಡಿ ಅರ್ಹರಾದ ಫಲಾನುಭವಿಗಳು ಪರಿಪಕ್ವ ಮೊತ್ತ ಪಡೆಯಲು ಸಮೀಪದ ಅಂಗನವಾಡಿ ಕೇಂದ್ರ ಅಥವಾ ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ಭೇಟಿ ನೀಡಿ ಕ್ರಮ ವಹಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಕಟಣೆಯ ತಿಳಿಸಿದೆ.

# ಅರ್ಜಿ ಅವಧಿ ವಿಸ್ತರಣೆ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆಯ ಗಾಜನೂರಿನ ನವೋದಯ ವಿದ್ಯಾಲಯದ 2026-27 ನೇ ಸಾಲಿಗೆ ಆರನೇ ತರಗತಿ ಪ್ರವೇಶ ಪರೀಕ್ಷೆಯ ಆನ್‌ಲೈನ್ ಅರ್ಜಿ ಅವಧಿಯನ್ನು ಆ.13 ರವರೆಗೆ ವಿಸ್ತರಿಸಲಾಗಿದೆ.

ಈಗಾಗಲೇ 5ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಆನ್‌ಲೈನ್ ವಿಳಾಸ cbseitms.rcil.gov.in.nvs ಇಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಶಿವಮೊಗ್ಗ ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಮೂಹಿಕ ಸತ್ಯನಾರಾಯಣ ಪೂಜಾ ಕಾರ್ಯಕ್ರಮ



**ಚನ್ನಗಿರಿ:** ಚನ್ನಗಿರಿಯ ಊರಬಾಗಿಲ ಅಂಜನೇಯ ದೇಗುಲದ ಅವರಣದಲ್ಲಿ ವಿಶ್ವ ಹಿಂದೂಪರಿಷತ್ ಮತ್ತು ಭಜರಂಗದಳದ ವತಿಯಿಂದ ಪ್ರತಿಷ್ಟಾಪನೆ ಮಾಡಲಾಗಿರುವ ಗಣೇಶನ ಅಂಗವಾಗಿ ಪತಾಂಜಲಿ ಯೋಗ ಸಮಿತಿಯ ವತಿಯಿಂದ ಸಾಮೂಹಿಕ ಸತ್ಯನಾರಾಯಣ ಪೂಜಾ ಕಾರ್ಯಕ್ರಮವನ್ನು

ಹಮ್ಮಿಕೊಳ್ಳಲಾಗಿದ್ದು ಚನ್ನಗಿರಿಯ ಅರ್ಚಕರಾದ ರವಿಶಂಕರ ಗುರೂಜಿ ಮತ್ತು ವಿದ್ವಾನ್ ಬೂದಿಸ್ವಾಮಿ, ಕಾಶಿಜೋಯ್ಸ್‌ರವರು ಮತ್ತು ವಿವಿಧ ಅರ್ಚಕರ ನೇತ್ರತ್ವದಲ್ಲಿ ಪೂಜಾ ವಿಧಾನಗಳನ್ನು ನೆರವೇರಿಸಲಾಯಿತು.

ಪತಾಂಜಲಿ ಯೋಗ ಕೇಂದ್ರದ ಶಿಕ್ಷಕ ವಸಂತ್ ಮಾತನಾಡಿ ಪ್ರತಿ ವರ್ಷವೂ ಹಮ್ಮಿಕೊಳ್ಳುವಂತಹ ಸಾಮೂಹಿಕ ಸತ್ಯನಾರಾಯಣ ಪೂಜಾ ಕಾರ್ಯಕ್ರಮದಂತೆ ಈ ಬಾರಿಯೂ ಸಹ ಹಮ್ಮಿಕೊಳ್ಳಲಾಗಿದ್ದು ಈ ಬಾರಿಯ ಪೂಜಾಕಾರ್ಯಕ್ರಮದ ಅನುಷ್ಟಾನವನ್ನು ಯೋಗ ಸಮಿತಿಯಿಂದ ವಹಿಸಿಕೊಳ್ಳಲಾಗಿದ್ದು ಯಶಸ್ವಿಯಾಗಿ ನೆರವೇರಿದೆ ಎಂದು ತಿಳಿಸಿದರು.

# ಚೆಸ್‌ನಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ

**ಹಾವೇರಿ:** ಬಸವೇಶ್ವರ ನಗರದಲ್ಲಿರುವ ಸರ್ಕಾರಿ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಯಾದ ಆದಿತ್ಯಾ ಬಸವರಾಜ ಶಿವಪೂರ ಇತನು ಮಂಗಳವಾರದಂದು ನಡೆದ ಜಿಲ್ಲಾಮಟ್ಟದ ಕ್ರೀಡಾಕೂಟದಲ್ಲಿ ಚೆಸ್ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

ಇವನ ಈ ಸಾಧನೆಗೆ ಕಾಲೇಜಿನ ಪ್ರಾಚಾರ್ಯರಾದ ಡಾ. ಅರುಣಕುಮಾರ ಪಿ.ಜೆ., ಕ್ರೀಡಾ ಕಾರ್ಯದರ್ಶಿಗಳಾದ ಡಾ. ರಮೇಶಕುಮಾರ ಹಾಗೂ ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಮತ್ತು ಕಾಲೇಜಿನ ಎಲ್ಲ ಸಿಬ್ಬಂದಿ ವರ್ಗ ಅಭಿನಂದನೆ ಸಲ್ಲಿಸಿದ್ದಾರೆ.

# ಬಣಜಾರ್ ಸಮಾಜದ ವತಿಯಿಂದ ಬೆಂಗಳೂರು ಚಲೋ ಕಾರ್ಯಕ್ರಮ



**ಚನ್ನಗಿರಿ:** ಸರಕಾರ ಎಡಗೈ ಮತ್ತು ಬಲಗೈ ಮತ್ತು ಕೋಲೊಂಬೋ ಎಂದು ನೀಡಿರುವ ಮೀಸಲಾತಿಯಲ್ಲಿ ಬಣಜಾರ ಸಮಾಜದವರಿಗೆ ಸಾಕಷ್ಟು ಅನ್ಯಾಯವಾಗಿದ್ದು ಸೆಪ್ಟಂಬರ್ 10 ರಂದು ಬೆಂಗಳೂರು ಚಲೋ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು ಬಣಜಾರ್ ಸಮಾಜದ ವತಿಯಿಂದ ಬೃಹತ್ ಪ್ರತಿಭಟನೆಯನ್ನು ಸಹ ಹಮ್ಮಿಕೊಳ್ಳಲಾಗಿದೆ ಎಂದು ಬಣಜಾರ್ ಸಮಾಜದ ಚನ್ನಗಿರಿ ತಾಲೂಕು ಅಧ್ಯಕ್ಷ ಬಿ.ಎನ್. ವೀರೇಶ್ ನಾಯ್ಕ ಹೇಳಿದರು.

ಸೋಮವಾರ ಮಾದ್ಯಮದೊಂದಿಗೆ ಮಾತನಾಡಿ ಪ್ರತಿಭಟನೆಯನ್ನು ಬೆಂಗಳೂರಿನ ಫ್ರೀಡಂ ಪಾರ್ಕನಲ್ಲಿ ಬೆಳಗ್ಗೆ 11 ಕ್ಕೆ ಹಮ್ಮಿಕೊಳ್ಳಲಾಗಿದ್ದು ಒಟ್ಟು ಎಸ್.ಸಿ. ಪಟ್ಟಿಯಲ್ಲಿ 101 ಜಾತಿಗಳಿದ್ದು, ವರ್ಗೀಕರಣ ಮಾಡುವಾಗ 3 ವರ್ಗಗಳನ್ನು ಮಾಡಿದ್ದು ಎ ವರ್ಗ ಮತ್ತು ಬಿ ವರ್ಗ ಮತ್ತು ಸಿ ವರ್ಗ ಮಾಡಿದ್ದು ಸಿ ವರ್ಗದಲ್ಲಿ 69 ಜಾತಿಗಳನ್ನು ಸೇರಿಸಿದ್ದು ಎರಡೂ ವರ್ಗಗಳಿಗೆ ಶೇ 6 ರಷ್ಟು ಮೀಸಲಾತಿ ನೀಡಿದ್ದು ನಮ್ಮ ವರ್ಗಕ್ಕೆ ಶೇ 5 ರಷ್ಟು ಮಾತ್ರವೇ ನೀಡಿದ್ದು ತಾರತಮ್ಯ ಮಾಡಿದ್ದಾರೆ. ಲಂಬಾಣಿ ಜನಾಂಗದವರು ಶ್ರೀಮಂತ ವರ್ಗದವರಿಲ್ಲ. ಇತ್ತೀಚಿಗೆ ಮಾತ್ರ ಲಂಬಾಣಿ ಜನಾಂಗವದರು ಸ್ವಲ್ಪ ಮಟ್ಟಿಗೆ ಅರ್ಥಿಕವಾಗಿ ಸದೃಡರಾಗಿದ್ದಾರೆ. ತಾಲೂಕಿನ ಎಲ್ಲಾ ಬಣಜಾರ್ ಸಮುದಾಯದವರು ಈ ಪ್ರತಿಭಟನಾ ಕಾರ್ಯಕ್ರಮದಲ್ಲಿ ಬಾಗವಹಿಸುವ ಮೂಲಕ ಹೋರಾಟಕ್ಕೆ ಶಕ್ತಿ ತುಂಬಬೇಕು. ಆಯಾ ಗ್ರಾಮಗಳಿಂದ ವಾಹನಗಳು ಹೊರಟಿದ್ದು ಎಲ್ಲರೂ ಸುರಕ್ಷಿತವಾಗಿ ಬರಬೇಕು ಎಂದರು. ಇಲ್ಲಿ ಯಾವುದೇ ಪಕ್ಷ ಪಾರ್ಟಿಗಳು ಬರುವುದಿಲ್ಲ. ಸಮಾಜ ಮುಖ್ಯವಾಗುತ್ತದೆ. ಕಳೆದ ಬಾರಿ ಸಹ ಮೀಸಲಾತಿಯಲ್ಲಿ ಬಣಜಾರ್ ಸಮಾಜವನ್ನು ಕಡೆಗಣಿಸಿ ಅದರ ಪ್ರತಿಪಲವನ್ನು ಕಂಡಿದ್ದಾರೆ. ಇದನ್ನು ಸರಿಪಡಿಸದೇ ಇದ್ದು ಮುಂದಿನ ದಿನಗಳಲ್ಲಿ ಸಮಾಜವು ತಕ್ಕ ಪಾಠವನ್ನು ಕಲಿಸಲಿದೆ ಎಂದರು.

ಬೆಸ್ಕಾಂ ಗುತ್ತಿಗೆದಾರರ ಸಂಘದ ಅಧ್ಯಕ್ಷ ಉಮೇಶ್‌ನಾಯ್ಕ ಮಾತನಾಡಿ ಮೀಸಲಾತಿಯಲ್ಲಿ ಜಾತಿ ಅಧಾರದಲ್ಲಿ ಕೊಡುವುದಾದರೂ ಅನ್ಯಾಯವಾಗಿದೆ. ಆದರಲ್ಲಿ ಸ್ಪರ್ಶರು ಮತ್ತು ಅಸ್ಪೃಶ್ಯರು ಎಂದು ಮಾಡಿದ್ದು ಇದನ್ನು ಮಾಡುವ ಅಗತ್ಯ ಇತ್ತೇ ಎನ್ನುವುದು ಸರಕಾರ ಇದನ್ನು ಸೂಕ್ಷ್ಮವಾಗಿ ಪರಿಶೀಲಿಸಿ ನಿರ್ಧಾರವನ್ನು ಕೈಗೊಳ್ಳಬೇಕಿದೆ. ಬೆಂಗಳೂರಿನಲ್ಲಿ ನಡೆಯಲಿರುವ ಪ್ರತಿಭಟನೆಗೆ ತಾಲೂಕಿನ ಸಮಾಜದ ಎಲ್ಲಾ ಬಂಧುಗಳು ಬಾಗವಹಿಸುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ತಾಲೂಕು ಬಣಜಾರ್ ಸಮಾಜದ ಉಪಾಧ್ಯಕ್ಷ ಹಾಲೇಶ್‌ನಾಯ್ಕ, ಕಾರ್ಯದರ್ಶಿ ಅಣ್ಣಪ್ಪ, ಮಹಿಳಾ ಘಟಕದ ಪದಾಧಿಕಾರಿಗಳಾದ ನಿರ್ಮಲ, ಉಷಾ, ಗಾಯಿತ್ರಿ, ಮಲ್ಲಾನಾಯ್ಕ, ಕುಬೇರನಾಯ್ಕ ಇತರರು ಹಾಜರಿದ್ದರು.

# ಸ್ಪಂದನ ಬಳಗದ ಗೆಳತಿಯರಿಂದ 18ನೇ ಸ್ಪಂದನೆ



**ಚಿಕ್ಕಮಗಳೂರು:** ನಗರಸಭೆಯಲ್ಲಿ ದಿನಗೂಲಿ ಕೆಲಸ ಮಾಡುತ್ತಿರುವ ಗೀತಾ ಎಂಬುವವರಿಗೆ ಇಬ್ಬರು ಹೆಣ್ಣು ಮಕ್ಕಳಿದ್ದು ಹಿರಿಯ ಮಗಳು ಬಿ.ಸಿ.ಎ, ಕಿರಿಯ ಮಗಳು ಪಿ.ಯು.ಸಿ ವ್ಯಾಸಂಗ ಮಾಡುತ್ತಿದ್ದಾರೆ, ತಂದೆಯನ್ನು ಕಳೆದುಕೊಂಡಿರುವ ಈ ಮಕ್ಕಳ ಕಾಲೇಜು ಶುಲ್ಕವನ್ನು ಭರಿಸಲು ಗೀತಾ ರವರು ಅಸಹಾಯಕರಾಗಿರುತ್ತಾರೆ, ಹಾಗಾಗಿ ಅವರ ವಿದ್ಯಾಭ್ಯಾಸಕ್ಕೆ ಅನುಕೂಲವಾಗಲೆಂದು ಸ್ಪಂದನ ಬಳಗದ ಗೆಳತಿಯರು ಕಿರಿಯ ಮಗಳ 2ನೇ ಕಂತಿನ ಶುಲ್ಕವನ್ನು ಕಟ್ಟುವುದರ ಮೂಲಕ ಸೆಪ್ಟೆಂಬರ್ ತಿಂಗಳ ಕಾರ್ಯವನ್ನು ಪೂರ್ಣಗೊಳಿಸಿದ್ದಾರೆ.

ಇದಕ್ಕೆ ಸಹಕರಿಸಿದ ಸ್ಪಂದನ ಬಳಗದ ಗೆಳತಿಯರಿಗೆ ರೀನಾ ಸುಜೇಂದ್ರ ಧನ್ಯವಾದಗಳನ್ನು ತಿಳಿಸಿದರು, ಈ ಸಂದರ್ಭದಲ್ಲಿ ನೇತ್ರಾ ವೆಂಕಟೇಶ್, ರತಿ ಪ್ರವೀಣ್, ಕಲಾವತಿ ಉಡುಪ, ಹರಿಣಾಕ್ಷಿ ನಾಗರಾಜ್ ಉಪಸ್ಥಿತರಿದ್ದರು.

# ತಿರುವುಳ್ಳವರು ಪತ್ತಿನ ಸಹಕಾರ ಸಂಘದ ಸರ್ವ ಸದಸ್ಯರ ಸಭೆ

**ಶಿವಮೊಗ್ಗ :** ನಗರದ ಪಂಚವಟಿ ಕಾಲೋನಿ 1ನೇ ತಿರುವಿನಲ್ಲಿರುವ ತಿರುವುಳ್ಳವರು ಪತ್ತಿನ ಸಹಕಾರ ಸಂಘದ 2024-25ರ ಸರ್ವ ಸದಸ್ಯರ ಸಭೆಯು ದಿನಾಂಕ 2024-25 ಭಾನುವಾರ 10 ಗಂಟೆಗೆ ಅಧ್ಯಕ್ಷರಾದ ಅರುಣ್ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ಸಭೆಯು ನಡೆಯಲಿದೆ.

ಮಾನ್ಯ ಸದಸ್ಯರು ಸಕಾಲಕ್ಕೆ ಆಗಮಿಸಿ ಸಲಹೆ ಸಹಕಾರ ಕೊಟ್ಟು ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಸದಸ್ಯರು ವಿನಂತಿಸುತ್ತೇವೆ. ಮಾಹಿತಿಗಾಗಿ 08182-471409 ಮತ್ತು 9686265054 ರಲ್ಲಿ ಸಂಪರ್ಕಿಸಬೇಕಾಗಿ ಕಾರ್ಯದರ್ಶಿ ಸತೀಶ್ ಕೋರಿದ್ದಾರೆ.

# ಸೈಕಲ್ ಜಾಥಾಗೆ ನೊಂದಣಿ ಪ್ರಾರಂಭ

**ಗದಗ :** ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಸೆಪ್ಟೆಂಬರ್ 15ರಂದು ಆಚರಿಸಲಾಗುತ್ತಿದ್ದು, ದಿನಾಚರಣೆಯ ನಿಮಿತ್ತ ಜಿಲ್ಲಾಧಿಕಾರಿಗಳು, ಗದಗ ರವರು ಸೆಪ್ಟೆಂಬರ್ 15ರಂದು ಬೆಳಿಗ್ಗೆ 6.30 ಗಂಟೆಗೆ ಬಸವೇಶ್ವರ ಸರ್ಕಲ್‌ನಿಂದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದ ವರೆಗೆ ಸೈಕಲ್ ಜಾಥವನ್ನು ಹಮ್ಮಿಕೊಳ್ಳಲು ಸೂಚಿಸಿರುತ್ತಾರೆ.

ಸೈಕಲ್ ಜಾಥಾದಲ್ಲಿ ಭಾಗವಹಿಸಲು 14 ವರ್ಷ ಮೇಲ್ಪಟ್ಟ ಪುರುಷರು ಮಹಿಳೆಯರು ಸಾರ್ವಜನಿಕರು ವಿದ್ಯಾರ್ಥಿಗಳು ಹಾಗೂ ಸರ್ಕಾರಿ ಅಧಿಕಾರಿಗಳು ಸಿಬ್ಬಂದಿಗಳು ಸೇರಿದಂತೆ ಎಲ್ಲರೂ ಭಾಗವಹಿಸಬಹುದಾಗಿದ್ದು ಸೈಕಲ್ ಜಾಥಾದಲ್ಲಿ ಭಾಗವಹಿಸುವವರು https://forms.gle/V73qVTmaX9cB1m7t8

ಈ ಲಿಂಕ್ ಮೂಲಕ ಸೆಪ್ಟೆಂಬರ್ 13ರ ಸಂಜೆ 5 ಗಂಟೆಯೊಳಗೆ ನೊಂದಾಯಿಸಿಕೊಳ್ಳಬಹುದಾಗಿರುತ್ತದೆ. ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯಲ್ಲಿ ಭಾಗವಹಿಸಿ "ನನ್ನ ಮತ ನನ್ನ ಹಕ್ಕು" ಎಂಬ ಮಹತ್ವದ ಆಶಯದೊಂದಿಗೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಎಂದು ಉಪ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಗದಗ ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ

# ಸರಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟವನ್ನು ಸುಧಾರಿಸಬೇಕು



**ಚನ್ನಗಿರಿ :** ಸರಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟವನ್ನು ಸುಧಾರಿಸಲು ಇಂದಿನಿಂದಲೇ ವಿಶೇಷ ತರಗತಿ ಮತ್ತು ಗೈರು ಹಾಜರಾಗುವ ಮಕ್ಕಳ ಬಗ್ಗೆ ವಿಶೇಷ ಕಾಳಜಿಯನ್ನು ವಹಿಸಬೇಕು ಎಂದು ಬಿ.ಇ.ಓ. ಜಯ್ಯಪ್ಪ ಹೇಳಿದರು.

ಸೋಮವಾರ ಚನ್ನಗಿರಿ ಪಟ್ಟಣದ ಜೂನಿಯರ್ ಕಾಲೇಜು ಪ್ರೌಡಶಾಲಾ ವಿಬಾಗಕ್ಕೆ ದಿಡೀರನೆ ಬೇಟಿ ನೀಡಿ ಹಾಜರಾತಿ ಪುಸ್ತಕಗಳನ್ನು ಪರಿಶೀಲಿಸಿ ಸಹ ಶಿಕ್ಷಕರೊಂದಿಗೆ ಮಾತನಾಡಿ ಈ ಹಿಂದೆ ಇದ್ದಂತಹ ಉಪಪ್ರಾಚಾರ್ಯರು ಉತ್ತಮವಾದ ರೀತಿಯಲ್ಲಿ ಶಾಲೆಯನ್ನು ನಡೆಸಿಕೊಂಡು ಬಂದಿದ್ದು ಅದರಂತೆ ನೂತನವಾಗಿ ಬಂದಿರುವ ಪರಮೇಶ್ವರಪ್ಪನವರು ಸಹ ನಿರ್ವಹಣೆ ಮಾಡಬೇಕು. ಶಿಕ್ಷಕರು ಶಾಲಾಬಿಟ್ಟ ಮಕ್ಕಳ ಬಗ್ಗೆ ಮಾಹಿತಿಯನ್ನು ಪಡೆದು ಮಕ್ಕಳಿಗೆ ಮನವೊಲಿಸಿ ಶಾಲೆಗೆ ಬರುವಂತೆ ಪ್ರೇರೇಪಿಸಬೇಕು. ಇಂದು ಸ್ಪರ್ಧಾತ್ಮಕ ದಿನವಾಗಿದ್ದು ಸರಕಾರಿ ಶಾಲೆಗಳು ಖಾಸಗಿ ಶಾಲೆಗಳ ಜೊತೆ ಸಾಕಷ್ಟು ಪೈಪೋಟಿ ನಡೆಸಬೇಕಿದ್ದು ಶಿಕ್ಷಕರು ಮಕ್ಕಳಿಗೆ ಎನ್.ಎಮ್.ಎಮ್.ಎಸ್, ತಪಸ್ಸು ಮತ್ತು ಸಾಧನಾ ಪರೀಕ್ಷೆಗಳ ತಯಾರಿಮಾಡಬೇಕು. ಇದರಿಂದ ಸಾಕಷ್ಟು ವಿದ್ಯಾರ್ಥಿಗಳ ಬದುಕಿನಲ್ಲಿ ಬೆಳಕು ನೀಡಿದಂತಾಗುತ್ತದೆ ಎಂದರು. ಶಾಲಾಭಿವೃದ್ಧಿ ಸಮಿತಿ ಮತ್ತು ಶಿಕ್ಷಕರು ಜೊತೆಗೂಡಿ ಶಾಲೆಗೆ ಬೇಕಾಗುವಂತಹ ಸೌಲಭ್ಯಗಳ ಕುರಿತು ಶಾಸಕರ ಬಳಿ ಮನವಿ ಮಾಡಬೇಕು ಎಂದರು. ಕಳೆದ ಬಾರಿ ತಾಲೂಕಿನಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು 624 ಅಂಕಗಳನ್ನು ಪಡೆದಿದ್ದು 625 ಅಂಕಗಳನ್ನು ಪಡೆದುಕೊಳ್ಳುಲು ಅವಕಾಶವಿದ್ದು ವಿದ್ಯಾರ್ಥಿಗಳ ಇದರ ಪ್ರಯುತ್ನದಲ್ಲಿ ತೊಡಗಬೇಕು ಎಂದರು. ಈ ಸಂದರ್ಭದಲ್ಲಿ ಕಾಲೇಜಿನ ಉಪ ಪ್ರಾಚಾರ್ಯ ಪರಮೇಶ್ವರಪ್ಪ, ಮತ್ತು ಸಹ ಶಿಕ್ಷಕರು ಹಾಜರಿದ್ದರು.

# ಗಣೇಶನ ವಿಸರ್ಜನಾ ಶೋಭಾಯಾತ್ರೆ



**ಚನ್ನಗಿರಿ :** ಹಿಂದೂ ಸಂಪ್ರದಾಯದಲ್ಲಿ ಧಾರ್ಮಿಕ ಹಬ್ಬ ಆಚರಣೆಗಳಿಗೆ ಸಾಕಷ್ಟು ಪ್ರಾಮುಖ್ಯತೆ ಇದ್ದು ಅದಕ್ಕೆ ಭಕ್ತಿ ಬಾವ ಆಗತ್ಯವಾಗಿದೆ ಎಂದು ಮಾಜಿ ಶಾಸಕ ಮಾಡಾಳ್ ವಿರೂಪಾಕ್ಷಪ್ಪ ಹೇಳಿದರು.

ಭಾನುವಾರ ತಾಲೂಕಿನ ದೇವರಹಳ್ಳಿ ಗ್ರಾಮದಲ್ಲಿ ಪ್ರತಿಷ್ಠಾಪನೆ ಮಾಡಲಾಗಿದ್ದ ಗಣೇಶನ ವಿಸರ್ಜನಾ ಶೋಭಾಯಾತ್ರೆಗೆ ಟ್ರ್ಯಾಕ್ಟರ್ ಚಾಲನೆ ನೀಡುವ ಮೂಲಕ ಉದ್ಘಾಟಿಸಿ ಮಾತನಾಡಿ ದೇವರಹಳ್ಳಿ ಗ್ರಾಮವು ಒಂದು ಐತಿಹಾಸಿಕ ಹಿನ್ನಲೆಯನ್ನು ಹೊಂದಿರುವಂತಹ ಗ್ರಾಮವಾಗಿದ್ದು ಗ್ರಾಮಸ್ಥರು ಧಾರ್ಮಿಕ ಆಚರಣೆಗಳನ್ನು ಅದ್ದೂರಿಯಾಗಿ ಆಚರಣೆ ಮಾಡಿಕೊಂಡು ಬರುತ್ತಿದ್ದಾರೆ. ಅದರಂತೆ ಗೌರಿ ಗಣೇಶನ ಹಬ್ಬದ ಆಚರಣೆಯನ್ನು ಸಹ ಮಾಡಿಕೊಂಡು ಬರುತ್ತಿದ್ದು ಗಣೇಶನ ಹಬ್ಬದಲ್ಲಿ ಇಡೀ ಗ್ರಾಮವು ಸಂಭ್ರಮದಿಂದ ಕೂಡಿರುತ್ತದೆ. ಅಲ್ಲದೇ ಇಡೀ ಗ್ರಾಮದ ವತಿಯಿಂದ ಗಣೇಶನ ಪ್ರತಿಷ್ಠಾಪನೆಯ ಗ್ರಾಮದ ಜನರ ಐಕ್ಯತೆಯನ್ನು ತೋರಿಸುತ್ತದೆ. ಗಣೇಶನ ಪ್ರತಿಷ್ಠಾಪನೆಯ ಸಂದರ್ಭದಲ್ಲಿ ವಹಿಸುವಂತಹ ಕಾಳಜಿಯನ್ನು ಗಣೇಶನ ವಿಸರ್ಜನೆಯ ಸಂದರ್ಭದಲ್ಲಿ ಎಚ್ಚರಿಕೆಯನ್ನು ಸಮಿತಿಯವರು ವಹಿಸುವುಂತೆ ಕಿವಿ ಮಾತು ಹೇಳಿದರು.ಈ ಸಂದರ್ಭದಲ್ಲಿ ತಾಲೂಕು ಉಪ್ಪಾರ ಸಮಾಜದ ಅಧ್ಯಕ್ಷ ಎ.ಎಸ್.ಬಸವರಾಜಪ್ಪ, ಗ್ರಾ.ಪಂ.ಮಾಜಿ ಅಧ್ಯಕ್ಷ ರಂಗನಾಥ್, ಸದಸ್ಯ ರಾಕೇಶ್, ತಿಮ್ಮಣ್ಣ, ರಾಜಪ್ಪ ಗಣೇಶನಸಮಿತಿಯ ಪದಾಧಿಕಾರಿಗಳು ಹಾಜರಿದ್ದರು.

# ನವೋದಯ 6ನೇ ತರಗತಿ ಪ್ರವೇಶಕ್ಕೆ ಆನ್‌ಲೈನ್ ಅರ್ಜಿ ಅವಧಿ ವಿಸ್ತರಣೆ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆಯ ಗಾಜನೂರಿನ ನವೋದಯ ವಿದ್ಯಾಲಯದ 2026-27 ನೇ ಸಾಲಿಗೆ ಆರನೇ ತರಗತಿ ಪ್ರವೇಶ ಪರೀಕ್ಷೆಯ ಆನ್‌ಲೈನ್ ಅರ್ಜಿ ಅವಧಿಯನ್ನು ಆ.13 ರವರೆಗೆ ವಿಸ್ತರಿಸಲಾಗಿದೆ. ಈಗಾಗಲೇ 5ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಆನ್‌ಲೈನ್ ವಿಳಾಸ cbseitms.rcil.gov.in.nvs ಇಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಶಿವಮೊಗ್ಗ ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 8 ತಿಂಗಳಲ್ಲಿ 56 ಸೈಬರ್ ಅಪರಾಧ ಪ್ರಕರಣಗಳು

## ದಾವಣಗೆರೆಯಲ್ಲಿ 1 ಕೋಟಿ ರೂಪಾಯಿಗೂ ಹೆಚ್ಚು ವಂಚನೆ: ಸೈಬರ್ ಅಪರಾಧ

**ದಾವಣಗೆರೆ:** ಬಜಾಜ್ ಫೈನಾನ್ಸ್ ಲಿಮಿಟೆಡ್ (ಬಿಎಫ್‌ಎಲ್), ಡಿಜಿಟಲ್ ಬಳಕೆದಾರರಿಗೆ ವಿವಿಧ ರೀತಿಯ ಬೆದರಿಕೆಗಳು ಮತ್ತು ಹಣಕಾಸುಗಳನ್ನು ರಕ್ಷಿಸಲು ಉತ್ತಮ ಅಭ್ಯಾಸಗಳ ಬಗ್ಗೆ ತಿಳಿಸಲು ಇಂದು ದಾವಣಗೆರೆಯಲ್ಲಿ ನಾಕೌಟ್ ಡಿಜಿಟಲ್ ಫ್ರಾಡ್ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿತ್ತು.

ಗ್ರಾಮೀಣ ಉಪವಿಭಾಗದ ಪೊಲೀಸ್ ಉಪಾಧೀಕ್ಷಕ ಶ್ರೀ ಬಿ.ಎಸ್. ಬಸವರಾಜ್, ಸೈಬರ್ ಅಪರಾಧ ಪೊಲೀಸ್ ಠಾಣೆಯ ಉಪಾಧೀಕ್ಷಕ ಶ್ರೀ ನಾಗಪ್ಪ ಬಂಕಾಳಿ ಮತ್ತು ನಿವೃತ್ತ ಡಿವೈಎಸ್‌ಪಿ ಎಂ.ಎನ್. ರುದ್ರಪ್ಪ ಸೇರಿದಂತೆ ಗಣ್ಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಅವರ ಸಾಮೂಹಿಕ ಅನುಭವ ಮತ್ತು ಒಳನೋಟಗಳು ಕಾರ್ಯಕಲಾಪಗಳಿಗೆ ಅಪಾರ ಮೌಲ್ಯವನ್ನು ಸೇರಿಸಿದವು. ದಾವಣಗೆರೆ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪ್ರಚಲಿತದಲ್ಲಿರುವ ವಿವಿಧ ರೀತಿಯ ವಂಚನೆಗಳ ಬಗ್ಗೆ ಭಾಷಣಕಾರರು ಬೆಳಕು ಚೆಲ್ಲಿದರು. ನಕಲಿ ಒಟಿಪಿ ವಂಚನೆ, ಫಿಶಿಂಗ್ ವಂಚನೆ, ಡಿಜಿಟಲ್ ಬಂಧನ, ಹಣಕಾಸು ಸಾಲ ವಂಚನೆ, ಪಿಂಚಣಿ ವಂಚನೆ ಮತ್ತು ಇತರ ವಂಚನೆಗಳ ಬಗ್ಗೆ ಪ್ರೇಕ್ಷಕರಿಗೆ ಮಾಹಿತಿ ನೀಡಲಾಯಿತು.

"ಭಾರತದಾದ್ಯಂತ ಸೈಬರ್ ಅಪರಾಧ ಘಟನೆಗಳು ಶೇ. 200 ಕ್ಕಿಂತ ಹೆಚ್ಚು ಹೆಚ್ಚಾಗಿದೆ, ಆದರೆ ವಂಚನೆಗೆ ತುತ್ತಾದವರಲ್ಲಿ ಕೇವಲ ಶೇ. 10 ರಷ್ಟು ಮಾತ್ರ ಪೊಲೀಸ್ ದೂರುಗಳನ್ನು ದಾಖಲಿಸಲು ಮುಂದೆ ಬರುತ್ತಾರೆ" ಎಂದು ಬಜಾಜ್ ಫೈನಾಲ್‌ನ



ನಾಕೌಟ್ ಡಿಜಿಟಲ್ ವಂಚನೆ ಜಾಗೃತಿ ಉಪಕ್ರಮದಲ್ಲಿ ಭಾಗವಹಿಸಿದವರನ್ನು ಉದ್ದೇಶಿಸಿ ಮಾತನಾಡಿದ ಗ್ರಾಮೀಣ ಉಪವಿಭಾಗದ ಉಪ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಬಿ.ಎಸ್. ಬಸವರಾಜ್ ಹೇಳಿದರು. ಡಿಜಿಟಲ್ ಬಂಧನ ಹಗರಣಗಳಲ್ಲಿನ ಆತಂಕಕಾರಿ ಏರಿಕೆಯನ್ನು ಎತ್ತಿ ತೋರಿಸುತ್ತಾ, ಸೈಬರ್ ಅಪರಾಧಿಗಳು ಸ್ಥಳೀಯ ರಾಜಕಾರಣಿಯಿಂದ ರೂ. 31 ಲಕ್ಷಕ್ಕೂ ಹೆಚ್ಚು ಹಣವನ್ನು ಸುಲಿಗೆ ಮಾಡಿದ ಪ್ರಕರಣವನ್ನು ಹಂಚಿಕೊಂಡರು.

ಯುವಜನರು ಜಾಗರೂಕರಾಗಿರುವಂತೆ ಸಲಹೆ ಮಾಡಿದ ಅವರು "ಯುವ ಪೀಳಿಗೆಯು ಸೈಬರ್ ಜಾಗೃತಿಯನ್ನು ಮೊದಲೇ ಬೆಳೆಸಿಕೊಳ್ಳುವುದು ಮತ್ತು ಡಿಜಿಟಲ್ ವಂಚನೆಯಿಂದ ತಮ್ಮನ್ನು ತಾವು ರಕ್ಷಿಸಿಕೊಳ್ಳಲು ವಿಕಸಿಸುತ್ತಿರುವ ತಂತ್ರಜ್ಞಾನಗಳೊಂದಿಗೆ ನವೀಕೃತವಾಗಿರುವುದು ಕಡ್ಡಾಯವಾಗಿದೆ" ಎಂದು ಹೇಳಿದರು.

ಸೈಬರ್ ಅಪರಾಧದ ಬಗ್ಗೆ ಹೆಚ್ಚುತ್ತಿರುವ ಕಳವಳಗಳನ್ನು ಪ್ರತಿಧ್ವನಿಸುತ್ತಾ, ದಾವಣಗೆರೆಯ ಸೈಬರ್ ಅಪರಾಧ ಪೊಲೀಸ್ ಠಾಣೆಯ ಉಪ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ನಾಗಪ್ಪ ಬಂಕಾಳಿ, ಪ್ರಾಧ್ಯಾಪಕರೊಬ್ಬರು ತಮ್ಮ ಮಗಳ ಮದುವೆಗಾಗಿ ಮೀಸಲಿಟ್ಟಿದ್ದ ರೂ. 25 ಲಕ್ಷಕ್ಕೂ ಹೆಚ್ಚು ಹಣವನ್ನು ಆನ್‌ಲೈನ್ ಹಗರಣಕ್ಕೆ ಕಳೆದುಕೊಂಡ ಭಯಾನಕ ಪ್ರಕರಣವನ್ನು ಹಂಚಿಕೊಂಡರು. ಈ ಘಟನೆಯು ಈ ಪ್ರದೇಶದಲ್ಲಿ ಡಿಜಿಟಲ್ ವಂಚನೆಯ ಆತಂಕಕಾರಿ ಏರಿಕೆಯನ್ನು ಎತ್ತಿ ತೋರಿಸುತ್ತದೆ ಮತ್ತು ಸುಶಿಕ್ಷಿತರು ಸಹ ಸೈಬರ್ ಅಪರಾಧಿಗಳ ತಂತ್ರಗಳಿಗೆ ಹೊರತಾಗಿಲ್ಲ ಎಂಬುದನ್ನು ಸ್ಪಷ್ಟವಾಗಿ ನೆನಪಿಸುತ್ತದೆ.

ನಾಕೌಟ್ ಡಿಜಿಟಲ್ ಫ್ರಾಡ್ ಕಾರ್ಯಕ್ರಮವು ಎಸ್ ಬಿಎಫ್‌ಸಿಗಳಿಗೆ ವಂಚನೆ ಅಪಾಯ ನಿರ್ವಹಣೆಯ ಕುರಿತಾದ ಭಾರತೀಯ ರಿಸರ್ವ್ ಬ್ಯಾಂಕ್‌ನ 2024 ರ ಮಾರ್ಗಸೂಚಿಗಳೊಂದಿಗೆ ಹೊಂದಿಕೆಯಾಗುತ್ತದೆ, ಇದು ಆರಂಭಿಕ ಪತ್ತೆ, ಸಿಬ್ಬಂದಿ ಹೊಣೆಗಾರಿಕೆ ಮತ್ತು ಎಲ್ಲರಿಗೂ ಡಿಜಿಟಲ್ ಪರಿಸರ ವ್ಯವಸ್ಥೆಯನ್ನು ಸುರಕ್ಷಿತವಾಗಿಸಲು ಸಾರ್ವಜನಿಕ ತೊಡಗಿಸಿಕೊಳ್ಳುವಿಕೆಯನ್ನು ಒತ್ತಿಹೇಳುತ್ತದೆ.

ನಕಲಿ ಸಾಮಾಜಿಕ ಮಾಧ್ಯಮ ಖಾತೆಗಳು, ವಾಟ್ಸಾಪ್ ಗುಂಪುಗಳು ಮತ್ತು ಹಣಕಾಸು ಕಂಪನಿಗಳನ್ನು ಅನುಕರಿಸುವ, ತಪ್ಪಾಗಿ ಸಂಬಂಧ ಹೊಂದಿರುವ ಮತ್ತು ತಮ್ಮ ಉದ್ಯೋಗಿಗಳಂತೆ ನಟಿಸುವ ವೆಬ್ ಸೈಟ್ ಗಳು ಸೇರಿದಂತೆ ವಂಚಕರು ಮಾಡುವ ಸಾಮಾನ್ಯ ಆರ್ಥಿಕ ವಂಚನೆಗಳ ಬಗ್ಗೆ ನಾಗರಿಕರ ಗಮನ ಸೆಳೆಯುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಬಿಎಸ್ ಎಫ್ ನ ವಕ್ತಾರರು, "ನಮ್ಮ ಗ್ರಾಹಕರ ಆರ್ಥಿಕ ಸುರಕ್ಷತೆ ನಮಗೆ ಅತ್ಯಂತ ಮುಖ್ಯವಾಗಿದೆ. ನಾವು ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಮತ್ತು ನಾಗರಿಕರೊಂದಿಗೆ ನೆಲದ ಸಂವಹನಗಳ ಮೂಲಕ ನಿರಂತರವಾಗಿ ಆನ್‌ಲೈನ್ ಮತ್ತು ಆನ್ ಲೈನ್ ಸಲಹೆಗಳನ್ನು ನೀಡುತ್ತಿದ್ದೇವೆ, ಪ್ರತಿಯೊಬ್ಬರೂ ಸೈಬರ್ ಸುರಕ್ಷಿತವಾಗಿರಲು ಪ್ರೋತ್ಸಾಹಿಸುತ್ತಿದ್ದೇವೆ" ಎಂದು ಹೇಳಿದರು.

# ಯುವನಿಧಿ ಫಲಾನುಭವಿಗಳು ಕೌಶಲ್ಕಾರ್ ಪೋರ್ಟಲ್ ನಲ್ಲಿ ಕಡ್ಡಾಯ ನೋಂದಣಿ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆಯಲ್ಲಿ ಯುವನಿಧಿ ಯೋಜನೆಯಡಿಯಲ್ಲಿ ನಿರುದ್ಯೋಗ ಭತ್ಯೆ ಪಡೆಯುತ್ತಿರುವ ಫಲಾನುಭವಿಗಳಿಗೆ ಯುವನಿಧಿ ಪ್ಲಸ್ ಯೋಜನೆಯಡಿಯಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳು (ITI), ಉಖಿಖಿಅ, ಅಇಆಔಏ, ಏಖಆಅ ವತಿಯಿಂದ ಉಚಿತ ಕೌಶಲ್ಯಾಧಾರಿತ ತರಬೇತಿಗಳನ್ನು ನೀಡುತ್ತಿದ್ದು, ಯುವನಿಧಿ ಯೋಜನೆಯಡಿಯಲ್ಲಿ ನೋಂದಾಯಿಸಿಕೊಂಡು ನೇರ ನಗದು ವರ್ಗಾವಣೆ (DBT) ಮೂಲಕ ನಿರುದ್ಯೋಗ ಭತ್ಯೆ ಪಡೆಯುತ್ತಿರುವ ಫಲಾನುಭವಿಗಳು ಕಡ್ಡಾಯವಾಗಿ ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ವೆಬ್ ಸೈಟ್ ೨ttps://www.kaushalkar.com/app/registration_verify ಲಿಂಕನ್ನು ಬಳಸಿಕೊಂಡು ನೋಂದಾಯಿಸಿಕೊಳ್ಳಲು ಸೂಚಿಸಿದೆ. ಕೌಶಲ್ಕಾರ್ ಪೋರ್ಟಲ್ ನಲ್ಲಿ ಯುವನಿಧಿ ಫಲಾನುಭವಿಗಳು ತರಬೇತಿ ಪಡೆದರೆ ನಿರುದ್ಯೋಗ ಭತ್ಯೆ ತಡೆಹಿಡಿಯಲಾಗುತ್ತದೆ ಎಂದು ಭಾವಿಸಿ ಕೌಶಲ್ಕಾರ್ ಪೋರ್ಟಲ್ ನಲ್ಲಿ ನೋಂದಾಯಿಸಲು ಹಿಂಜರಿಯುತ್ತಿರುವುದಾಗಿ ತಿಳಿದು ಬಂದಿದ್ದು, ತರಬೇತಿಯನ್ನು ಪಡೆದರೂ ಸಹ ಸರ್ಕಾರ ನಿಗಧಿಪಡಿಸಿರುವ ಅವಧಿವರೆಗೆ ನಿರುದ್ಯೋಗ ಭತ್ಯೆಯನ್ನು ನೀಡಲಾಗುವುದೆಂದು ತಿಳಿಸುತ್ತಾ, ಯುವನಿಧಿ ಫಲಾನುಭವಿಗಳು ಕೌಶಲ್ಕಾರ್ ಪೋರ್ಟಲ್ ನಲ್ಲಿ ಕಡ್ಡಾಯವಾಗಿ ನೋಂದಾಯಿಸಿಕೊಂಡು ತಮಗೆ ಇಚ್ಚೆಯುಳ್ಳ ಕೌಶಲ್ಯ ಹಾಗೂ ಉದ್ಯಮಶೀಲತಾ ತರಬೇತಿಯನ್ನು ಪಡೆದುಕೊಳ್ಳಲು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಟ್ಟಣ ಸಹಕಾರ ಬ್ಯಾಂಕ್ ಹಿರಿಯ ನಿರ್ದೇಶಕಿ ಪದ್ಮಾತಿಮ್ಮೇಗೌಡ ನಿಧನ: ಸಂತಾಪ ಸಭೆ

**ಚಿಕ್ಕಮಗಳೂರು :** ಮಹಿಳಾ ಸಬಲೀಕರಣ, ಕ್ರೀಡೆ, ಸಹಕಾರ, ರಾಜಕಾರಣ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಪದ್ಮಾತಿಮ್ಮೇಗೌಡರ ಸೇವೆ ಸ್ಮರಣೀಯ ಎಂದು ಚಿಕ್ಕಮಗಳೂರು ಪಟ್ಟಣ ಸಹಕಾರ ಬ್ಯಾಂಕ್ ಅಧ್ಯಕ್ಷ ಎಚ್. ಎನ್.ನಂಜೇಗೌಡ ನುಡಿದರು.

ಬ್ಯಾಂಕಿನ ಹಿರಿಯ ನಿರ್ದೇಶಕಿ ಪದ್ಮಾತಿಮ್ಮೇಗೌಡ(70) ಇಂದು ನಿಧನ ಹೊಂದಿದ ಹಿನ್ನಲೆಯಲ್ಲಿ ನಿರ್ದೇಶಕ ಮಂಡಳಿ ಸಿಬ್ಬಂದಿವರ್ಗ ಹಾಗೂ ಗ್ರಾಹಕರು ಬ್ಯಾಂಕ್ ಆವರಣದಲ್ಲಿ ಆಯೋಜಿಸಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಅವರು ಮಾತನಾಡಿದರು.

ಕೋಟೆ ನಿವಾಸಿಯಾಗಿದ್ದ ಪದ್ಮಾ ರೈತಾಪಿ ಕುಟುಂಬದ ದಿಟ್ಟ ಹೆಣ್ಣುಮಗಳು, ತಾರುಣ್ಯದಲ್ಲೆ ಉತ್ತಮ ಕ್ರೀಡಾಪಟು, ಹಾಗೂ ಸೈಕಲ್ ಪಟುವಾಗಿದ್ದು, ಕರಾಟೆ ಪದ್ಮಾ ಎಂಬ ಹೆಸರಿನಿಂದ ಅಂದು ಹೆಣ್ಣುಮಕ್ಕಳಿಗೆ ಪ್ರೇರಣಾದಾಯಕರಾಗಿದ್ದರು. ಮುಂದೆ ಜನತಾ ಪರಿವಾರದಲ್ಲಿ ಗುರುತಿಸಿಕೊಂಡು



ರಾಜ್ಯಮಟ್ಟದ ಪದಾಧಿಕಾರಿಯಾಗಿದ್ದರು. ವಿವಿಧ ಮಹಿಳಾಪರ ಹೋರಾಟದಲ್ಲೂ ತೊಡಗಿಸಿಕೊಂಡಿದ್ದ ಇವರಿಗೆ ಕರ್ನಾಟಕ ಸರ್ಕಾರ 'ಕಿತ್ತೂರುರಾಣಿ ಚೆನ್ನಮ್ಮ' ಪ್ರಶಸ್ತಿ ನೀಡಿ ಪುರಸ್ಕರಿಸಲಾಗಿತ್ತೆಂದು ನುಡಿದರು.

ಪತಿ ತಿಮ್ಮೇಗೌಡ, ಓರ್ವಪುತ್ರ ಹಾಗೂ ಇಬ್ಬರುಪುತ್ರಿಯರು ಅಪಾರಬಂಧು-ಮಿತ್ರರನ್ನು ಅಗಲಿರುವ ಪದ್ಮಾ, ಸಹಕಾರಿ ರಂಗದಲ್ಲೂ ಸಾಕಷ್ಟು ಕೆಲಸ ನಿರ್ವಹಿಸಿದ್ದರು. ಪಟ್ಟಣ ಸಹಕಾರ ಬ್ಯಾಂಕ್ ಅಭಿವೃದ್ಧಿಗೆ ಶ್ರಮಿಸಿದ್ದು, ಕಳೆದ ಎರಡು ದಶಕಗಳಿಂದ ನಿರ್ದೇಶಕಿ-ಉಪಾಧ್ಯಕ್ಷರಾಗಿ ಸೇವೆ ಸಲ್ಲಿದ್ದರೆಂದ ನಂಜೇಗೌಡ, ಮೃತರ ಆತ್ಮಕ್ಕೆ ಚಿರಶಾಂತಿ ಲಭಿಸಲೆಂದು ಪ್ರಾರ್ಥಿಸಿದರು.

ಉಪಾಧ್ಯಕ್ಷ ಭಗವತಿಹರೀಶ್, ನಿರ್ದೇಶಕರುಗಳಾದ ಎಂ.ವಿ.ಷಡಕ್ಷರಿ, ಬಿ.ಎಚ್.ಶ್ರೀಕಾಂತಪ್ಪೈ, ಜಿ.ರಘು, ಎಂ.ಎಸ್.ಉಮೇಶ್, ಧರ್ಮರಾಜು, ಶೈಲಜಾಮಂಜುನಾಥ, ಎಚ್. ಎಂ.ಚಂದ್ರಶೇಖರ್, ಕೆ.ಡಿ.ಪುಟ್ಟಣ್ಣ ಮತ್ತಿತರರು ಪುಷ್ಪನಮನ ಸಲ್ಲಿಸಿದ್ದರು. ಬ್ಯಾಂಕ್‌ನ ಮುಖ್ಯಕಾರ್ಯನಿರ್ವಹಣಾಧಿಕಾರಿ ಪಿ.ವಿ.ರಾಘವೇಂದ್ರ ನಿರೂಪಿಸಿದರು.

# ಇ-ಚಲನ್‌ನಲ್ಲಿ ದಾಖಲಾದ ಬಾಕಿ ಪ್ರಕರಣಗಳ ದಂಡದಲ್ಲಿ ಶೇ.50 ರಿಯಾಯ್ತಿ

**ಚಿಕ್ಕಮಗಳೂರು:** ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾದ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ. 50 ರಷ್ಟು ರಿಯಾಯಿತಿ ನೀಡಿ ಸರ್ಕಾರವು ಆಗಸ್ಟ್ 21 ರಂದು ಆದೇಶ ಹೊರಡಿಸಿದೆ.

ಈ ರಿಯಾಯಿತಿಯು ಇದೇ ಆಗಸ್ಟ್ 23 ರಿಂದ ಸೆಪ್ಟೆಂಬರ್ 12ರವರೆಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುತ್ತದೆ ಎಂದು ತಿಳಿಸಲಾಗಿದೆ.

2023ರ ಫೆಬ್ರವರಿ 11ರ ಒಳಗಾಗಿ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ ಒಂದು ಬಾರಿಯ ಕ್ರಮವಾಗಿ ಮಾತ್ರ ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ ನೀಡಿ ಸರ್ಕಾರ ಆದೇಶಿಸಿತ್ತು.

2023ರ ಮಾರ್ಚ್ 3ರ ಆದೇಶದಲ್ಲಿ ಅದೇ ವಿವರವನ್ನು ನೀಡಲಾಗಿತ್ತು. 2023ರ ಜುಲೈ 5ರ ಆದೇಶದಲ್ಲಿ ಸಹ ಮತ್ತೊಮ್ಮೆ ಆದೇಶಿಸಿ ರಿಯಾಯಿತಿಯು 2023ರ ಸೆಪ್ಟೆಂಬರ್ 9ರವರೆಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುತ್ತದೆ ಎಂದು ತಿಳಿಸಲಾಗಿತ್ತು.

ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಕಳೆದ 2025ರ ಜೂನ್ 26 ಮತ್ತು ಆಗಸ್ಟ್ 12ರ ಪತ್ರಗಳಲ್ಲಿ ಈ ರಿಯಾಯಿತಿ ನೀಡಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು 2025ರ ಜುಲೈ 5 ರಿಂದ 11 ರವರೆಗೆ ಕಾಲಾವಕಾಶವನ್ನು ಕಲ್ಪಿಸಿ ಆದೇಶ ಹೊರಡಿಸುವಂತೆ ಕೋರಿದ್ದರು.

ಈ ಅವಧಿಯು ಮುಕ್ತಾಯವಾಗಿರುವುದರಿಂದ ಈ ಕಾಲಾವಕಾಶವನ್ನು ಆಗಸ್ಟ್ 23 ರಿಂದ ಸೆಪ್ಟೆಂಬರ್ 12 ರವರೆಗೆ ಕಲ್ಪಿಸುವಂತೆ ಕೋರಿದ್ದಾರೆ. ಈ ಅವಧಿಯು ಮುಕ್ತಾಯವಾಗಿರುವುದರಿಂದ ಈ ಕಾಲಾವಕಾಶವನ್ನು ಆಗಸ್ಟ್ 23 ರಿಂದ ಸೆಪ್ಟೆಂಬರ್ 12 ರವರೆಗೆ ಕಲ್ಪಿಸುವಂತೆ ಕೋರಿದ್ದಾರೆ.

ಬೆಂಗಳೂರು ಸಾರಿಗೆ ಮತ್ತು ರಸ್ತೆ ಸುರಕ್ಷತೆ ಆಯುಕ್ತರು ಕಳೆದ ಮಾರ್ಚ್ 4ರ ಪ್ರಸ್ತಾವನೆಯಲ್ಲಿ ಕೂಡ ರಿಯಾಯಿತಿ ನೀಡಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಹಾಗೂ ಸಾರಿಗೆ ಇಲಾಖೆಯಲ್ಲಿ 2018-19ನೇ ಸಾಲಿನ ಪೂರ್ವದಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ವಾಹನ ಮಾಲೀಕರುಗಳಿಂದ ಶೇ.50 ರಷ್ಟು ರಿಯಾಯಿತಿ ನೀಡಿ ಪ್ರಕರಣ ಇತ್ಯರ್ಥಪಡಿಸಿಕೊಳ್ಳಲು ಅವಕಾಶ ಕಲ್ಪಿಸುವಂತೆ ಕೋರಿದ್ದಾರೆ.

ಈ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರ ಈ ರಿಯಾಯಿತಿಯು ಇದೇ ಆಗಸ್ಟ್ 23 ರಿಂದ ಸೆಪ್ಟೆಂಬರ್ 12 ರವರೆಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುತ್ತದೆ ಎಂದು ಆದೇಶಿಸಿದೆ ಎಂದು ಸಾರಿಗೆ ಇಲಾಖೆಯ ಅಧೀನ ಕಾರ್ಯದರ್ಶಿಗಳು ತಿಳಿಸಿದ್ದಾರೆ.

# ಯೋಗಾಸನವನ್ನು ಶಾಲೆ ಪಠ್ಯಗಳಲ್ಲಿ ಅಳವಡಿಕೆ ಆಗಬೇಕು

## ಯೋಗವಾಹಿನಿ ಕಾರ್ಯಕ್ರಮದಲ್ಲಿ ಡಾ. ಎ.ಎಂ. ಶಿವಕುಮಾರ್

**ದಾವಣಗೆರೆ:** ನಿತ್ಯಾ ಯೋಗ, ಧ್ಯಾನದ ಜೊತೆಗೆ ಒಳ್ಳೇಯ ಆಹಾರ ಪದ್ಧತಿ, ಪಾಠದ ಜೊತೆಗೆ ಆಟ, ಕಣ್ತುಂಬ ನಿದ್ದೆ ಮಾಡಿದರೆ ಮನಸ್ಸಿಗೆ ಸಂತೋಷ ಉಲ್ಲಾಸ, ನೆಮ್ಮದಿ ದೊರೆಯುತ್ತದೆ ಎಂದು ಮುಖ್ಯ ಅತಿಥಿಗಳಾಗಿ ಆಗಮಿಸಿದ ಇ,ಎನ್, ಟಿ, ತಜ್ಞರಾದ ಡಾ. ಎ. ಎಂ. ಶಿವಕುಮಾರ್, ಹೇಳಿದರು.

ಹಸ್ತಿನಾಪುರ ಯೋಗ ಫೌಂಡೇಶನ್ ವತಿಯಿಂದ ಸೆಂಟ್ ಫಾಲ್ಸ್ ಕಾನ್ವೆಂಟ್ ಬಾಲಕಿಯರ ಪ್ರೌಢಶಾಲೆಯ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ಕೊಂಡಜ್ಜಿ ಬಸಪ್ಪ ಸ್ಥಳೀಯ ಸಂಸ್ಥೆಯ ಗೈಡ್ ವಿದ್ಯಾರ್ಥಿಗಳಿಗೆ 90 ನಿಮಿಷಗಳ ಮಾದರಿ ಯೋಗ ವಾಹಿನಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಚಿಕ್ಕವರಿರುವಾಗಲೇ ಯೋಗ




ಅಭ್ಯಾಸ ಮಾಡುವುದರಿಂದ ಯಾವುದೇ ಕಾಯಿಲೆಯೂ ಹತ್ತಿರ ಬರದಂತೆ ನಮ್ಮ ದೇಹವನ್ನು ರಕ್ಷಣೆ ಮಾಡಿಕೊಳ್ಳಬಹುದು. ಕೈ ನೋವು ಕಾಲ್ ನೋವು, ಕೀಲು ನೋವು ಯಾವ ನೋವು ಕೂಡ ಕಾಣಿಸುವುದಿಲ್ಲ. ರೋಗನಿರೋಧಕ ಶಕ್ತಿ ಹೆಚ್ಚಾಗುತ್ತದೆ. ಪ್ರತಿನಿತ್ಯ ಯೋಗ ಮಾಡಿದವರಿಗೆ ಕೊರೋನಾ ಸಮಯದಲ್ಲಿ ಆರೋಗ್ಯವಾಗಿದ್ದರು ಅವರ ಬಳಿ ಕೊರೋನಾ ಸುಳಿವೇ ಬರಲಿಲ್ಲ ಹಾಗಾಗಿ ಸರ್ಕಾರವು ಯೋಗವನ್ನು ಪಠ್ಯಗಳಲ್ಲಿ ಅಳವಡಿಸಿದರೆ ಪ್ರತಿಯೊಬ್ಬರೂ ಯೋಗ ಅಭ್ಯಾಸವನ್ನು ಮಾಡಲು ಅನುವಾನವಾಗುತ್ತದೆ ಎಂದು ಆಶಿಸಿದರು.

ಸೆಂಟ್ ಫಾಲ್ಸ್ ವಿದ್ಯಾ ಸಂಸ್ಥೆಗಳ ಕಾರ್ಯ ನಿರ್ವಹಣಾಧಿಕಾರಿಯಾದ ಸಿಸ್ಟರ್ ಸ್ಟೆಲ್ಲಾ ಮೇರಿಸ್ ಯೋಗ ಮಾಡುವುದರಿಂದ ಆರೋಗ್ಯ ವೃದ್ಧಿಯಾಗುತ್ತದೆ, ಚಿಕ್ಕ ಮಕ್ಕಳಿಂದ ದೊಡ್ಡರವರೆಗೂ ಯೋಗ ಮಾಡಬೇಕು ಜೀವನದಲ್ಲಿ ಯೋಗ ಅಳವಡಿಸಿಕೊಂಡರೆ ಲವಲವಿಕೆಯಿಂದ ಇರುತ್ತಾರೆ, ಎಂದು ಉದ್ಘಾಟಕರಾಗಿ ಮಾತನಾಡಿದರು.

ಹಸ್ತಿನಾಪುರ ಯೋಗ ಫೌಂಡೇಶನ್ ಟ್ರಸ್ಟಿ ಯುಧಿಷ್ಟರ ಜಿ.ಎಸ್. ಕ್ರೈಸ್ತ ಧರ್ಮದವರು ವಿದ್ಯಾ ಸಂಸ್ಥೆಗಳನ್ನು ಈ ದೇಶಕ್ಕೆ ಅಪಾರ ಕೊಡುಗೆ ನೀಡಿದೆ ಯೋಗಕ್ಕೆ ಸನಾತನ ಕಾಲದಿಂದಲೂ ಆದ್ಯತೆ ಇದೆ ಯಶಸ್ವಿ ಕ್ರೀಡಾಪಟುಗಳು ತಮ್ಮ ಜೀವನದಲ್ಲಿ ಯೋಗ ಅಳವಡಿಸಿಕೊಂಡಿರುವುದರಿಂದ ಉತ್ತಮ ಕ್ರೀಡಾಪಟುಗಳಾಗಿ ಹೊರಹೊಮ್ಮಿದ್ದಾರೆ ಎಂದು ಪ್ರಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಸೆಂಟ್ ಪಾಲ್ಸ್ ಉನ್ನತ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯ ಆಡಳಿತಾಧಿಕಾರಿ, ಸಿಸ್ಟರ್ ರಶ್ಮಿ , ಯೋಗ ತರಬೇತಿದರಾದ ಅಜ್ಜಪ್ಪ ಜೆ, ಎಸ್. ಕೊಂಡಜ್ಜಿ ಬಸಪ್ಪ ಭಾರತ್ ಸ್ಕೌಟ್ ಮತ್ತು ಗೈಡ್ ಸ್ಥಳೀಯ ಸಮಿತಿ ಕಾರ್ಯದರ್ಶಿಗಳಾದ ರವೀಂದ್ರ ಸ್ವಾಮಿ, ಟಿ. ಎಂ. ಹಿಮಾಲಯನ್ ಅಡ್ವೆಂಚರ್ ನ ಸದಸ್ಯರಾದ ಚಂದ್ರ ಮೌಳಿ, ಜೆ ಎನ್ ಪುಟ್ಟರಾಜ್, ಚನ್ನಬಸವ ಶೀಲವಂತ್ ಇನ್ನು ಮುಂತಾದವರು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಗೈಡ್ ಮಕ್ಕಳು ಪ್ರಾರ್ಥನೆ ಸಲ್ಲಿಸಿದರು. ಕುಮಾರಿ ವೈಷ್ಣವಿ, ಮತ್ತು ಧನಶ್ರೀ ಹಿರೇಮಠ್ ಸ್ವಾಗತಿಸಿದರು, ಹಿಮಾಲಯ ಅಡ್ವೆಂಚರ್ ಅಂಡ್ ನೇಚರ್ ಅಕಾಡೆಮಿಯ ಕಾರ್ಯದರ್ಶಿ ಎನ್. ಕೆ.ಕೊಟ್ರೇಶ್ ನಿರೂಪಿಸಿ ವಂದಿಸಿದರು.

# ಸಿಂಗಾಪುರಕ್ಕೆ ತೆರಳಬೇಕಿದ್ದ ಏರ್ ವಿಮಾನ ಇಂಡಿಯಾ ವಿಮಾನ 2 ಗಂಟೆ ವಿಳಂಬ

**ನವದೆಹಲಿ:** ಸಿಂಗಾಪುರಕ್ಕೆ ತೆರಳುತ್ತಿದ್ದ ಏರ್ ಇಂಡಿಯಾ ವಿಮಾನದಲ್ಲಿ ಸುಮಾರು ಎರಡು ಗಂಟೆಗಳ ಕಾಲ ದೋಷಪೂರಿತ ಹವಾನಿಯಂತ್ರಣ ವ್ಯವಸ್ಥೆಯಿಂದ ವಿಮಾನದಲ್ಲಿ ಕುಳಿತಿದ್ದ 200 ಕ್ಕೂ ಹೆಚ್ಚು ಪ್ರಯಾಣಿಕರನ್ನು ಕೆಳಗಿಳಿಸಿದ ಘಟನೆ ದೆಹಲಿ ವಿಮಾನ ನಿಲ್ದಾಣದಲ್ಲಿ ಕಳೆದ ರಾತ್ರಿ ನಡೆದಿದೆ.

ಬೋಯಿಂಗ್ 787-9 ಡ್ರಿಮ್‌ಲೈನರ್ ಏರ್ ಇಂಡಿಯಾ ಏರ್ ಇಂಡಿಯಾ 2380 ವಿಮಾನ ಕಳೆದ ರಾತ್ರಿ 11 ಗಂಟೆ ಸುಮಾರಿಗೆ ದೆಹಲಿ ವಿಮಾನ ನಿಲ್ದಾಣದಿಂದ ಹೊರಡಬೇಕಿತ್ತು,ಆದರೆ ವಿಳಂಬವಾಗಿದೆ . ವಿಮಾನದಲ್ಲಿದ್ದ ಪಿಟಿಐ ಪತ್ರಕರ್ತರ ಪ್ರಕಾರ, ವಿಮಾನದ ಹವಾನಿಯಂತ್ರಣ ವ್ಯವಸ್ಥೆ ಮತ್ತು ವಿದ್ಯುತ್ ಸರಬರಾಜು ದೋಷಪೂರಿತವಾಗಿತ್ತು.ಸುಮಾರು ಎರಡು ಗಂಟೆಗಳ ಕಾಲ ವಿಮಾನದಲ್ಲಿ ಕುಳಿತದ್ದ ಪ್ರಯಾಣಿಕರನ್ನು ಕೆಳಗಿಳಿಸಿ ಟರ್ಮಿನಲ್ ಕಟ್ಟಡಕ್ಕೆ ಕರೆದೊಯ್ಯಲಾಯಿತು.ಆದರೆ ಪ್ರಯಾಣಿಕರನ್ನು ಕೆಳಗಿಳಿಸುತ್ತಿರುವುದು ಏಕೆ ಎಂದು ಸಿಬ್ಬಂದಿ ಯಾವುದೇ ನಿರ್ದಿಷ್ಟ ಕಾರಣವನ್ನು ನೀಡಿಲ್ಲ ಎಂದು ಅವರು ಹೇಳಿದರು.

# ನಾನಾ ಕಾರಣಗಳಿಂದ ಆತ್ಮಹತ್ಯೆ ಮನಸ್ಥಿತಿ ಬದಲಾಗಬೇಕು

**ಚಿಕ್ಕಮಗಳೂರು:** ಮಾನಸಿಕ ಮತ್ತು ಮಾದಕ ವ್ಯಸನಿಗಳು ನಾನಾ ಕಾರಣಗಳಿಗಾಗಿ ಆತ್ಮಹತ್ಯೆ ಮಾಡಿಕೊಳ್ಳಬೇಕೆಂಬ ನಿರ್ಧಾರಕ್ಕೆ ಬರುತ್ತಿದ್ದಾರೆ. ಇದು ಬದಲಾಗುವ ಮನಸ್ಥಿತಿ ಬರಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ವಿ.ಹನುಮಂತಪ್ಪ ಹೇಳಿದರು.

ಅವರು ಇಂದು ಜಿಲ್ಲಾಡಳಿತ, ಜಿ.ಪಂ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆರಕ್ಷಕ ಇಲಾಖೆ, ವಾರ್ತಾ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ, ಯುವ ರೆಡ್‌ಕ್ರಾಸ್ ಘಟಕ, ಐಡಿಎಸ್‌ಜಿ ಸರ್ಕಾರಿ ಕಾಲೇಜು ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ 'ವಿಶ್ವ ಆತ್ಮಹತ್ಯೆ ತಡೆ ದಿನಾಚರಣೆ-2025' ನ್ನು ಉದ್ಘಾಟಿಸಿ ಮಾತನಾಡಿದರು.

ಜೀವನ ಜಿಗುಪ್ಸೆಯಾದಾಗ, ಜೂಜಿನಲ್ಲಿ ಹಣ ಕಳೆದುಕೊಂಡಾಗ, ಪ್ರೀತಿಸಿದವರು ಕೈಕೊಟ್ಟಾಗ ಬೇಸರ, ಪರೀಕ್ಷೆಯಲ್ಲಿ ಅನುತ್ತೀರ್ಣರಾದಾಗ ದುಃಖಿತರಾಗಿ ಆತ್ಮಹತ್ಯೆ ಆಲೋಚನೆಗಳು ಮೂಡುತ್ತವೆ. ಇಂತಹ ಸಂದರ್ಭದಲ್ಲಿ ಕಾನೂನು ಮತ್ತು ಆರೋಗ್ಯ ಇಲಾಖೆ ಜನರಲ್ಲಿ ಆತ್ಮಸ್ಥೈರ್ಯ ತುಂಬಬೇಕಾಗಿದೆ ಎಂದರು.

ಕಾನೂನು ಸೇವಾ ಪ್ರಾಧಿಕಾರ ಈ ರೀತಿಯ ಪ್ರಕರಣಗಳ ಬಗ್ಗೆ ಹೆಚ್ಚು ಪರಿಣಾಮಕಾರಿಯಾಗಿ ಮನಃಪರಿವರ್ತನೆ ಮಾಡುವ ಉದ್ದೇಶ ಹೊಂದಿದೆ. ಮಾನಸಿಕ ವ್ಯಕ್ತಿಗಳನ್ನು ಪತ್ತೆಹಚ್ಚಿ ಸೂಕ್ತ ಚಿಕಿತ್ಸೆ ನೀಡುವ ಯೋಜನೆಯೂ ಇದರಲ್ಲಿದೆ ಎಂದು



ಹೇಳಿದರು.

ಮಾನಸಿಕ ವೇದನೆ ಅನುಭವಿಸುತ್ತಿರುವ ವ್ಯಕ್ತಿಗಳಿಗೆ ಅವರ ಕುಟುಂಬಗಳೇ ಸ್ಪಂದಿಸುತ್ತಿಲ್ಲದಿರುವುದು ಇದಕ್ಕೆ ಕಾರಣ. ಇನ್ನಾದರೂ ಸಂಬಂಧಪಟ್ಟವರು ಆಸ್ಪತ್ರೆಗಳಲ್ಲಿ ಚಿಕಿತ್ಸೆ ಕೊಡಿಸುವ ಮೂಲಕ ಅವರು ನಮ್ಮಂತೆ ಸಮಾನರು ಎಂದು ಅವರ ನೆರವಿಗೆ ಧಾವಿಸಬೇಕೆಂದು ಮನವಿ ಮಾಡಿದರು.

ದೇಶದಲ್ಲಿ ನಾನಾ ಕಾರಣಗಳಿಂದ ವಾರ್ಷಿಕ ಒಂದು ಲಕ್ಷಕ್ಕೂ ಹೆಚ್ಚು ಜನ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದನ್ನು ತಡೆಯುವ ನಿಟ್ಟಿನಲ್ಲಿ ಸರ್ವರ ಪ್ರಯತ್ನದ ಅವಶ್ಯಕತೆ ಇದೆ ಎಂದು ಹೇಳಿದರು.

ಆತ್ಮಹತ್ಯೆ ಮಾಡಿಕೊಳ್ಳುವ ಮನಸ್ಥಿತಿಯವರು ಕಂಡಾಗ ಸಹಾಯವಾಣಿ ಸಂಖ್ಯೆ-15100 ಗೆ ದೂರವಾಣಿ ಕರೆಮಾಡಿ ತಿಳಿಸಬಹುದಾಗಿದ್ದು, ಕಾನೂನು ಸಮಸ್ಯೆಗೆ ಸಂಬಂಧಿಸಿದ ಈ ದೂರವಾಣಿ ಸಂಖ್ಯೆ ದಿನದ 24 ಗಂಟೆ ಮುಕ್ತವಾಗಿರುತ್ತದೆ ಎಂದರು.

ಮಕ್ಕಳ ಸಹಾಯವಾಣಿ ಸಂಖ್ಯೆ-1058 ಹಾಗೂ ಮಹಿಳೆಯರು 112 ಗೆ ಕರೆಮಾಡಿ ತೊಂದರೆಯಲ್ಲಿರುವ ಬಗ್ಗೆ ಖಚಿತಪಡಿಸಬೇಕೆಂದು ವಿನಂತಿಸಿದರು.

15 ವರ್ಷಕ್ಕಿಂತ ಕಡಿಮೆ ಇರುವ ಯುವತಿಯರ ಮೇಲೆ ಲೈಂಗಿಕ ದೌರ್ಜನ್ಯವಾದರೆ ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲು ಮಾಡಲು ಅವಕಾಶವಿದ್ದು, ಯುವಕರು ಬಾಲಕಿಯರನ್ನು ಪ್ರೀತಿ ಮಾಡುತ್ತಿದ್ದರೆ ಕೂಡಲೇ ನಿಲ್ಲಿಸಬೇಕು. ಇಲ್ಲದಿದ್ದರೆ ಹೈಟೆನ್ಸನ್ ವೈರ್ ಹಿಡಿದಂತೆ ಎಂದು ಎಚ್ಚರಿಸಿದರು.

ಡಾ. ವಿನಯ್‌ಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿ, ಸೆ.10 ನೇ ದಿನದಂದು ವಿಶ್ವ ಆತ್ಮಹತ್ಯೆ ತಡೆ ದಿನಾಚರಣೆಯನ್ನು ಆಚರಿಸಿಕೊಂಡು ಬರುತ್ತಿದ್ದು, ನಾನಾ ಕಾರಣಗಳಿಂದ ಲಕ್ಷಾಂತರ ಜನರು ಸಾವಿಗೀಡಾಗುತ್ತಿದ್ದಾರೆ ಎಂದು ಮಾಹಿತಿ ನೀಡಿದರು.

ಪ್ರತೀ ವರ್ಷ ಜೀವನ ಜಿಗುಪ್ಸೆ, ಮಾದಕ ವ್ಯಸನ ಮುಂತಾದ ಕಾರಣಗಳಿಂದಾಗಿ 1.63 ಲಕ್ಷ ಜನ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದು, ಇದನ್ನು ತಡೆಯಲು 14416 ಸಹಾಯವಾಣಿ ಸಂಖ್ಯೆಗೆ ದೂರು ಸಲ್ಲಿಸಬಹುದಾಗಿದೆ ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಡಾ. ಶಶಿಕಲಾ, ಡಾ. ಮಂಜುನಾಥ್, ಡಾ. ಬಾಲಕೃಷ್ಣ, ಡಾ. ಸೀಮಾ ಮತ್ತಿತರರು ಭಾಗವಹಿಸಿದ್ದರು. ವೈದ್ಯಕೀಯ ವಿಜ್ಞಾನ ಸಂಸ್ಥೆಯ ಚಿಕಿತ್ಸಾ ಮನೋಶಾಸ್ತ್ರಜ್ಞ ಹೆಚ್.ಪಿ ಸತೀಶ್ ಉಪನ್ಯಾಸ ನೀಡಿದರು.

ಅಧ್ಯಕ್ಷತೆಯನ್ನು ಐಡಿಎಸ್‌ಜಿ ಕಾಲೇಜು ಪ್ರಾಂಶುಪಾಲರಾದ ತಸ್ನಿಮ ಕೌಸರ್ ವಹಿಸಿದ್ದರು. ಮೊದಲಿಗೆ ಯುವ ರೆಡ್‌ಕ್ರಾಸ್ ಘಟಕದ ಸಂಚಾಲಕ ಡಾ. ಎಂ.ಲೋಕೇಶ್ ಸ್ವಾಗತಿಸಿ, ಆರೋಗ್ಯ ಶಿಕ್ಷಣಾಧಿಕಾರಿ ಬೇಬಿ ವಂದಿಸಿದರು. ಡಿಹೆಚ್‌ಇಒ ಲಲಿತಾ ನಿರೂಪಿಸಿದರು.

# ಇಂದು ಕ್ರೀಡಾ, ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನೆ

**ದಾವಣಗೆರೆ:** ಇಲ್ಲಿಶ್ರೀಮತಿ ಪಾರ್ವತಮ್ಮ ಶಾಮನೂರು ಶಿವಶಂಕರಪ್ಪ ವಿಜ್ಞಾನ ಪದವಿ ಪೂರ್ವ ಕಾಲೇಜಿನ 2025–26ನೇ ಸಾಲಿನ ವಿದ್ಯಾರ್ಥಿ ವೇದಿಕೆ, ಕ್ರೀಡಾ, ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನಾ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭ ಸೆ.12ರಂದು ಬೆಳಿಗ್ಗೆ 11ಗಂಟೆಗೆ ಕಾಲೇಜಿನ ಸಭಾಂಗಣದಲ್ಲಿ ನಡೆಯಲಿದೆ.

ಕರ್ನಾಟಕ ರಾಜ್ಯ ವಿವಿ ಹಾಗೂ ಕಾಲೇಜು ಅಧ್ಯಾಪಕರ ಸಂಘಗಳ ಒಕ್ಕೂಟದ ಮಾಜಿ ಅಧ್ಯಕ್ಷ ಪ್ರೊ. ಸಿ.ಹೆಚ್. ಮುರಿಗೇಂದ್ರಪ್ಪ ಉದ್ಘಾಟನೆ ನೆರವೇರಿಸಲಿದ್ದಾರೆ, ಮುಖ್ಯ ಅತಿಥಿಗಳಾಗಿ ಜಿಲ್ಲಾ ವರದಿಗಾರರ ಒಕ್ಕೂಟ ಅಧ್ಯಕ್ಷ ನಾಗರಾಜ್ ಬಡದಾಳ್, ಹಿರಿಯ ವಿದ್ಯಾರ್ಥಿಗಳಾದ ಪಶು ವೈದ್ಯಾಧಿಕಾರಿ ಡಾ. ಸಂಜಯ್ ಕುಮಾರ್, ಹುಳುಪಿನಹಕಟ್ಟೆಯ ಸಿ.ಎಸ್. ಹೇಮಂತ್ ಕುಮಾರ್, ಕೆ. ಸಿಂಧು ಪಾಲ್ಗೊಳ್ಳಲಿದ್ದಾರೆ. ಕಾಲೇಜಿನ ಪ್ರಾಚಾರ್ಯ ಎನ್.ಜಿ. ರವಿ ಅಧ್ಯಕ್ಷತೆ ವಹಿಸಲಿದ್ದಾರೆ.

# ಸೆ. 14 ರಂದು ಹಿರಿಯ ನಾಗರಿಕರಿಗೆ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆ

**ದಾವಣಗೆರೆ :** ವಿಶ್ವ ಹಿರಿಯ ನಾಗರಿಕರ ದಿನಾಚರಣೆಯ ಅಂಗವಾಗಿ ಸೆ.14 ರಂದು ನಗರದ ಎಂ.ಸಿ.ಸಿ "ಬಿ" ಬ್ಲಾಕ್‌ನ ಬಾಪೂಜಿ ಸ್ಕೂಲ್ ಆವರಣದಲ್ಲಿ ಹಿರಿಯ ನಾಗರಿಕರಿಗಾಗಿ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಹಿರಿಯ ನಾಗರಿಕರ ಸಂಘ, ದಾವಣಗೆರೆ ಜಿಲ್ಲಾ ಸರ್ಕಾರಿ ನಿವೃತ್ತ ನೌಕರರ ಸಂಘ, ಬಾಪೂಜಿ ವಿದ್ಯಾ ಸಂಸ್ಥೆ, ದಾವಣಗೆರೆ ಹಾಗೂ ಹಿರಿಯ ನಾಗರಿಕರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ, ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮವನ್ನು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಮಹಾವೀರ್.ಮ. ಕರೆಣ್ಣವರ ಉದ್ಘಾಟಿಸುವರು.

ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘದ ಉಪಾಧ್ಯಕ್ಷರು ಹಾಗೂ ದಾ.ಜಿ.ಹಿ.ನಾ.ಸಂಘದ ಅಧ್ಯಕ್ಷರಾದ ಎಸ್ ಗುರುಮೂರ್ತಿ ಅಧ್ಯಕ್ಷತೆ ವಹಿಸುವರು.ಮುಖ್ಯ ಅತಿಥಿಗಳಾಗಿ ದಾವಣಗೆರೆ ಜಿಲ್ಲಾ ಸರ್ಕಾರಿ ನಿವೃತ್ತ ನೌಕರರ ಸಂಘದ ಜಿಲ್ಲಾ ಅಧ್ಯಕ್ಷರಾದ ಡಾ.ವೀರಯ್ಯ, ಹಿರಿಯ ವಕೀಲರು ಹಾಗೂ ವಕೀಲರ ಸಂಘದ ಮಾಜಿ ಅಧ್ಯಕ್ಷರಾದ ಎಲ್.ಹೆಚ್ ಅರುಣಕುಮಾರ್ ಭಾಗವಹಿಸುವರು.

# ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನ–2025

**ದಾವಣಗೆರೆ:** ಸೆಪ್ಟೆಂಬರ್ 11 ರಂದು ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ ಆವರಣದಲ್ಲಿ ರಾಷ್ಟ್ರೀಯ ಆರಣ್ಯ ಹುತಾತ್ಮರ ದಿನಾಚರಣೆಯನ್ನು ಆಚರಿಸಲಾಯಿತು.

ಈ ವೇಳೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ವೇಲಾ ಡಿ.ಕೆ ಉಪಸ್ಥಿತರಿದ್ದು ಅರಣ್ಯ ಹುತಾತ್ಮರ ಸ್ಮಾರಕಕ್ಕೆ ಹೂ ಗುಚ್ಛ ಸಲ್ಲಿಸಿ ಪೊಲೀಸ್ ಕವಾಯತುನೊಂದಿಗೆ ಗೌರವ ವಂದನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠ್ಠಲ್ ರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ್, ಪ್ರಾದೇಶಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಹರ್ಷವರ್ಧನ್, ಸಾಮಾಜಿಕ ಆರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ನವೀನ್ ಎಂ.ಎನ್. ಹಾಗೂ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಭಾಗವಹಿಸಿದ್ದರು.

# ಜಿಲ್ಲಾ ಮಟ್ಟದ ಭಾಷಣ ಸ್ಪರ್ಧೆಯಲ್ಲಿ ನಾಗವೇಣಿ ಪ್ರಥಮ

**ದಾವಣಗೆರೆ :** ಶಾಲಾ ಶಿಕ್ಷಣ ಇಲಾಖೆ, ಸರ್ಕಾರಿ ಪ್ರೌಢಶಾಲೆ ಮೆಳ್ಳೆಕಟ್ಟೆ, ದಾವಣಗೆರೆ ಉತ್ತರವಲಯದಿಂದ ಸೆ.11 ರಂದು ನನ್ನ ಮತ, ನನ್ನ ಹಕ್ಕು ವಿಷಯದ ಕುರಿತು ನಡೆದ ಜಿಲ್ಲಾ ಮಟ್ಟದ ಭಾಷಣ ಸ್ಪರ್ಧೆಯಲ್ಲಿ ಕುಮಾರಿ ನಾಗವೇಣಿ 10ನೇ ತರಗತಿ ಇವರು ಪ್ರಥಮ ಸ್ಥಾನವನ್ನು ಪಡೆದಿರುತ್ತಾರೆ.

ಸೆ.15 ರಂದು ನಡೆಯುವ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಅವರು ಬಹುಮಾನ ವಿತರಣೆ ಮಾಡುವರು.

# ಯುವನಿಧಿ ಯೋಜನೆಯ ಫಲಾನುಭವಿಗಳಿಗೆ ತರಬೇತಿ

**ದಾವಣಗೆರೆ :** ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ಕರ್ನಾಟಕ –ಕೌಶಲ್ಯಾಭಿವೃದ್ಧಿ ನಿಗಮದ ವತಿಯಿಂದ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲೊಂದಾದ ಯುವನಿಧಿ ಆಯೋಜನೆಯ ಫಲಾನುಭವಿಗಳಿಗೆ ಯುವನಿಧಿ ಪ್ಲಸ್ ಯೋಜನೆಯಡಿ ಉಚಿತ ಕೌಶಲ್ಯ ತರಬೇತಿ ನೀಡಿ ಉದ್ಯೋಗವಕಾಶ ನೀಡಲಾಗುತ್ತಿದೆ.

ಈ ನಿಟ್ಟಿನಲ್ಲಿ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ ತರಬೇತಿ ಸಂಸ್ಥೆಗಳಾದ ಐಟಿಐ ಜಿ.ಟಿ.ಟಿ.ಸಿ, ಕೆ.ಜಿ.ಟಿ.ಟಿ.ಐ ಹಾಗು ಸಿಡಾಕ್ ಸಂಸ್ಥೆಗಳ ಮೂಲಕ ಉಚಿತ ಕೌಶಲ್ಯ ತರಬೇತಿ ನೀಡಲಾಗುತ್ತಿದೆ. ಯುವನಿಧಿ ಯೋಜನೆಯ ಫಲಾನುಭವಿಗಳು ತರಬೇತಿಗಾಗಿ ಇಚಿಣ್ಣುಚಿಟಇಚಿಡಿ ರಿಂಡಿಣಚಿಟ ಅಲ್ಲಿ ಖಿಜರುಣಡಿಚಿಣುಂಟಿ ಮಾಡಿಕೊಳ್ಳಬಹುದೆಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಡಾ.ಸಿದ್ದೇಶ್.ಎಸ್ ತಿಳಿಸಿದ್ದಾರೆ.

# ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಅರ್ಜಿ ಆಹ್ವಾನ

**ದಾವಣಗೆರೆ:** 2025–26ನೇ ಸಾಲಿನಲ್ಲಿ ಯಾವುದೇ ಕ್ಷೇತ್ರಗಳಲ್ಲಿ ಅಸಾಧಾರಣ ಪ್ರತಿಭೆಯೊಂದಿಗೆ ಸಾಧನೆ ಮಾಡಿದ ಮಕ್ಕಳಿಗೆ ಜಿಲ್ಲಾ ಮಟ್ಟದ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಪ್ರತಿ ಕ್ಷೇತ್ರಕ್ಕೆ ಇಬ್ಬರು ಮಕ್ಕಳಂತೆ ಒಟ್ಟು 08 ಮಕ್ಕಳಿಗೆ ರೂ.10,000/– ನಗದು ಹಾಗೂ ಪ್ರಶಸ್ತಿ ಪತ್ರವನ್ನು ನೀಡಲಾಗುವುದು. ಈ ಪ್ರಶಸ್ತಿಗೆ ಆಯ್ಕೆ ಆಗುವಂತಹವರು ನಾವೀನ್ಯತೆ, ತಾರ್ಕಿಕ ಸಾಧನೆಗಳು, ಕ್ರೀಡೆ, ಕಲೆ, ಸಂಸ್ಕೃತಿ, ಸಂಗೀತ ಕ್ಷೇತ್ರಗಳಲ್ಲಿ ಅಪ್ರತಿಮ ಪ್ರತಿಭೆ ಉಳ್ಳವರಾಗಿದ್ದು, ಅವರು ಸಾಧಿಸಿದ ಪ್ರತಿಭೆಯ ಬಗ್ಗೆ ವೃತ್ತ ಪತ್ರಿಕೆಗಳಲ್ಲಿ ವರದಿಯಾಗಿರಬೇಕು ಅಥವಾ ಸಂಬಂಧಪಟ್ಟ ಕ್ಷೇತ್ರದ ತಜ್ಞರಿಂದ ಪ್ರಮಾಣೀಕರಿಸಿರಬೇಕು. ಮಕ್ಕಳ ವಯಸ್ಸಿನ ಪ್ರಮಾಣ ಪತ್ರವನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಸಲ್ಲಿಸಬೇಕು. ಅರ್ಜಿ ನಮೂನೆಯನ್ನು ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪಡೆದು, ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಛೇರಿ, ಸರ್ಕಾರಿ ಬಾಲಕರ ಬಾಲಮಂದಿರ ಆವರಣ, ಎಂ.ಸಿ.ಸಿ.'ಬಿ' ಬ್ಲಾಕ್, ಕುವೆಂಪು ನಗರ, ದಾವಣಗೆರೆ. ದೂ.ಸಂ: 08192–264056 ಅರ್ಜಿಯನ್ನು ಪಡೆದು ಅಗತ್ಯ ದಾಖಲೆಗಳೊಂದಿಗೆ ಸೆಪ್ಟೆಂಬರ್ 23 ರೊಳಗಾಗಿ ಕಚೇರಿಗೆ ಸಲ್ಲಿಸಬೇಕೆಂದು ಉಪನಿರ್ದೇಶಕ ರಾಜಾನಾಯ್ಕ್ ತಿಳಿಸಿದ್ದಾರೆ.

## ಅರಣ್ಯ ಹುತಾತ್ಮರ ದಿನಾಚರಣೆ

# ವನ ಸಂಪತ್ತು ಇದ್ದರೆ ಮನುಷ್ಯ–ಜೀವ ಸಂಕುಲ ಉಳಿಯಲು ಸಾಧ್ಯ : ನ್ಯಾ.ವಿ.ಹನುಮಂತಪ್ಪ




**ಚಿಕ್ಕಮಗಳೂರು :** ವನ ಸಂಪತ್ತು ಇದ್ದರೆ ಮಾತ್ರ ಮನುಷ್ಯರು ಹಾಗೂ ಇತರೆ ಜೀವ ಸಂಕುಲಗಳು ಉಳಿಯಲು ಸಾಧ್ಯ ಅರಣ್ಯ ರಕ್ಷಣೆ ಮಾಡಬೇಕಾದುದು ಪ್ರತಿಯೊಬ್ಬ ನಾಗರೀಕನ ಆದ್ಯ ಕರ್ತವ್ಯ ಎಲ್ಲರೂ ಕಾನೂನು ಪಾಲಕರಾದರೆ ಯಾವುದೆ ಸಮಸ್ಯೆ ಎದುರಾಗುವುದಿಲ್ಲ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾ.ವಿ.ಹನುಮಂತಪ್ಪ ಹೇಳಿದರು.

ಅವರು ಶ್ರೀನಿವಾಸ ನಗರದಲ್ಲಿ ಅರಣ್ಯ ಇಲಾಖೆ ಹಮ್ಮಿಕೊಂಡಿದ್ದ ಅರಣ್ಯ ಹುತಾತ್ಮ ದಿನಾಚರಣೆಯಲ್ಲಿ ದಿ.ಪಿ.ಶ್ರೀನಿವಾಸ್ ಪುತ್ಥಳಿಗೆ ಪುಷ್ಪಾರ್ಪಣೆ ಮಾಡಿ ಮಾತನಾಡಿದರು.

ಮಾನವನ ದುರಾಸೆಯಿಂದ ವನ ಮತ್ತು ವನ್ಯಪ್ರಾಣಿಗಳ ಮೇಲೆ ದಾಳಿ ಮಾಡುತ್ತಿರುವ ಸಂಬಂದ ಅರಣ್ಯ ಸಂಪತ್ತನ್ನು ನಾಶ ಮಾಡುತ್ತಿರುವುದರಿಂದ ಕಾಡಿನಲ್ಲಿರಬೇಕಾದ ಪ್ರಾಣಿಗಳು ನಾಡಿನತ್ತ ಹೆಜ್ಜೆ ಹಾಕುತ್ತಿವೆ. ಅವುಗಳ ಆವಾಸ ಸ್ಥಾನವನ್ನು ಮನುಷ್ಯರು ಆಕ್ರಮಿಸುತ್ತಿರುವ ಸಲುವಾಗಿ ದಿಕ್ಕುತೋಚದೆ ನಗರಪ್ರದೇಶದತ್ತ ದಾವಿಸುತ್ತಿದೆ. .ಪ್ರಾಣಿ, ಪಕ್ಷಿಗಳು ಸೇರಿದಂತೆ ಇರುವೆಯಿಂದ ಆನೆಯವರೆಗೂ ಎಲ್ಲವೂ ವಾಸಿಸುವ ಸ್ಥಳ ಅರಣ್ಯ ಪ್ರದೇಶಗಳು, ಅವುಗಳು ಉಳಿದರೆ ಮಾತ್ರವೇ ನಾವುಗಳು ಉಳಿಯಲು ಸಾಧ್ಯ. ನಮ್ಮ ರಾಜ್ಯದ ಓರ್ವ ದಕ್ಷ, ನಿಷ್ಠಾವಂತ ಪ್ರಾಮಾಣಿಕ ಅರಣ್ಯಾಧಿಕಾರಿ ಪಿ.ಶ್ರೀನಿವಾಸ್ ರವರು ಕಾಡುಗಳ್ಳ ವೀರಪ್ಪನ್‌ನ ಕುತಂತ್ರಕ್ಕೆ ಬಲಿಯಾಗಿ ಹುತಾತ್ಮ ರಾಗಿದ್ದಾರೆ ಇಂತಹವರು ಸಾಕಷ್ಟು ಮಂದಿ ಇದ್ದಾರೆ. ಅರಣ್ಯ ಉಳಿವಿಗಾಗಿ ಹೋರಾಡಿ ಪ್ರಾಣತ್ಯಾಗ ಮಾಡಿದವರ ನೆನಪಿಗಾಗಿ ಹುತಾತ್ಮರ ದಿನಾಚರಣೆ ಮಾಡಲಾಗುತ್ತಿದೆ. ಇವರೆಲ್ಲಾ ಇಡೀ ಜೀವ ಸಂಕುಲ ಉಳಿವಿಗಾಗಿ ಹೋರಾಡಿ ಪ್ರಾಣಾರ್ಪಣೆ ಮಾಡಿದರವರು ಎಂದರು.

ಹುತಾತ್ಮ ದಿನಾಚರಣೆ ಎಂದರೆ ಮನಸ್ಸಿನಲ್ಲಿ ಒಂದುರೀತಿ ವೇದನೆ ಮತ್ತು ಭಾರ ಕಾರಣ ಲಕ್ಷಾಂತರ ಮಂದಿ ದೇಶವನ್ನು ಸಂರಕ್ಷಣೆ ಮಾಡಬೇಕೆಂಬ ದೃಷ್ಟಿಯಿಂದ ತಮ್ಮ ಪ್ರಾಣತ್ಯಾಗ ಮಾಡಿದ್ದಾರೆ. ದೇಶದ ಗಡಿಭಾಗದಲ್ಲಿ ನಿಂತು ಪ್ರಾಣಾರ್ಪಣೆ ಮಾಡುವ ಸೈನಿಕರು ಒಂದೆಡೆ ಇದ್ದಾರೆ. ದೇಶದ ಒಳಗಡೆ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಬೇಕೆಂಬ ದೃಷ್ಟಿಯಿಂದ ನಮ್ಮನ್ನು ಸಂರಕ್ಷಣೆ ಮಾಡುವ ಪೊಲೀಸ್ ವ್ಯವಸ್ಥೆ ಮತ್ತೊಂಡೆ ಕರ್ತವ್ಯ ನಿರ್ವಹಿಸುತ್ತಿದೆ ಇವುಗಳನ್ನು ಹೊರತು ಪಡಿಸಿ ದೇಶದಲ್ಲಿ ಮನುಷ್ಯನನ್ನು ಒಳಗೊಂಡಂತೆ ಎಲ್ಲಾ ಜೀವ ಸಂಕುಲಗಳನ್ನು ವಿಶ್ವಾಸ ಮತ್ತು ಶಾಂತಿಯಿಂದ ತಮ್ಮ ಬದುಕನ್ನು ನಡೆಸಿಕೊಂಡಿರಬೇಕೆಂಬ ತ್ಯಾಗ, ಬಲಿದಾನವನ್ನು ಮಾಡುವಂತವರು ಕೇವಲ ಅರಣ್ಯ ಇಲಾಖೆ ಯವರು ಮಾತ್ರ ಎಂದರು.

ಅರಣ್ಯ ಸಂರಕ್ಷಣಾಧಿಕಾರಿ ಯಶ್‌ಪಾಲ್ ಕ್ಷೀರ್‌ಸಾಗರ್ ಮಾತನಾಡಿ, ರಾಜ್ಯದಲ್ಲಿರುವ 24 ಇಲಾಖೆಗಳಲ್ಲಿ 23 ಇಲಾಖೆಗಳು ಈ ಪೀಳಿಗೆಗೆ ಕೆಲಸ ಮಾಡುತ್ತಿದೆ ಆದರೆ ಮುಂದಿನ ಪೀಳಿಗೆಗೆ ಕಾರ್ಯ ನಿರ್ವಹಿಸುತ್ತಿರುವುದು ನಮ್ಮ ಅರಣ್ಯ ಇಲಾಖೆ ಮಾತ್ರ ಎಂಬುದು ಹೆಮ್ಮೆ . ಅರಣ್ಯ ಉಳಿವಿಗಾಗಿ ಹಗಲು ರಾತ್ರಿ ಎನ್ನದೆ ದಕ್ಷತೆಯಿಂದ ಕರ್ತವ್ಯ ನಿರ್ವಹಿಸುತ್ತಿದ್ದ ಸಂದರ್ಭ ಬಲಿದಾನವಾದವರ ನೆನಪಿಗಾಗಿ ಹುತಾತ್ಮರ ದಿನಾಚರಣೆ ಆಚರಿಸಲಾಗುತ್ತಿದ್ದು ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಪ್ರಾರ್ಥಿಸಿ ಹುತಾತ್ಮರ ಸಂಖ್ಯೆ ಮುಂದೆ ಹೆಚ್ಚದಂತಾಗಲಿ ಎಂದರು.

ಕೋವಿಡ್ ಸಂದರ್ಭದಲ್ಲಿ ಆಕ್ಸಿಜನ್ ಕೊರತೆಯಾಗಿರುವ ಬಗ್ಗೆ ದೇಶಕ್ಕೆ ತಿಳಿದಿದೆ, ಉತ್ತರಾಖಂಡ್, ಜಮ್ಮುವಿನ ಗುಡ್ಡಗಾಡು ಪ್ರದೇಶದಲ್ಲಾದ ಪ್ರವಾಹಗಳಾಗಳು, ಕೊಡಗು ಹಾಗೂ ಚಿಕ್ಕಮಗಳೂರಿನಲ್ಲಾದ ಭೂ ಕುಸಿತಕ್ಕೆ ಪರಿಸರದ ಮೇಲಾಗುತ್ತಿರುವ ಹಾನಿಯೇ ಕಾರಣ. ಆ ಸಂದರ್ಭದಲ್ಲಿ ಅರಣ್ಯ ಇಲಾಖೆ ಸಿಬ್ಬಂದಿಗಳು ಜನರಲ್ಲಿ ಬಹಳಷ್ಟು ಅರಿವು ಮೂಡಿಸಿದ್ದಾರೆ ಎಂದರು.

# 6 ತಿಂಗಳ ಗರ್ಭಿಣಿ ಪತ್ನಿ ಹತ್ಯೆಗೈದು ಅಪಘಾತ ಎಂದು ಬಿಂಬಿಸಿದ್ದ ಪತಿ ಸೇರಿ ಮೂವರ ಬಂಧನ



**ಬೆಳಗಾವಿ:** ಆರು ತಿಂಗಳ ಗರ್ಭಿಣಿ ಪತ್ನಿಯನ್ನು ಹತ್ಯೆಗೈದು ಅಪಘಾತ ಎಂದು ಬಿಂಬಿಸಿದ್ದ ಪತಿ ಹಾಗೂ ಆತನ ಇಬ್ಬರು ಸಹಚರರನ್ನು ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆ.

ಚೈತಾಲಿ ಪ್ರದೀಪ್ ಕಿರಣಗಿ (23) ಹತ್ಯೆಯಾದ ಗರ್ಭಿಣಿ ಮಹಿಳೆ. ಆರೋಪಿಗಳನ್ನು ಮಹಿಳೆಯ ಪತಿ ಪ್ರದೀಪ್ ಅನ್ನಾಸಾಬ್ ಕಿರಣಗಿ ಈತನ ಸಹಚರರಾದ ಸದ್ದಾಂ ಅಕ್ಬರ್ ಇಮಂದರ್ ಮತ್ತು ರಾಜನ್ ಗಣಪತಿ ಕಾಂಬ್ಳೆ ಎಂದು ಗುರ್ತಿಸಲಾಗಿದೆ. ಚಿಕ್ಕೋಡಿಯ ಉಗಾರ್ ಬಿಕೆ ಗ್ರಾಮದಲ್ಲಿ ಕಳೆದ ಭಾನುವಾರ ರಾತ್ರಿ ಘಟನೆ ನಡೆದಿದೆ.

ಪ್ರಕರಣ ಕುರಿತು ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ್ ಗುಳೇದ್ ಅವರು ಮಾಹಿತಿ ನೀಡಿದ್ದು, ರಾತ್ರಿ ನಮ್ಮ ಕಾಗವಾಡ್ ಪಿಎಸ್ಐಗೆ ಒಂದು ಕರೆ ಬಂದಿತ್ತು. ನನ್ನ ಪತ್ನಿಗೆ ಅಪಘಾತವಾಗಿದೆ, ನೀವು ಸಹಾಯ ಮಾಡಿ. ನಾನು ಹೆಚ್ಚಿನ ಚಿಕಿತ್ಸೆಗಾಗಿ ಕಾಗವಾಡ ಸಮುದಾಯ ಆಸ್ಪತ್ರೆಗೆ ಕರೆದುಕೊಂಡು ಹೋಗುತ್ತೇನೆ' ಎಂದು ಕೊಲೆಯಾದ ಮಹಿಳೆಯ ಪತಿ ಪ್ರದೀಪ್ ತಿಳಿಸಿದ್ದ.

ತಕ್ಷಣ ನಮ್ಮ ಓರ್ವ ಸಿಬ್ಬಂದಿ ಆಸ್ಪತ್ರೆಗೆ ಹೋಗಿ ವಿಚಾರಿಸಿದಾಗ ಕಾಗವಾಡ ಆಸ್ಪತ್ರೆಯಲ್ಲಿ ಅವರು ಇರಲಿಲ್ಲ. ಹಾಗಾಗಿ ಪೊಲೀಸರು ಅವರನ್ನು ದೂರವಾಣಿ ಮುಖಾಂತರ ಸಂಪರ್ಕಿಸಿದಾಗ, ನಾನು ಮಹಾರಾಷ್ಟ್ರದ ಮೀರಜ್ ಆಸ್ಪತ್ರೆಗೆ ಬಂದಿದ್ದೇನೆ. ಪತ್ನಿ ಮರಣ ಹೊಂದಿದ್ದಾಳೆ. ನಮಗೆ ಕಾನೂನು ಪ್ರಕ್ರಿಯೆಗಳನ್ನು ಆದಷ್ಟು ಬೇಗನೆ ಮಾಡಿಕೊಡಿ. ನಾವು ಮುಂದಿನ ಕಾರ್ಯ ಮಾಡುತ್ತೇವೆ ಎಂದು ಪದೇ ಪದೇ ನಮಗೆ ಕರೆ ಮಾಡುತ್ತಿದ್ದ.

ಅಷ್ಟರೊಳಗೆ ಆತ ಹೇಳಿದ ಅಪಘಾತವಾದ ಸ್ಥಳ ಮತ್ತು ಅವನ ವಾಹನ ಪರಿಶೀಲನೆ ಮಾಡಲಾಗಿತ್ತು. ಆದರೆ, ಆ ರೀತಿ ಏನೂ ಕಂಡುಬರಲಿಲ್ಲ. ಈ ಆಧಾರದ ಮೇಲೆ ನಮ್ಮ ಪೊಲೀಸರಿಗೆ ಸಂಶಯ ಶುರುವಾಗಿತ್ತು.

ಅಷ್ಟರಲ್ಲಿ ಮಹಾರಾಷ್ಟ್ರ ಮೀರಜ್ ಪೊಲೀಸರು ಕಾಗವಾಡ ಪೊಲೀಸರಿಗೆ ಈ ರೀತಿ ಪ್ರಕರಣ ಬಂದಿದೆ ಮೇಲ್ನೋಟಕ್ಕೆ ಇದು ಕೊಲೆಯಂತೆ ಕಾಣಿಸುತ್ತಿದೆ ಎಂದು ತಿಳಿಸುತ್ತಿದ್ದಂತೆ, ನಮ್ಮ ಪೊಲೀಸರು ಆರೋಪಿಗಳನ್ನು ಮತ್ತಷ್ಟು ವಿಚಾರಣೆ ಮಾಡಿದಾಗ ತಾವು ಮಾಡಿರುವ ತಪ್ಪನ್ನು ಬಾಯಿಬಿಟ್ಟಿದ್ದಾರೆಂದು ಹೇಳಿದ್ದಾರೆ.

ಆರೋಪಿಯು ಚೈತಾಲಿ ತಲೆಗೆ ಬಲವಾಗಿ ಹೊಡೆದು ಹತ್ಯೆ ಮಾಡಿದ್ದು, ಬಳಿಕ ಅಪಘಾತದ ಕಥೆಯನ್ನು ಹೆಣೆದಿದ್ದಾನೆ. ವಿಚಾರಣೆ ವೇಳೆ ಆರೋಪಿ ತಪ್ಪೊಪ್ಪಿಕೊಂಡಿದ್ದಾರೆ.

ಪ್ರದೀಪ್ ಈ ಹಿಂದೆ ಎರಡು ಬಾರಿ ತನ್ನ ಪತ್ನಿಯನ್ನು ಕೊಲ್ಲಲು ಪ್ರಯತ್ನಿಸಿದ್ದು, ಆದರೆ, ಆಕೆ ಬದುಕುಳಿದಿದ್ದಾಳೆ. ಎರಡು ವರ್ಷಗಳ ಹಿಂದೆ ಚೈತಾಲಿಯನ್ನು ವಿವಾಹವಾದ ಪ್ರದೀಪ್ ವಿವಾಹೇತರ ಸಂಬಂಧ ಹೊಂದಿದ್ದನು. ಈ ಸಂಬಂಧ ಬಯಲಾಗುತ್ತದೆ ಎಂಬ ಭಯದಿಂದ ಪತ್ನಿಯನ್ನು ಕೊಲ್ಲಲು ನಿರ್ಧರಿಸಿದ್ದಾನೆಂದು ಪೊಲೀಸರು ಮಾಹಿತಿ ನೀಡಿದ್ದಾರೆ.

## ಸರ್ಕಾರಿ ಶಾಲಾ ಮಕ್ಕಳಿಗೆ 1050 ಬ್ಯಾಗ್ ವಿತರಣೆ

# ನೋವೇಲ್ ಹೋಪ್ ಫೌಂಡೇಶನ್ ಸಮಾಜಮುಖಿ ಕಾರ್ಯದಲ್ಲಿ ಮುಂದು




**ಹರಿಹರ:** "ಸರ್ಕಾರಿ ಶಾಲೆಯಲ್ಲಿ ಓದುತ್ತಿರುವ ಮಕ್ಕಳು ಯಾವುದೇ ರೀತಿಯ ಕೀಳರಿಮೆ ಇಟ್ಟುಕೊಳ್ಳದೆ ಆತ್ಮವಿಶ್ವಾಸದಿಂದ ವ್ಯಾಸಂಗ ಮಾಡಿ, ಖಾಸಗಿ ಶಾಲಾ ವಿದ್ಯಾರ್ಥಿಗಳಿಗಿಂತ ಉತ್ತಮ ಸಾಧನೆ ಮಾಡಬೇಕು" ಎಂದು ನೋವೇಲ್ ಹೋಪ್ ಫೌಂಡೇಶನ್‌ನ ಸೀನಿಯರ್ ಎಕ್ಸಿಕ್ಯೂಟಿವ್ ದೀಪಕ್ ಕರೆ ನೀಡಿದರು.

ಹರಿಹರ ತಾಲೂಕಿನ ನಂದಿಗುಡಿ, ದೂಳೆಹೊಳೆ, ಕೊಕ್ಕನೂರು, ಕೊಂಡಜ್ಜಿ, ಸಾರಥಿ ಹಾಗೂ ಹರಿಹರದ ನೀಲಕಂಠ ನಗರ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಒಟ್ಟು 1050 ಶಾಲಾ ಬ್ಯಾಗ್‌ಗಳನ್ನು ವಿತರಿಸುವ ಕಾರ್ಯಕ್ರಮ ಬುಧವಾರ ಜರುಗಿತು.

ಈ ಸಂದರ್ಭದಲ್ಲಿ ಮಾತನಾಡಿದ ದೀಪಕ್, "ಸರ್ಕಾರಿ ಶಾಲಾ ಮಕ್ಕಳು ಉತ್ತಮ ಗುಣಮಟ್ಟದ ಶಿಕ್ಷಣ ಪಡೆಯಬೇಕು ಎಂಬುದು ನಮ್ಮ ಆಶಯ. ನಮ್ಮ ಫೌಂಡೇಶನ್ ಸಮಾಜಮುಖಿ ಕಾರ್ಯಗಳಲ್ಲಿ ಸತತ ತೊಡಗಿಕೊಂಡಿದೆ. ಮಕ್ಕಳಿಗೆ ಬ್ಯಾಗ್‌ಗಳ ಜೊತೆಗೆ ತಟ್ಟೆ, ಲೋಟ, ವಾಟರ್ ಬಾಟಲ್‌ಗಳನ್ನು ನೀಡುವುದು, ಅಗತ್ಯವಿರುವ ಶಾಲೆಗಳಿಗೆ ಶೌಚಾಲಯಗಳನ್ನು ನಿರ್ಮಿಸುವುದು, ಅತಿಥಿ ಶಿಕ್ಷಕರ ನೇಮಕಾತಿ ಮಾಡಲು ಸಹಾಯ ಮಾಡುವುದನ್ನು ಒಳಗೊಂಡಂತೆ ಹಲವು ಯೋಜನೆಗಳನ್ನು ಜಾರಿಗೊಳಿಸುತ್ತಿದ್ದೇವೆ. ಯಾರಿಗಾದರೂ ಯಾವುದೇ ರೀತಿಯ ಸಹಾಯ ಬೇಕಿದ್ದರೆ ನಮ್ಮ ಸಂಸ್ಥೆಗೆ ತಮ್ಮ ಬೇಡಿಕೆ ಸಲ್ಲಿಸಬಹುದು, ಅದನ್ನು ಪರಿಶೀಲಿಸಿ ನೆರವು ನೀಡಲು ನಾವು ಸದಾ ಸಿದ್ಧ" ಎಂದು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಬಿಇಒ ಡಿ.ದುರುಗಪ್ಪ ಅವರು, "ಹರಿಹರ ತಾಲೂಕಿನ ಆರು ಶಾಲೆಗಳಿಗೆ ಇಂದು 1050 ಬ್ಯಾಗ್ ಗಳನ್ನು ವಿತರಿಸಲಾಗಿದೆ. ಮುಂದಿನ ದಿನಗಳಲ್ಲಿ ಸರ್ಕಾರಿ ಶಾಲಾ ಮಕ್ಕಳ ಸೌಲಭ್ಯವನ್ನು ಹೆಚ್ಚಿಸಲು ಫೌಂಡೇಶನ್ ಇನ್ನಷ್ಟು ಕೈಜೋಡಿಸಬೇಕು" ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಅಖಿಲ ಭಾರತ ಎನ್‌ಪಿಎಸ್ ನೌಕರರ ಸಂಘದ ತಾಲೂಕು ಅಧ್ಯಕ್ಷ ಪರುಶುರಾಮ್, ಸರ್ಕಾರಿ ನೌಕರರ ಸಂಘದ ಖಜಾಂಚಿ ಗಿರೀಶ್, ಸಂಘಟನಾ ಕಾರ್ಯದರ್ಶಿ ಪೀರು ನಾಯಕ್, ಅನುದಾನಿತ ನೌಕರರ ಸಂಘದ ಒಕ್ಕೂಟದ ಅಧ್ಯಕ್ಷ ಭೀಮಪ್ಪ ಕೆ., ಎನ್‌ಪಿಎಸ್ ಸಂಘದ ಮಾಧ್ಯಮ ಸಲಹೆಗಾರ ಶಶಿಕುಮಾರ್, ಸದಸ್ಯ ರಾಘವೇಂದ್ರ, ಶಾಲೆಯ ಮುಖ್ಯಶಿಕ್ಷಕರು, ಸಹ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಅಕ್ರಮ ಗಣಿಗಾರಿಕೆ ಸಂಪತ್ತು ವಸೂಲಾತಿ ಆಯುಕ್ತರ ನೇಮಕಕ್ಕೆ ಸರ್ಕಾರ ಗೆಜೆಟ್ : ಸಚಿವ ಎಚ್. ಕೆ. ಪಾಟೀಲ



**ಗದಗ:** ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆಯಿಂದ ಉತ್ಪತ್ತಿಯಾದ ಅಂದಾಜು 78 ಸಾವಿರ ಕೋಟಿ ಮೊತ್ತವನ್ನು ವಸೂಲಿ ಮಾಡಲು ರಾಜ್ಯ ಸರ್ಕಾರ ಸೆ.9 ರಂದು ಗೆಜೆಟ್ ಹೊರಡಿಸಿದೆ. ಸರ್ಕಾರದ ಕಾರ್ಯದರ್ಶಿ ಸಮಾನಾಂತರ ಅಧಿಕಾರಿಯನ್ನು ಆಯುಕ್ತರಾಗಿ ನೇಮಕ ಮಾಡಲಾಗುವುದು ಎಂದು ಕಾನೂನು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಗದಗ ನಗರದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಅಕ್ರಮ ಗಣಿಗಾರಿ–ಕೆ ಮತ್ತು ಅಪರಾಧ ಉತ್ಪತ್ತಿಯಿಂದ ಸ್ವತ್ತು ವಸೂಲಾತಿ ಮತ್ತು ಜಪ್ತಿಗೆ ಆಯುಕ್ತರ ನೇಮಕದ ಕುರಿತು ಗೆಜೆಟ್ ಹೊರಡಿಸಲಾಗಿದೆ. ಆಯುಕ್ತರ ನೇಮಕ ಕುರಿತು ವಿಧಾನಸಭೆ ಮತ್ತು ವಿಧಾನ ಪರಿಷತ್ ನಲ್ಲಿ ಮಸೂದೆ ಮಂಡನೆ ಆಗಿತ್ತು. ಸೆ.9 ರಂದು ಮಂಗಳವಾರ ರಾಜ್ಯಪಾಲರು ಮಸೂದೆ ಕರಡು ಪ್ರತಿಗೆ ಅಂಕಿತ ಹಾಕಿದ್ದಾರೆ. ತದ ನಂತರ ಸರ್ಕಾರ ಶ್ರೀಘ್ರದಲ್ಲಿ ಗೆಜೆಟ್ ಹೊರಡಿಸಿದೆ. ಈ ಕಾನೂನಿಂದ ಆರ್ಥಿಕ ಶಿಸ್ತು ಪಾಲನೆ ಮಾಡಿದಂತೆ ಆಗುತ್ತದೆ ಎಂದರು.

ರಾಜ್ಯದಲ್ಲಿ 2009 – 10ರ ಅವಧಿಯಲ್ಲಿ 12000 ಕೋಟಿ ರೂ. ಮೊತ್ತದ ಅಕ್ರಮ ಗಣಿಗಾರಿಕೆ ನಡೆದಿದೆ ಎಂದು ಅಂದಾಜಿಸಲಾಗಿತ್ತು. ಪ್ರಸ್ತುತ ಅಕ್ರಮ ಗಣಿ ಸಂಪತ್ತಿನ ಬೆಲೆ 78000 ಕೋಟಿ ರೂ. ಆಗಬಹುದು ಎಂದು ಸಚಿವ ಸಂಪುಟ ಸಭೆಯಲ್ಲಿ ಅಂದಾಜಿಸಲಾಗಿತ್ತು. ಈಗ ಒಂದು ಲಕ್ಷ ಕೋಟಿಗೂ ಅಧಿಕ ಸಂಪತ್ತು ಲೂಟಿ ಆಗಿದೆ ಎಂದು ಆರೋಪಿಸಿದರು.

ಅಕ್ರಮ ಗಣಿ ಸಂಪತ್ತು ವಸೂಲಾತಿಗಾಗಿ ಕಳೆದ ಜು. 5 ರಂದು ಸಚಿವ ಸಂಪುಟದ ಉಪ ಸಮಿತಿ ಅಧ್ಯಕ್ಷನಾಗಿ ನನ್ನನ್ನು ನೇಮಕ ಮಾಡಲಾಗಿತ್ತು. ಅದರ ಭಾಗವಾಗಿ ಆ. 8 ರಂದು ಸಮಿತಿಯು ವರದಿ ಪೂರ್ಣಗೊಳಿಸಿ ಆ.12ಕ್ಕೆ ಮುಖ್ಯಮಂತ್ರಿಗಳಿಗೆ ಸಲ್ಲಿಸಲಾಯಿತು. ಆ.14 ರಂದು ಸಚಿವ ಸಂಪುಟ ಸಭೆಯಲ್ಲಿ ವರದಿ ಯಥಾವತ್ತಾಗಿ ಸ್ವೀಕರಿಸಲಾಯಿತು. ಮುಂದುವರಿದು ಈಗ ಗೆಜೆಟ್ ಪ್ರಕಟನೆಗೊಂಡು ಕಾನೂನು ಜಾರಿ ಆಗಿದೆ ಎಂದರು.

ಈ ವೇಳೆ ಇಂಧನ ಸಚಿವ ಕೆ.ಜೆ. ಜಾರ್ಜ್, ಶಾಸಕ ಜಿ.ಎಸ್. ಪಾಟೀಲ, ಮಾಜಿ ಶಾಸಕ ಡಿ ಆರ್ ಪಾಟೀಲ, ಬಿ.ಬಿ. ಅಸೂಟಿ ಇತರರು ಇದ್ದರು.

# ಅತಿಯಾದ ಆತ್ಮವಿಶ್ವಾಸದಿಂದ ಕೆಲವೊಮ್ಮೆ ಸಿಗುವ ಅವಕಾಶ ಕಳೆದುಕೊಳ್ಳಬೇಕಾಗುತ್ತದೆ : ನ್ಯಾ. ರೋಣ್ ವಾಸುದೇವ್

**ಚಿತ್ರದುರ್ಗ :** ಅತಿಯಾದ ಆತ್ಮವಿಶ್ವಾಸದಿಂದ ಕೆಲವೊಮ್ಮೆ ಸಿಗುವ ಅವಕಾಶವನ್ನು ಕಳೆದುಕೊಳ್ಳಬೇಕಾಗುತ್ತದೆ. ಹಾಗಾಗಿ ತರಬೇತಿ ಎಲ್ಲರಿಗೂ ಅತ್ಯವಶ್ಯಕ ಎಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ರೋಣ್ ವಾಸುದೇವ್ ತಿಳಿಸಿದರು.



ವಕೀಲರ ಸಂಘದಿಂದ ಸಿವಿಲ್ ನ್ಯಾಯಾಧೀಶರ ಪರೀಕ್ಷಾರ್ಥಿಗಳಿಗೆ ನ್ಯಾಯಾಧೀಶರುಗಳಿಂದ ಹಾಗೂ ಹಿರಿಯ ವಕೀಲರುಗಳಿಂದ ವಕೀಲರ ಭವನದಲ್ಲಿ ಹಮ್ಮಿಕೊಳ್ಳಲಾಗಿರುವ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

850 ವಕೀಲರುಗಳಲ್ಲಿ ನಾಲ್ಕು ನೂರು ಯುವ ವಕೀಲರುಗಳಿದ್ದಾರೆ. ನೇಪಾಳದಲ್ಲಿ ಆಗಿರುವ ಘಟನೆಯನ್ನು ನೋಡಿ–ದರೆ ಯುವ ಶಕ್ತಿಯ ಗಟ್ಟಿತನ ಎಂತಹದ್ದು, ಎನ್ನುವುದು ಗೊತ್ತಾಗುತ್ತದೆ. ಎಂತಹ ಸರ್ಕಾರವನ್ನಾದರೂ ಕಿತ್ತು ಹಾಕಬಹುದು. ನಿಮ್ಮಲ್ಲಿರುವ ಶಕ್ತಿಯನ್ನು ಸದ್ಬಳಕೆ ಮಾಡಿಕೊಂಡರೆ ಸುಂದರ ದೇಶ ಕಟ್ಟಬಹುದು. ನ್ಯಾಯಾಧೀಶರ ಪರೀಕ್ಷಾರ್ಥಿಗಳಿಗೆ ತರಬೇತಿ ಅಗತ್ಯವೇ ಎನ್ನುವ ಪ್ರಶ್ನೆ ಎಲ್ಲರಲ್ಲೂ ಮೂಡಬಹುದು. ಉಪ ರಾಷ್ಟ್ರಪತಿ ಚುನಾವಣೆಯಲ್ಲಿ ಹೇಗೆ ಮತಚಲಾಯಿಸಬೇಕೆಂದು ಲೋಕಸಭೆ ಹಾಗೂ ರಾಜ್ಯಸಭೆ ಚುನಾಯಿತ ಪ್ರತಿನಿಧಿಗಳಿಗೆ ತರಬೇತಿ ಹಮ್ಮಿಕೊಳ್ಳಲಾಗಿತ್ತು. ಆದಾಗ್ಯೂ ಹದಿನೈದು ಮತಗಳು ತಿರಸ್ಕೃತಗೊಂಡಿರುವುದು ಮನಸ್ಸಿಗೆ ನೋವುಂಟು ಮಾಡುತ್ತದೆ. ಪ್ರತಿ ಮತಕ್ಕೂ ಬೆಲೆಯಿದೆ. ತರಬೇತಿ ಪಡೆದು ಪರೀ–ಕ್ಷೆಗೆ ಸಿದ್ದರಾಗದಿದ್ದರೆ ಉತ್ತೀರ್ಣರಾಗುವುದು ಕಷ್ಟವಾಗುತ್ತದೆ ಎಂದು ಹೇಳಿದರು.

ನನ್ನನ್ನು ಸೇರಿಕೊಂಡು ಚಿತ್ರದುಗ–ರ್ ನ್ಯಾಯಾಲಯದಲ್ಲಿ ಹನ್ನೊಂದು ನ್ಯಾಯಾಧೀಶರುಗಳು ಸೇವೆ ಸಲ್ಲಿಸುತ್ತಿದ್ದೇವೆ. ನಮಗೆ ಗೊತ್ತಿರುವ ವಿಷಯವನ್ನು ತರಬೇತಿಯಲ್ಲಿ ನಿಮ್ಮ ಜೊತೆ ಹಂಚಿಕೊಳ್ಳುತ್ತೇವೆ. ಜಿಲ್ಲೆಯಿಂದ ಹೆಚ್ಚಿನ ನ್ಯಾಯಾಧೀಶರುಗಳು ನ್ಯಾಯಾಂಗ ಇಲಾಖೆಗೆ ಬರಬೇಕು. ಮೂರು ಹಂತದಲ್ಲಿ ಪರೀಕ್ಷೆಗಳು ನಡೆಯುತ್ತವೆ. ಕಾನೂನು ವಿಷಯಗಳ ತರಬೇತಿ ಜೊತೆ ಗಣಕಯಂತ್ರಗಳ ಬಗ್ಗೆಯೂ ನೀವುಗಳು ತಿಳಿದುಕೊಂಡಿದ್ದರೆ ಒಳ್ಳೆಯದು. ತರಬೇತಿಯಲ್ಲಿ ಭಾಗವಹಿಸಿ ಜ್ಞಾನ ಪಡೆದುಕೊಂಡರೆ ಪರೀಕ್ಷೆಗಷ್ಟೆ ಅಲ್ಲ. ವೃತ್ತಿಗೂ ಸಹಾಯವಾಗಲಿದೆ ಎಂದರು.

ನ್ಯಾಯಾಲಯದ ಕಾರ್ಯಕಲಾಪಗಳಲ್ಲಿ ಭಾಗವಹಿಸಿ ವಾದ–ವಿವಾದಗಳನ್ನು ವೀಕ್ಷಿಸಿ ಎಂದು ಕಿರಿಯ ವಕೀಲರುಗಳಿಗೆ ಸೂಚಿಸಿದ ನ್ಯಾಯಾಧೀಶರಾದ ರೋಣ್‌ವಾಸುದೇವ್ ನ್ಯಾಯಾಂಗ ಇಲಾಖೆಗೆ ತನ್ನದೆ ಆದ ಗೌರವವಿದೆ. ಸುಪ್ರೀಂಕೋರ್ಟ್ ಮಾರ್ಗದರ್ಶನದಂತೆ ನಡೆದುಕೊಳ್ಳಬೇಕು. ಅಶಿಸ್ತಿನಿಂದ ವರ್ತಿಸುವುದು ಸರಿಯಲ್ಲ ಎಂದು ನುಡಿದರು.

ವಕೀಲರ ಸಂಘದ ಅಧ್ಯಕ್ಷ ಹೆಚ್. ಎಸ್.ಮಹೇಶ್ವರಪ್ಪ ಮಾತನಾಡಿ ಎಪ್ಪತ್ತು ಯುವ ವಕೀಲರುಗಳು ಪರೀಕ್ಷೆ ತೆಗೆದುಕೊಂಡಿದ್ದೀರಿ. ಸಂಘದಿಂದ ಬೇಕಾದ ಎಲ್ಲಾ ರೀತಿಯ ಸಹಕಾರ ನೀಡಲು ಸಿದ್ದರಿದ್ದೇವೆ. ಒಮ್ಮೆ ಪರೀಕ್ಷೆಯಲ್ಲಿ ಫೇಲಾದೆವೆಂದು ಹಿಂದೆ ಸರಿಯುವುದು ಬೇಡ. ಸತತ ಪ್ರಯತ್ನದಿಂದ ಯಶಸ್ಸು ಕಾಣಬಹುದು. ವಕೀಲರ ಸಂಘದ ಚುನಾವಣೆಯಲ್ಲಿ ಎರಡು ಬಾರಿ ಸೋತಿದ್ದ ನಾನು ಎದೆಗುಂದದೆ ಮೂರನೇ ಸಾರಿ ಸ್ಪರ್ಧಿಸಿ ಗೆದ್ದಿದ್ದೇನೆ. ಗಣಕಯಂತ್ರಗಳ ಬಗ್ಗೆಯೂ ತರಬೇತಿ ನೀಡುವ ಕುರಿತು ಸಂಘದಲ್ಲಿ ಚರ್ಚಿಸುತ್ತೇನೆ. ಗುರಿ–ಆಸೆ, ಆಮಿಷ ದೊಡ್ಡದಿರಬೇಕೆಂದು ಪರೀಕ್ಷಾರ್ಥಿಗಳಿಗೆ ಸಲಹೆ ನೀಡಿದರು.

1ನೇ ಹೆಚ್ಚುವರಿ ನ್ಯಾಯಾಧೀಶರಾದ ವೀರಣ್ಣ ಸೋಮಶೇಖರ್, ಎರಡನೆ ಹೆಚ್ಚುವರಿ ನ್ಯಾಯಾಧೀಶರಾದ ಗಂಗಾಧರ್ ಅಡಪದ್, ಹಿರಿಯ ಸಿವಿಲ್ ನ್ಯಾಯಾಧೀಶರಾದ ಮಮತ ಡಿ. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಒಂದನೆ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಚೈತ್ರ ಎಂ. ಎರಡನೆ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಉಜ್ವಲ ವೀರಣ್ಣ ಸಿದ್ದಣ್ಣನವರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಕಿರಿಯ ವಿಭಾಗದ ರಶ್ಮಿ ಎಸ್.ಮರಡಿ, ಒಂದನೆ ಅಪರ ಸಿವಿಲ್ ನ್ಯಾಯಾಧೀಶರಾದ ಪೂಜಾ ಬೆಳಕೇರಿ, ಎರಡನೆ ಅಪರ ಸಿವಿಲ್ ನ್ಯಾಯಾಧೀಶರಾದ ನಿಖಿತ ಎಸ್.ಅಕ್ಕಿ, ಮೂರನೆ ಅಪರ ಸಿವಿಲ್ ನ್ಯಾಯಾಧೀಶರಾದ ಸಹನ ಆರ್.

ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಹೆಚ್.ಓ.ಜಗದೀಶ್ ಗುಂಡೇರಿ, ಉಪಾಧ್ಯಕ್ಷೆ ಸಾವಿತ್ರಮ್ಮ, ಖಜಾಂಚಿ ಸೋಮಶೇಖರ್‌ರೆಡ್ಡಿ, ಸಹ ಕಾರ್ಯದರ್ಶಿ ಹೆಚ್.ಟಿ.ಕಾಂತರಾಜು ಇವರುಗಳು ವೇದಿಕೆಯಲ್ಲಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**